19 June 2026 Friday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ಬದುಕಿನಲ್ಲಿ ತಾಳ್ಮೆಯಿಂದ ಇರುವುದು ಅಷ್ಟು ಸುಲಭವಲ್ಲ! ಮಾತನಾಡುವುದು ಸುಲಭ, ಮೌನವಾಗಿರುವುದು ಅಷ್ಟೇ ಕಷ್ಟ!

▸▸ ಸ್ನೇಹಾ ಆನಂದ್

info.varthaman@gmail.com



ಮಡಿಕೇರಿ: ಗಾಜಿನ ಸೇತುವೆಗೆ ಜಿಲ್ಲಾಧಿಕಾರಿ ಭೇಟಿ — ಪುಟ ಸಂ. 2



ಕಾನೂನು ಕಾಲೇಜು ಸ್ಥಾಪನೆಗೆ ದಿ.ಧ್ರುವ ನಾರಾಯಣ್ ಶ್ರಮ ಬಹಳ — ಪುಟ ಸಂ. 3



ಮೈಸೂರು ವಾರಿಯರ್ಸ್ ತಂಡ ಘೋಷಣೆ: ಜೂ.20 ರಿಂದ ಮಹಾರಾಜ ಟ್ರೋಫಿ — ಪುಟ ಸಂ. 4

9742504916 | ಮೈಸೂರು | ಮಂಡ್ಯ | ಬೆಂಗಳೂರು | ಹಾಸನ | ಚಾಮರಾಜನಗರ | ರಾಮನಗರ | ಬೆಂಗಳೂರು | ಗ್ರಾಮಾಂತರ ಕೊಡಗು | ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN | Volume: 69 | Issue: 202 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

## ಮಂಡ್ಯ ಮೇಡಂಗೂ ಟೋಪಿ!

**ಬಿಜೆಪಿ ವಿರುದ್ಧವೇ ಎಚ್.ಡಿ.ರೇವಣ್ಣ ವಾಗ್ದಾಳಿ**

**ಬೆಂಗಳೂರು:** ಜೆಡಿಎಸ್ ಶಾಸಕ ಎಚ್.ಡಿ ರೇವಣ್ಣ ಅವರು ಮೈತ್ರಿ ಪಕ್ಷ ಬಿಜೆಪಿ ವಿರುದ್ಧವೇ ವಾಗ್ದಾಳಿ ನಡೆಸುವ ಮೂಲಕ ಅಚ್ಚರಿ ಮೂಡಿಸಿದ್ದಾರೆ.

ವಿಧಾನ ಪರಿಷತ್ ಚುನಾವಣೆಯಲ್ಲಿ ಗುರುವಾರ ಜೆಡಿಎಸ್ ಪಕ್ಷದ ವತಿಯಿಂದ ಎಚ್.ಡಿ ರೇವಣ್ಣ ಮತ ಚಲಾಯಿಸಿದರು. ಬಳಿಕ ಮಾತನಾಡಿದ ಅವರು, ತಮ್ಮ ಮೈತ್ರಿ ಪಕ್ಷ ಬಿಜೆಪಿ ವಿರುದ್ಧ ಕಿಡಿಕಾರಿದರು.

ಎಚ್.ಡಿ.ದೇವೇಗೌಡ ಅವರು ಪ್ರಧಾನಿ ಹುದ್ದೆಯನ್ನು ತೊರೆದು ಬಂದಿದ್ದಾರೆ. ಇನ್ನು ಈ ರಾಜ್ಯಸಭಾ ಸ್ಥಾನಕ್ಕಾಗಿ ಇನ್ನೊಬ್ಬರ ಮನೆ ಮುಂದೆ ಹೋಗಿ ಬೇಡಿಕೊಳ್ಳುತ್ತಾರಾ? ಮೊದಲು ಬಿಜೆಪಿಗರು ದೇವೇಗೌಡರು ಮತ್ತು ಸದಾನಂದ ಗೌಡ ಹೆಸರನ್ನು ಹೇಳಿದ್ದರು. ನಂತರ ಮಂಡ್ಯ ಮೇಡಂ ಹೆಸರನ್ನು ಹೇಳಿದರು. ಸುಮಲತಾ ಅವರಿಗಾದರೂ ಟಿಕೆಟ್ ಕೊಟ್ಟಿದ್ದರೇ ತಮ್ಮ ತಕರಾರು ಇರುತ್ತಿರಲಿಲ್ಲ. ನಮ್ಮವರು ಯಾರೋ ಒಬ್ಬರು ಇದ್ದಾರೆ ಅಂತ ಪುಟ 2ಕ್ಕೆ



## ಯತ್ನಾಳ್ ಮತ ಅಸಿಂಧುಗೆ ಕಾಂಗ್ರೆಸ್ ಮನವಿ ತಿರಸ್ಕಾರ

**ಬೆಂಗಳೂರು:** ಬಿಜೆಪಿ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಮತವನ್ನು ಅಸಿಂಧು ಗೊಳಿಸಬೇಕೆಂಬ ಕಾಂಗ್ರೆಸ್ ಆಕ್ಷೇಪವನ್ನು ಚುನಾವಣಾಧಿಕಾರಿಗಳು ತಿರಸ್ಕರಿಸಿದರು.

ಮತಗಟ್ಟೆಯೊಳಗೆ ಯಾವುದೇ ನಿಯಮ ಉಲ್ಲಂಘನೆ ಆಗಿಲ್ಲ ಎಂದು ಹೇಳಿ ಚುನಾವಣಾಧಿಕಾರಿ ಕಾಂಗ್ರೆಸ್ ಆಕ್ಷೇಪವನ್ನ ತಿರಸ್ಕರಿಸಿದ್ದಾರೆ.

ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಅವರಿಗೆ ಬಹಿರಂಗವಾಗಿ ಪತ್ರ ಹಾಕಿರುವುದಾಗಿ ಹೇಳಿದ್ದರು. ಯತ್ನಾಳ್ ರೂಲ್ 39 ಉಲ್ಲಂಘನೆ ಮಾಡಿದ್ದಾರೆ. ಅವರ ಮತವನ್ನ ಅಸಿಂಧುಗೊಳಿಸುವಂತೆ ಒತ್ತಾಯಿಸಿತ್ತು. ಆದರೆ ಯಾವುದೇ ನಿಯಮ ಉಲ್ಲಂಘನೆ ಆಗಿಲ್ಲ ಎಂದಿರುವ ಚುನಾವಣಾಧಿಕಾರಿ ಕಾಂಗ್ರೆಸ್ ಆಕ್ಷೇಪವನ್ನ ತಿರಸ್ಕರಿಸಿದರು.

## ಬಿಜೆಪಿಗೆ ಮತ ನೈತಿಕ ಕರ್ತವ್ಯ: ಅಧ್ಯಕ್ಷ ನಬಿನ್‌ಗೆ ಯತ್ನಾಳ್ ಪತ್ರ

**ಬೆಂಗಳೂರು:** ನಾನು ಬಿಜೆಪಿಯ ಚಿಹ್ನೆಯಿಂದ ಆಯ್ಕೆಯಾಗಿರುವುದರಿಂದ ಬಿಜೆಪಿಗೆ ಮತ ಹಾಕುವುದು ನನ್ನ ನೈತಿಕ ಕರ್ತವ್ಯ. ಈ ನನ್ನ ನಿರ್ಧಾರ ಪಕ್ಷಕ್ಕೆ ಮರಳಿ ಸೇರುವ ತಂತ್ರವಲ್ಲ. ಬದಲಾಗಿ ರಾಜಕೀಯ ನೈತಿಕತೆಯ ಆಧಾರದ ಮೇಲೆ ತೆಗೆದುಕೊಂಡ ನಿರ್ಧಾರ ಎಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ತಿಳಿಸಿದ್ದಾರೆ.

ವಿಧಾನ ಪರಿಷತ್ ಚುನಾವಣೆಗೆ ಮುನ್ನ ಬಿಜೆಪಿ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರು ತಮ್ಮ ರಾಜಕೀಯ ನಿಲುವಿನ ಕುರಿತು ಸ್ಪಷ್ಟನೆ ನೀಡಿ ಬಿಜೆಪಿ ರಾಷ್ಟ್ರಾಧ್ಯಕ್ಷ ನಿತಿನ್ ನಬಿನ್ ಅವರಿಗೆ ಪತ್ರ ಬರೆದಿದ್ದಾರೆ. ನಾನು ಬಂಡಾಯಗಾರನೂ ಅಲ್ಲ, ವಿರೋಧಿಯೂ ಅಲ್ಲ ಎಂದು ಹೇಳಿದ್ದಾರೆ.

ಕರ್ನಾಟಕ ವಿಧಾನ ಪರಿಷತ್ ಚುನಾವಣೆಗೆ ಸಂಬಂಧಿಸಿದಂತೆ ತಮ್ಮ ನಿಲುವನ್ನು ಸ್ಪಷ್ಟಪಡಿಸಲು ಬಿಜೆಪಿ ನಾಯಕ ನಿತಿನ್ ನಬಿನ್ ಅವರಿಗೆ ಪತ್ರ ಬರೆದಿರುವುದಾಗಿ ಯತ್ನಾಳ್ ಹೇಳಿದ್ದಾರೆ. ವಿಜಯಪುರದಿಂದ ಜನರ ಆಶೀರ್ವಾದದಿಂದ ಆಯ್ಕೆಯಾಗಿರುವುದರಿಂದ ನಾನು ಯಾವುದೇ ರೀತಿಯ



ವಿರೋಧಿಯೂ ಅಲ್ಲ. ಬಂಡಾಯಗಾರನೂ ಅಲ್ಲ ಎಂದು ಅವರು ತಿಳಿಸಿದ್ದಾರೆ.

ಕಳೆದ ವರ್ಷ ಮಾರ್ಚ್‌ನಲ್ಲಿ ಶಿಸ್ತಿನ ನಿರಂತರ ಉಲ್ಲಂಘನೆಗಳ ಕಾರಣ ಯತ್ನಾಳ್ ಅವರನ್ನು ಬಿಜೆಪಿ ಆರು ವರ್ಷಗಳ ಕಾಲ ಪಕ್ಷದಿಂದ ಉಚ್ಚಾಟಿಸಿತ್ತು. ಪಕ್ಷದ ಕೇಂದ್ರ ಶಿಸ್ತು ಸಮಿತಿ ಹಿಂದಿನ ಎಚ್ಚರಿಕೆಗಳಿದ್ದರೂ ಅವರು ಪಕ್ಷದ ನಿಯಮಗಳನ್ನು ಪಾಲಿಸಿಲ್ಲ ಎಂದು ಹೇಳಿತ್ತು.

## ಟೋಲ್ ವಿರೋಧಿಸಿ 23ರಂದು ಪ್ರತಿಭಟನೆ

**ಮಂಡ್ಯ:** ರಾಜ್ಯದ ಹೆದ್ದಾರಿಗಳಲ್ಲಿ ಟೋಲ್ ಸಂಗ್ರಹ ವಿರೋಧಿಸಿ ಮತ್ತು ರೈತರ ವಾಹನಗಳಿಗೆ ಟೋಲ್‌ನಿಂದ ವಿನಾಯಿತಿ ನೀಡಬೇಕೆಂದು ಆಗ್ರಹಿಸಿ ಜೂನ್ 23ರಂದು ರಾಜ್ಯಾದ್ಯಂತ ಟೋಲ್ ಬೂತ್‌ಗಳ ಮುಂದೆ ಬೃಹತ್ ಪ್ರತಿಭಟನೆ ನಡೆಸಲು ಕರ್ನಾಟಕ ರಾಜ್ಯ ರೈತ ಸಂಘ ಕರೆ ನೀಡಿದೆ.

ರಾಜ್ಯ ಕಬ್ಬು ಬೆಳೆಗಾರರ ಸಂಘದ ನೇತೃತ್ವದಲ್ಲಿ ಈ ಹೋರಾಟ ನಡೆಯಲಿದೆ ಎಂದು ಅಧ್ಯಕ್ಷ ಕುರುಬೂರು ಶಾಂತಕುಮಾರ್ ತಿಳಿಸಿದ್ದಾರೆ.

ಕಬ್ಬು, ತರಕಾರಿ ಮತ್ತು ಹಣ್ಣು ಸಾಗಿಸುವ ಕೃಷಿ ವಾಹನಗಳ ಮೇಲೆ ಟೋಲ್ ವಿಧಿಸುವುದರಿಂದ ರೈತರ ಮೇಲೆ ತೀವ್ರ ಆರ್ಥಿಕ ಹೊರೆ ಬೀಳುತ್ತಿದೆ. ಕೂಡಲೇ ಇಂತಹ ವಾಹನಗಳಿಗೆ ಟೋಲ್ ಸುಂಕದಿಂದ ವಿನಾಯಿತಿ ನೀಡಬೇಕು ಎಂದು ಒತ್ತಾಯಿಸಿದ್ದಾರೆ.



# ಕೈಗೆ ಪಂಚ ಗೆಲುವು: 'ದಳಪತಿ'ಗೆ ಶಾಕ್

## ಕಾಂಗ್ರೆಸ್‌ಗೆ 11 ಹೆಚ್ಚುವರಿ ಮತ | ಬಿಜೆಪಿಯ 4, ಜೆಡಿಎಸ್‌ನ 7 ಶಾಸಕರ ಅಡ್ಡ ಮತ

**ಬೆಂಗಳೂರು:** ವಿಧಾನ ಪರಿಷತ್ ಚುನಾವಣೆಯಲ್ಲಿ ಅಚ್ಚರಿಯ ಫಲಿತಾಂಶ ಬಂದಿದೆ. ಕಾಂಗ್ರೆಸ್ ನ ಎಲ್ಲಾ 5 ಅಭ್ಯರ್ಥಿಗಳು ಗೆಲುವು ಸಾಧಿಸಿದ್ದಾರೆ. ಜೆಡಿಎಸ್ ಅಭ್ಯರ್ಥಿ ಗೋವಿಂದರಾಜು ಕೇವಲ 14 ಮತಗಳನ್ನು ಪಡೆಯುವ ಮೂಲಕ ಹೀನಾಯ ಸೋಲು ಕಂಡಿದ್ದಾರೆ. ಹೀಗಾಗಿ ದಳಪತಿಗಳಿಗೆ ಮುಖಭಂಗವಾಗಿದೆ.

ಕಾಂಗ್ರೆಸ್‌ನ ಐದನೇ ಅಭ್ಯರ್ಥಿ ವಿನಯ್ ಕಾರ್ತಿಕ್ 32 ಮತಗಳನ್ನು ಪಡೆಯುವ ಮೂಲಕ ಭರ್ಜರಿ ಜಯ ಸಾಧಿಸಿದ್ದಾರೆ.

ಅಡ್ಡಮತದ ಪರಿಣಾಮ ಮೈತ್ರಿ ಅಭ್ಯರ್ಥಿ ಗೋವಿಂದರಾಜು ಸೋಲು ಅನುಭವಿಸಿದ್ದಾರೆ.

ವಿಧಾನ ಪರಿಷತ್ ಚುನಾವಣೆಯಲ್ಲಿ ಒಂದು ಸ್ಥಾನಕ್ಕಾಗಿ ಕಾಂಗ್ರೆಸ್ ಮತ್ತು ಬಿಜೆಪಿ–ಜೆಡಿಎಸ್ ಮೈತ್ರಿ ನಡುವೆ ತೀವ್ರ ಪೈಪೋಟಿ ಏರ್ಪಟ್ಟಿತ್ತು. ಆದರೆ, ಫಲಿತಾಂಶದಲ್ಲಿ ಮೈತ್ರಿಗೆ ಶಾಕ್ ಆಗಿದೆ. ದಾಖಲೆಯ ಅಡ್ಡ ಮತದಾನ ನಡೆದಿದೆ.


5ನೇ ಅಭ್ಯರ್ಥಿಯಾಗಿ ಕಾಂಗ್ರೆಸ್‌ನಿಂದ ಸ್ಪರ್ಧಿಸಿದ್ದ ವಿನಯ್ ಕಾರ್ತಿಕ್‌ಗೆ 32 ಮತಗಳು ಬಿದ್ದಿವೆ. ನಿರೀಕ್ಷೆಗಿಂತ ಹೆಚ್ಚು ಮತಗಳು ಬಂದು ಕಾಂಗ್ರೆಸ್ ಅಭ್ಯರ್ಥಿ ಗೆದ್ದಿದ್ದಾರೆ. ಆದರೆ, ಗೋವಿಂದರಾಜುಗೆ ಕೇವಲ 14 ಮತಗಳು ಸಿಕ್ಕಿವೆ. ಬಿಜೆಪಿಯಿಂದ 4 ಮತ್ತು ಜೆಡಿಎಸ್‌ನಿಂದ 7 ಕ್ರಾಸ್ ವೋಟಿಂಗ್ ಆಗಿದೆ ಎನ್ನಲಾಗಿದೆ. ಈ ಎರಡೂ ಪಕ್ಷಗಳ ಮತ ಗಳಿಸುವಲ್ಲಿ ಕಾಂಗ್ರೆಸ್ ಯಶಸ್ವಿಯಾಗಿದೆ.

ಕಾಂಗ್ರೆಸ್‌ನ ಐವರು ಮತ್ತು ಬಿಜೆಪಿಯ ಇಬ್ಬರು ಅಭ್ಯರ್ಥಿಗಳು ಗೆಲುವು ಸಾಧಿಸಿದ್ದಾರೆ. ಮೈತ್ರಿ ಅಭ್ಯರ್ಥಿಯಾಗಿ ಕಣಕ್ಕಿಳಿದಿದ್ದ ಜೆಡಿಎಸ್‌ನ ಗೋವಿಂದರಾಜು ಸೋಲನುಭವಿಸಿದ್ದಾರೆ. ಪುಟ 2ಕ್ಕೆ



### ಅಡ್ಡ ಮತದಾನ ಸಾಬೀತು ಮಾಡಿ: ಜಿಟಿಡಿ ಸವಾಲು!

**ಬೆಂಗಳೂರು:** ವಿಧಾನ ಪರಿಷತ್ ಚುನಾವಣೆಯಲ್ಲಿ ಜೆಡಿಎಸ್ ಶಾಸಕ ಜಿ.ಟಿ. ದೇವೇಗೌಡ ಅವರು ಬುಧವಾರ ಬೆಳಗ್ಗೆ ಒಬ್ಬರೇ ಬಂದು ಮತ ಚಲಾಯಿಸಿದರು.



ಅವರು ಮತ ಚಲಾಯಿಸಿ ಹೋದ ನಂತರ ಜಿಟಿ ದೇವೇಗೌಡ ಅವರು ಅಡ್ಡ ಮತದಾನ ಮಾಡಿದ್ದಾರೆ ಎನ್ನುವ ಸುದ್ದಿ ಹರಿಡಿತ್ತು. ಇದಕ್ಕೆ ಸ್ಪಷ್ಟನೆ ನೀಡಿದ ಜಿ.ಟಿ ಪುಟ 2ಕ್ಕೆ

### ಅನುಮಾನ ಅನಗತ್ಯ: ಹರೀಶ್‌ಗೌಡ ಬೆಂಬಲ

ಜಿ.ಟಿ.ದೇವೇಗೌಡ ಅವರು ಎನ್‌ಡಿಎ ಅಭ್ಯರ್ಥಿಗೆ ಮತ ಹಾಕಿರುವುದಾಗಿ ತಿಳಿಸಿದ್ದಾರೆ. ಹೀಗಾಗಿ ಅನುಮಾನ ಅನಗತ್ಯ. ಜಿ.ಟಿ.ದೇವೇಗೌಡ ಅವರ ಬಗ್ಗೆ ಅನುಮಾನ ವ್ಯಕ್ತಪಡಿಸುವ ಅಗತ್ಯವಿಲ್ಲ ಅನ್ನೋದು ನನ್ನ ಭಾವನೆ. ಜಿ.ಟಿ. ದೇವೇಗೌಡರ ಜೊತೆ ವರಿಷ್ಠರು ಚರ್ಚೆ ಮಾಡಿದ್ದಾರೆ ಎಂದು ಅವರ ಪುತ್ರ ಶಾಸಕ ಹರೀಶ್ ಗೌಡ ಹೇಳಿದರು.

### ಗೆದ್ದ ಕಾಂಗ್ರೆಸ್ ಅಭ್ಯರ್ಥಿಗಳು

- ಬಿ.ಕೆ.ಹರಿಪ್ರಸಾದ್: ಪಡೆದ ಮತ 30
- ತಿಪ್ಪಣ್ಣಪ್ಪ ಕಮಕನೂರು: 30 ಮತ
- ಪಿ.ವಿ.ಮೋಹನ್: 29 ಮತ
- ಬಿ.ಎಸ್.ಶಿವಣ್ಣ: 30 ಮತ
- ವಿನಯ್ ಕಾರ್ತಿಕ್ (5ನೇ ಅಭ್ಯರ್ಥಿ): 32 ಮತ



### ಬಿಜೆಪಿ ಗೆದ್ದ ಅಭ್ಯರ್ಥಿಗಳು

- ಆರ್.ರಘು: 29 ಮತಗಳು
- ಅಂಗರಾಜು ಪಾಟೀಲ್: 27 ಮತ

### ಜೆಡಿಎಸ್ ಸೋತ ಅಭ್ಯರ್ಥಿ

- ಗೋವಿಂದರಾಜು: 14 ಮತ

### ಆತ್ಮಸಾಕ್ಷಿಗೆ ಮತ: ಹೆಬ್ಬಾರ್, ಎಸ್‌ಟಿಎಸ್

**ಬೆಂಗಳೂರು:** ವಿಧಾನ ಪರಿಷತ್ ಚುನಾವಣೆಯಲ್ಲಿ ತಾವು ಯಾವುದೇ ಪಕ್ಷದೊಂದಿಗೆ ಗುರುತಿಸಿಕೊಂಡಿಲ್ಲ. ನಮ್ಮ ಆತ್ಮಸಾಕ್ಷಿಗೆ ಅನುಗುಣವಾಗಿ ಮತ ಚಲಾಯಿಸಿದ್ದೇವೆ ಎಂದು ಬಿಜೆಪಿ ಉಚ್ಚಾಟಿತ ಶಾಸಕ ಶಿವರಾಮ್ ಹೆಬ್ಬಾರ್ ತಿಳಿಸಿದ್ದಾರೆ.

ಪರಿಷತ್ ಚುನಾವಣೆ ಮತದಾನದ ಬಳಿಕ ಗುರುವಾರ ಮಾತನಾಡಿದ ಅವರು, ವಿಧಾನ ಪರಿಷತ್ ಚುನಾವಣೆಯಲ್ಲಿ ಮತ ಹಾಕುವಂತೆ ಬಿಜೆಪಿ ನಾಯಕರು ನಮ್ಮನ್ನು ಕೇಳಿಲ್ಲ. ಜೆಡಿಎಸ್ ಮುಖಂಡರು ಕೂಡ ಸಂಪರ್ಕಿಸಿಲ್ಲ ಎಂದು ಶಿವರಾಮ್ ಹೆಬ್ಬಾರ್ ಹೇಳಿದರು.

ಆದರೆ, ಕಾಂಗ್ರೆಸ್ ನಾಯಕರು ಮತ ನೀಡುವಂತೆ ವಿನಂತಿಸಿದ್ದರು. ಹೀಗಾಗಿ, ನಾವು ಯಾವುದೇ ಪಕ್ಷದ ಚೌಕಟ್ಟಿಗೆ ಸಿಲುಕದೆ, ನಮ್ಮ ಪುಟ 2ಕ್ಕೆ


### ಟಿಎಂಸಿಗೆ ಮತ್ತೊಂದು ಶಾಕ್: ಬ್ಯಾಂಕ್ ಖಾತೆ ಸ್ಥಗಿತಕ್ಕೆ ಪತ್ರ

**ಕೋಲ್ಕತ್ತಾ:** ವಿಧಾನಸಭಾ ಚುನಾವಣೆಯಲ್ಲಿ ಹೀನಾಯ ಸೋಲಿನ ನಂತರ ತೃಣಮೂಲ ಕಾಂಗ್ರೆಸ್ ನಲ್ಲಿ ಆಂತರಿಕ ಬಿಕ್ಕಟ್ಟು ದಿನದಿಂದ ದಿನಕ್ಕೆ ತೀವ್ರ ಸ್ವರೂಪ ಪಡೆದುಕೊಳ್ಳುತ್ತಿದೆ. ಈಗ ಪಕ್ಷಕ್ಕೆ ಮತ್ತೊಂದು ಹೊಡೆತ ನೀಡಿರುವ ಟಿಎಂಸಿ ಮಾಜಿ ಖಜಾಂಚಿ ಅರೂಪ್ ಬಿಸ್ವಾಸ್ ಅವರು ಬ್ಯಾಂಕ್‌ಗೆ ಪತ್ರ ಬರೆದು ಪಕ್ಷದ ಖಾತೆಗಳನ್ನು ಫ್ರೀಜ್ ಮಾಡುವಂತೆ ಮನವಿ ಮಾಡಿದ್ದಾರೆ.

ಬ್ಯಾಂಕ್‌ಗೆ ಬರೆದ ಪತ್ರದಲ್ಲಿ, ಬಂಡಾಯ ಬಣವಾದ ತಾವೇ ಪಕ್ಷದ ಕಾನೂನುಬದ್ಧ ಪ್ರತಿನಿಧಿಗಳು ಮತ್ತು ಪದಾಧಿಕಾರಿಗಳು ಎಂದು ಪ್ರತಿಪಾದಿಸಿದ್ದಾರೆ. ಟಿಎಂಸಿ ಹೆಸರಿನಲ್ಲಿರುವ ಖಾತೆಗಳನ್ನು ನಿರ್ವಹಿಸಲು ನಿಜಕ್ಕೂ ಯಾರಿಗೆ ಅಧಿಕಾರವಿದೆ ಎಂಬ ಕುರಿತು ಅನಿಶ್ಚಿತತೆ ಉಂಟಾಗಿದೆ ಎಂದು ಬಿಸ್ವಾಸ್ ಹೇಳಿದ್ದಾರೆ. ಪುಟ 2ಕ್ಕೆ

### ರಸ್ತೆ ಅಭಿವೃದ್ಧಿಗೆ 2 ಸಾವಿರ ಕೋಟಿ: ಸಚಿವ ಕೃಷ್ಣ ಬೈರೇಗೌಡ

**ಬೆಂಗಳೂರು:** ಎರಡು ಸಾವಿರ ಕೋಟಿ ರೂ. ವೆಚ್ಚದಲ್ಲಿ ಬೆಂಗಳೂರಿನ ಐದು ಮಹಾನಗರ ಪಾಲಿಕೆ ವ್ಯಾಪ್ತಿಯ ರಸ್ತೆಗಳ ಮರು ಡಾಂಬರೀಕರಣ ಮಾಡಲಾಗುವುದು ಎಂದು ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರು ಗುರುವಾರ ತಿಳಿಸಿದರು.



ಜಿಬಿಎ ಕೇಂದ್ರ ಕಚೇರಿಯಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಬೆಂಗಳೂರಿನ ಐದು ವಲಯ ಆಯುಕ್ತರ ಜೊತೆಗೆ ಸಭೆ ಮಾಡಿದ್ದೇನೆ. ಬೆಂಗಳೂರಿನಲ್ಲಿ ರಸ್ತೆ ಸುಧಾರಣೆ ಮಾಡಬೇಕು ಅನ್ನೋ ಉದ್ದೇಶವಿದೆ ಎಂದರು.

### ವಚನಾನಂದ ಶ್ರೀ ಜಾಮೀನು ಪ್ರಶ್ನಿಸಿ ಅರ್ಜಿ: 30ಕ್ಕೆ ಆದೇಶ

**ದಾವಣಗೆರೆ:** ಹರಿಹರ ಪಂಚಮಸಾಲಿ ಗುರುಪೀಠದ ವಚನಾನಂದ ಸ್ವಾಮೀಜಿಗೆ ಪೋಕ್ಸೊ ಪ್ರಕರಣದಲ್ಲಿ ನೀಡಿರುವ ನಿರೀಕ್ಷಣಾ ಜಾಮೀನು ರದ್ದುಗೊಳಿಸುವಂತೆ ಕೋರಿ ಪೊಲೀಸರು ಸಲ್ಲಿಸಿದ ಅರ್ಜಿ ವಿಚಾರಣೆ ನಡೆಸಿದ ಜಿಲ್ಲಾ ವಿಶೇಷ ಪೋಕ್ಸೊ ನ್ಯಾಯಾಲಯ ಕಾಯ್ದಿರಿಸಿದ ಆದೇಶವನ್ನು 30ಕ್ಕೆ ಮುಂದೂಡಿದೆ. ಪುಟ 2ಕ್ಕೆ





### ಸಂಚಾರ ನಿಯಮ ಉಲ್ಲಂಘನೆ ದಂಡಕ್ಕೆ ಜೂ.21ರಿಂದ ಶೇ.50 ರಿಯಾಯಿತಿ ಜಾರಿ

**ಬೆಂಗಳೂರು:** ಸಂಚಾರ ನಿಯಮ ಉಲ್ಲಂಘನೆ ಪ್ರಕರಣಗಳಲ್ಲಿ ಬಾಕಿ ಉಳಿದಿರುವ ದಂಡಗಳನ್ನು ಪಾವತಿಸಲು ವಾಹನ ಮಾಲೀಕರಿಗೆ ರಾಜ್ಯ ಸಾರಿಗೆ ಇಲಾಖೆ ಸುವರ್ಣಾವಕಾಶ ನೀಡಿದೆ.

ಈ ಯೋಜನೆಯಡಿ 1991ರಿಂದ 2022 ರವರೆಗೆ ದಾಖಲಾಗಿರುವ 1.87 ಲಕ್ಷಕ್ಕೂ ಹೆಚ್ಚು ಡಿಪಾರ್ಟ್ಮೆಂಟ್ ಸ್ಟ್ಯಾಟ್ಯುಟರಿ ಆಕ್ಷನ್ ಪ್ರಕರಣಗಳು ಒಳಪಡಲಿವೆ. ಇದೇ ಜೂನ್ 21ರಿಂದ ಜುಲೈ 10ರವರೆಗೆ ಬಾಕಿ ಇರುವ ದಂಡದ ಮೊತ್ತದ ಮೇಲೆ ಶೇ.50ರಷ್ಟು ರಿಯಾಯಿತಿ ನೀಡುವ ವಿಶೇಷ ಯೋಜನೆ ಜಾರಿ ಆಗಲಿದೆ.

ಪರವಾನಗಿ ಷರತ್ತು ಉಲ್ಲಂಘನೆ, ಅವಧಿ ಮುಗಿದ ಅಥವಾ ಅಮಾನ್ಯ ಚಾಲನಾ ಪರವಾನಗಿ, ಫಿಟ್ನೆಸ್ ಸರ್ಟಿಫಿಕೇಟ್, ವಿಮೆ ಹಾಗೂ ಮಾಲಿನ್ಯ ಪರೀಕ್ಷಾ ಪ್ರಮಾಣಪತ್ರ ಸಂಬಂಧಿತ ಪ್ರಕರಣಗಳಿಗೆ ಈ ರಿಯಾಯಿತಿ ಅನ್ವಯವಾಗಲಿದೆ.




ಉಲ್ಲಂಘನೆ ನಡೆದ ಸಮಯದಲ್ಲಿ ಜಾರಿಯಲ್ಲಿದ್ದ ದಂಡದ ದರದ ಆಧಾರದ ಪುಟ 2ಕ್ಕೆ

### ಆರ್‌ಎಸ್‌ಎಸ್ ಬಗ್ಗೆ ಕಾಳಜಿ ಏಕೆ?: ಖರ್ಗೆಗೆ ಜಿಗಜಿಣಗಿ ಪ್ರಶ್ನೆ

**ವಿಜಯಪುರ:** ದಲಿತ ವ್ಯಕ್ತಿಯೊಬ್ಬರಿಗೆ ಆರ್‌ಎಸ್‌ಎಸ್ ಬಗ್ಗೆ ಇಲ್ಲ ಸಲ್ಲದ ಕಾಳಜಿ ಏಕೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಬಿಜೆಪಿ ಸಂಸದ ರಮೇಶ್ ಜಿಗಜಿಣಗಿ ಕಿಡಿಕಾರಿದರು.



ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆರ್‌ಎಸ್‌ಎಸ್ ವಿರುದ್ಧ ಹೋರಾಡಿದವರು ಬದುಕುಳಿದಿಲ್ಲ. ದಲಿತ ವ್ಯಕ್ತಿಯೊಬ್ಬರು ಆರ್‌ಎಸ್‌ಎಸ್ ಬಗ್ಗೆ ಏಕೆ ಕಾಳಜಿ ವಹಿಸಬೇಕು ಎಂದು ಪ್ರಶ್ನಿಸಿದ್ದಾರೆ. ಆರ್‌ಎಸ್‌ಎಸ್ ಅನ್ನು ನೋಂದಾಯಿಸುವುದರಿಂದ ನೀವು ಏನು ಸಾಧಿಸುತ್ತೀರಿ? ಅದು ಗೃಹ ಸಚಿವರ ಕೆಲಸವಲ್ಲ ಎಂದು ಹೇಳಿದರು.

ಪ್ರಿಯಾಂಕ್ ಖರ್ಗೆ ಅವರ ಸಾಮರ್ಥ್ಯದ ಬಗ್ಗೆ ಪ್ರಶ್ನಿಸಿದ ಸಂಸದರು, ಅವರ ತಂದೆ ಮಲ್ಲಿಕಾರ್ಜುನ ಖರ್ಗೆ ಕಾಂಗ್ರೆಸ್‌ನಲ್ಲಿ ದಶಕಗಳ ಕಾಲ ದುಡಿದಿದ್ದಾರೆ ಎಂಬ ಕಾರಣಕ್ಕೆ ಇವರಿಗೆ ಗೃಹ ಖಾತೆ ಪುಟ 2ಕ್ಕೆ

### ಮೈಸೂರು: ರೌಡಿ ನಿಗ್ರಹಕ್ಕೆ 'ಆಂಟಿ ರೌಡಿ ಸ್ಕ್ವಾಡ್' ಸಜ್ಜು

**ಮೈಸೂರು:** ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ರೌಡಿ ಆಸಾಮಿಗಳ ಚಟುವಟಿಕೆಗಳಿಗೆ ಬ್ರೇಕ್ ಹಾಕಲು ಹಾಗೂ ಸಾರ್ವಜನಿಕರ ಸುರಕ್ಷತೆಯನ್ನು ಕಾಯ್ದುಕೊಳ್ಳಲು ಮೈಸೂರು ನಗರ ಪೊಲೀಸ್ ಇಲಾಖೆಯು ಮಹತ್ವದ ಹೆಜ್ಜೆ ಇಟ್ಟಿದೆ. ನಗರದಾದ್ಯಂತ ರೌಡಿಗಳ ಮೇಲೆ ತೀವ್ರ ನಿಗಾ ವಹಿಸಿ, ಅವರ ಕಾನೂನುಬಾಹಿರ ಕೃತ್ಯಗಳನ್ನು ನಿಯಂತ್ರಿಸುವ ಸಲುವಾಗಿ ನಗರದ 4 ಉಪ ವಿಭಾಗಗಳು ಹಾಗೂ 18 ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲಿ ವಿಶೇಷ ರೌಡಿ ಪ್ರತಿಬಂಧಕ ದಳವನ್ನು (ಆಂಟಿ ರೌಡಿ ಸ್ಕ್ವಾಡ್) ಅಧಿಕೃತವಾಗಿ ರಚಿಸಲಾಗಿದೆ.

**108 ಸಿಬ್ಬಂದಿಯ ನಿಯೋಜನೆ ಮತ್ತು ಮೇಲುಸ್ತುವಾರಿ**

ನೂತನವಾಗಿ ಅಸ್ತಿತ್ವಕ್ಕೆ ಬಂದಿರುವ ಈ ರೌಡಿ ಪ್ರತಿಬಂಧಕ ದಳಗಳ ಕುರಿತು ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್ ಪುಟ 2ಕ್ಕೆ



# ಕಾವೇರಿಗೆ ವಿಜಯ್ ಹೊಸ ಕ್ಯಾತೆ

## ತಮಿಳುನಾಡಿಗೆ ಹೆಚ್ಚುವರಿ ನೀರು ಮಾತ್ರ | ಮೇಕೆದಾಟುಗೆ ಅಡ್ಡಗಾಲು

**ಚೆನ್ನೈ:** ಸುಪ್ರೀಂಕೋರ್ಟ್ ಆದೇಶದ ಅನ್ವಯ ಪ್ರತಿ ವರ್ಷ ನಿಗದಿತ ಪ್ರಮಾಣದಲ್ಲಿ ಕಾವೇರಿ ನೀರು ಹರಿಸಿದರೂ ಮುಖ್ಯಮಂತ್ರಿ ವಿಜಯ್ ನೇತೃತ್ವದ ತಮಿಳುನಾಡಿನ ಹೊಸ ಸರ್ಕಾರ ತಗಾದೆ ತೆಗೆದಿದೆ.

ಕರ್ನಾಟಕವು ತಮಿಳುನಾಡಿನ ನೀರಿನ ಪಾಲು ಹರಿಸುತ್ತಿಲ್ಲ. ಅದರ ಬದಲಿಗೆ ಕೇವಲ ಹೆಚ್ಚುವರಿ ನೀರನ್ನು ಮಾತ್ರ ಹರಿಸಲಾಗುತ್ತಿದೆ ಎಂದು ಆರೋಪಿಸಿದೆ.

ತಮಿಳುನಾಡಿನಲ್ಲಿ ಗುರುವಾರ ವಿಧಾನಸಭೆ ಅಧಿವೇಶನ ಆರಂಭವಾಗಿದೆ. ಜಂಟಿ ಅಧಿವೇಶನ ಉದ್ದೇಶಿಸಿ ರಾಜ್ಯಪಾಲರು ಭಾಷಣದಲ್ಲಿ ಕರ್ನಾಟಕದ ವಿರುದ್ಧ ತಮಿಳುನಾಡು ಸರ್ಕಾರ ಈ ಆರೋಪ ಮಾಡಿದೆ. ಈ ಮೂಲಕ ಕಾವೇರ ವಿವಾದವನ್ನು ಜೀವಂತಗೊಳಿಸಲು ತಮಿಳುನಾಡು ಮುಂದಾಗಿದೆ.



ತಮಿಳುನಾಡಿಗೆ ಅನಾದಿ ಕಾಲದಿಂದಲೂ ಕಾವೇರಿ ನೀರನ್ನು ಬಳಸುವ ಹಕ್ಕಿದೆ. ಸುಪ್ರೀಂ ಕೋರ್ಟ್‌ನಲ್ಲಿ ನಮ್ಮ ಹಕ್ಕು ಎತ್ತಿಹಿಡಿಯಲ್ಪಟ್ಟ ನಂತರವೂ ನೀರನ್ನು ಪಡೆಯಲು ಪ್ರತಿ ವರ್ಷವೂ ಹೋರಾಟ ನಡೆಸುತ್ತಿದ್ದೇವೆ. ಕರ್ನಾಟಕ ಸರ್ಕಾರ ನಮಗೆ ಸಿಗಬೇಕಾದ ನೀರನ್ನು ನೀಡುವ ಬದಲು, ಹೆಚ್ಚುವರಿ ನೀರನ್ನು ಮಾತ್ರ ತಮಿಳುನಾಡಿಗೆ ಬಿಡುಗಡೆ ಮಾಡುತ್ತಿದೆ.

ಈ ಪರಿಸ್ಥಿತಿಯಲ್ಲಿ, ಕರ್ನಾಟಕ ಸರ್ಕಾರವು ಮೇಕೆದಾಟು ಯೋಜನೆಯನ್ನು ಕಾರ್ಯಗತಗೊಳಿಸಲು ಪ್ರಯತ್ನಿಸುತ್ತಿದೆ. ಈ ಯೋಜನೆ ಜಾರಿಗೆ ಪುಟ 2ಕ್ಕೆ

### ಮೇಕೆದಾಟು ಕುಡಿಯುವ ನೀರಿಗೆ ಮಾತ್ರ: ಸಿಎಂ ಡಿಕೆಶಿ

**ಬೆಂಗಳೂರು:** ಮೇಕೆದಾಟು ದಕ್ಷಿಣ ಭಾರತದ ಹೃದಯದಂತ ಯೋಜನೆ. ಈ ಯೋಜನೆಯಲ್ಲಿ ಕರ್ನಾಟಕ ಹಾಗೂ ತಮಿಳುನಾಡಿನ ಹಿತ ಅಡಗಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು.

ವಿಧಾನಸೌಧದಲ್ಲಿ ವಿಧಾನ ಪರಿಷತ್ ಚುನಾವಣೆ ಮತದಾನದ ಬಳಿಕ ಮಾಧ್ಯಮಗಳ ಪ್ರಶ್ನೆಗಳಿಗೆ ಸಿಎಂ ಪ್ರತಿಕ್ರಿಯೆ ನೀಡಿದರು. ತಮಿಳುನಾಡು ಸರ್ಕಾರ ಪುಟ 2ಕ್ಕೆ

## ಮೊದಲ ಪುಟದಿಂದ

### 'ಆಂಟಿ ರೌಡಿ ಸ್ಕ್ವಾಡ್' ಸಜ್ಜು

ಅವರು ಮೊದಲ ಉನ್ನತ ಮಟ್ಟದ ಸಭೆ ನಡೆಸಿ ಸವಿಸ್ತಾರವಾದ ಮಾಹಿತಿ ನೀಡಿದರು. ನಗರದ ಪ್ರತಿಯೊಂದು ಉಪ ವಿಭಾಗ ಹಾಗೂ ಪೊಲೀಸ್ ಠಾಣೆಗಳಲ್ಲಿ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (ಪಿ.ಎಸ್.ಐ) ನೇತೃತ್ವದಲ್ಲಿ ಈ ವಿಶೇಷ ದಳಗಳು ಅತ್ಯಂತ ಸಕ್ರಿಯವಾಗಿ ಕಾರ್ಯನಿರ್ವಹಿಸಲಿವೆ. ಇಡೀ ನಗರದಲ್ಲಿ ಒಟ್ಟು 108 ದಕ್ಷ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಒಳಗೊಂಡ ಬಲಿಷ್ಠ ತಂಡವನ್ನು ಈ ಸ್ಕ್ವಾಡ್‌ಗಾಗಿ ನಿಯೋಜಿಸಲಾಗಿದೆ. ಈ ದಳಗಳ ದೈನಂದಿನ ಕಾರ್ಯಾಚರಣೆಯ ಸಂಪೂರ್ಣ ಮೇಲುಸ್ತುವಾರಿಯನ್ನು ಆಯಾ ವಿಭಾಗದ ಸಹಾಯಕ ಪೊಲೀಸ್ ಆಯುಕ್ತರು (ಎ.ಸಿ.ಪಿ) ಹಾಗೂ ಕಾನೂನು ಮತ್ತು ಸುವ್ಯವಸ್ಥೆ ವಿಭಾಗದ ಉಪ ಪೊಲೀಸ್ ಆಯುಕ್ತರು (ಡಿ.ಸಿ.ಪಿ) ಜಂಟಿಯಾಗಿ ವಹಿಸಿಕೊಳ್ಳಲಿದ್ದಾರೆ ಎಂದು ವಿವರಿಸಿದರು.

**ರೌಡಿ ಚಟುವಟಿಕೆಗಳ ವಿರುದ್ಧ ನಿರ್ದಾಕ್ಷಿಣ್ಯ ಕ್ರಮಕ್ಕೆ ಆದೇಶ**

ರೌಡಿ ಪ್ರತಿಬಂಧಕ ದಳದ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ಚೊಚ್ಚಲ ಸಭೆ ನಡೆಸಿದ ಆಯುಕ್ತರು, ಕರ್ತವ್ಯದ ವೇಳೆ ಕೈಗೊಳ್ಳಬೇಕಾದ ಕಟ್ಟುನಿಟ್ಟಿನ ಕ್ರಮಗಳ ಕುರಿತು ಸೂಕ್ತ ತಿಳುವಳಿಕೆ ಹಾಗೂ ಕಾರ್ಯತಂತ್ರದ ಮಾರ್ಗದರ್ಶನ ನೀಡಿದರು. ಸಮಾಜದ ಶಾಂತಿ ಹಾಗೂ ಸುವ್ಯವಸ್ಥೆಯನ್ನು ಕದಡುವ ರೌಡಿಗಳ ಚಟುವಟಿಕೆಗಳನ್ನು ಆರಂಭಿಕ ಹಂತದಲ್ಲೇ ಮಟ್ಟಹಾಕಲು ಸಿಬ್ಬಂದಿಗೆ ಸೂಚಿಸಲಾಯಿತು. ಮೈಸೂರು ನಗರದ ವ್ಯಾಪ್ತಿಯಲ್ಲಿ ಯಾವುದೇ ರೀತಿಯ ರೌಡಿಸಂ, ಸಾರ್ವಜನಿಕರಿಗೆ ಬೆದರಿಕೆ ಅಥವಾ ಕಾನೂನುಬಾಹಿರ ಕೃತ್ಯಗಳು ಕಂಡುಬಂದಲ್ಲಿ ಅವರ ವಿರುದ್ಧ ಯಾವುದೇ ಮುಲಾಜಿಲ್ಲದೆ ಅತ್ಯಂತ ಕಠಿಣ ಹಾಗೂ ನಿರ್ದಾಕ್ಷಿಣ್ಯ ಕಾನೂನಾತ್ಮಕ ಕ್ರಮಗಳನ್ನು ಜರುಗಿಸಲಾಗುವುದು ಎಂದು ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್ ಅವರು ಇದೇ ಸಂದರ್ಭದಲ್ಲಿ ತೀವ್ರ ಎಚ್ಚರಿಕೆ ನೀಡಿದ್ದಾರೆ.

### ಆತ್ಮಸಾಕ್ಷಿಗೆ ಮತ: ಹೆಬ್ಬಾರ್, ಎಸ್‌ಟಿಎಸ್

ಆತ್ಮಸಾಕ್ಷಿಗೆ ಅನುಗುಣವಾಗಿ ಮತ ಚಲಾಯಿಸಿದ್ದೇವೆ ಎಂದು ತಿಳಿಸಿದರು. ಬಿಜೆಪಿಯ ಮತ್ತೊಬ್ಬ ಉಚ್ಚಾಟಿತ ಶಾಸಕ ಎಸ್.ಟಿ.ಸೋಮಶೇಖರ್ ಹಾಗೂ ಶಿವರಾಮ್ ಹೆಬ್ಬಾರ್ ಅವರು ಕಾಂಗ್ರೆಸ್ ನಾಯಕ ಬಸವರಾಜ್ ರಾಯರಡ್ಡಿ ಜೊತೆಗೆ ತೆರಳಿ ಮತದಾನ ಮಾಡಿದರು. ಮತದಾನದ ಬಳಿಕ ಎಸ್.ಟಿ. ಸೋಮಶೇಖರ್ ಹಾಗೂ ಶಿವರಾಮ್ ಹೆಬ್ಬಾರ್ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಭೇಟಿ ಮಾಡಿದರು. ತಾವು ಯಾವುದೇ ನಿರ್ದಿಷ್ಟ ರಾಜಕೀಯ ಪಕ್ಷದ ಜೊತೆ ಗುರುತಿಸಿಕೊಂಡಿಲ್ಲ ಎಂದು ಹೇಳುವ ಮೂಲಕ ಹೆಬ್ಬಾರ್ ತಮ್ಮ ಮುಂದಿನ ರಾಜಕೀಯ ನಡೆಯನ್ನು ನಿಗೂಢವಾಗಿಟ್ಟಿದ್ದಾರೆ.

### ಅಡ್ಡ ಮತದಾನ ಸಾಬೀತು ಮಾಡಿ

ದೇವೇಗೌಡರು, ನನಗೆ ಆರೋಗ್ಯ ಸರಿ ಇರಲಿಲ್ಲ. ಹೀಗಾಗಿ ಬೇಗ ಹೋಗಿ ಮತ ಹಾಕಿ ಬಂದಿದ್ದೇನೆ. ಆತ್ಮಸಾಕ್ಷಿ ಮತ ಹಾಕಿದ್ದೇನೆ. ನಮ್ಮ ಪಕ್ಷದ ಅಭ್ಯರ್ಥಿ ಗೆಲ್ತಾರೆ. ಯಾರೋ ಅಡ್ಡ ಮತದಾನ ಮಾಡಿದ್ದಾರೆ ಅಂತಿದ್ದಾರೆ. ಅಂಥಹವರು ಸಾಬೀತು ಮಾಡಲಿ ಎಂದು ಸವಾಲು ಹಾಕಿದರು.ಸಚಿವ ಎಚ್.ಡಿ. ಕುಮಾರಸ್ವಾಮಿ ನನ್ನ ಸಂಪರ್ಕದಲ್ಲಿ ಇಲ್ಲ. ಬೆಳಗ್ಗೆಯಿಂದ ನನ್ನನ್ನು ಯಾರೂ ಸಂಪರ್ಕ ಮಾಡಿಲ್ಲ ಎಂದರು.

### ಮೇಕೆದಾಟು ಕುಡಿಯುವ ನೀರಿಗೆ ಮಾತ್ರ

ನಿಮ್ಮ ಹೃದಯಕ್ಕೆ ಹತ್ತಿರವಾದ ಮೇಕೆದಾಟು ಯೋಜನೆ ತಡೆಯಲು ಕಾನೂನು ಅವಕಾಶ ಹುಡುಕುತ್ತಿರುವ ಬಗ್ಗೆ ಕೇಳಿದಾಗ, ಮೇಕೆದಾಟು ಕೇವಲ ನನ್ನ ಹೃದಯಕ್ಕೆ ಮಾತ್ರ ಹತ್ತಿರವಾಗಿಲ್ಲ. ಮೇಕೆದಾಟು ಯೋಜನೆ ಕರ್ನಾಟಕ ರಾಜ್ಯಕ್ಕಿಂತ ತಮಿಳುನಾಡಿಗೆ ಹೆಚ್ಚು ಅನುಕೂಲ ನೀಡಲಿದೆ. ಈ ಬಗ್ಗೆ ಚರ್ಚೆಗೆ ಸಿದ್ಧ ಎಂದರು. ತಮಿಳುನಾಡು ಪಾಲಿನ 177 ಟಿಎಂಸಿ ನೀರನ್ನು ಬಿಡಲು ನಾವು ಸಿದ್ಧವಾಗಿದ್ದೇವೆ. ಈ ಬಗ್ಗೆ ಸುಪ್ರೀಂ ಕೋರ್ಟ್ ಆದೇಶವೂ ಇದೆ. ಈ ಯೋಜನೆ ತೀರ್ಮಾನವನ್ನು ಕೇಂದ್ರ ಜಲ ಆಯೋಗ ಮಾಡಬೇಕು ಎಂದು ಕೋರ್ಟ್ ತಿಳಿಸಿದೆ ಎಂದರು. ನಾವು ತಮಿಳುನಾಡಿನ ರೈತರ ಹಿತವನ್ನೂ ಕಾಪಾಡಬೇಕು. ಇದು ಸಮತೋಲಿತ ಜಲಾನಯನ. ಇಲ್ಲಿ ಒಂದೇ ಒಂದು ಬಕೆಟ್ ನೀರನ್ನೂ ನೀರಾವರಿಗೆ ಬಳಸುವುದಿಲ್ಲ. ಬೆಂಗಳೂರು ನಗರದ ಕುಡಿಯುವ ನೀರು ಪೂರೈಕೆಗೆ ಮಾತ್ರ ಬಳಸಲಾಗುವುದು. ಬೆಂಗಳೂರಿನಲ್ಲಿ ಜನಸಂಖ್ಯೆ ಹೆಚ್ಚಾಗುತ್ತಿದೆ. ನಾವು ಕೃಷ್ಣಾದಿಂದ ನೀರನ್ನು ತರಲು ಸಾಧ್ಯವಿಲ್ಲ. ಹೀಗಾಗಿ, ಕಾವೇರಿ ನಮ್ಮ ಮುಂದಿರುವ ಏಕೈಕ ಆಯ್ಕೆ ಎಂದು ಹೇಳಿದರು.

### ಜೂ.21ರಿಂದ ಶೇ.50 ರಿಯಾಯಿತಿ

ಮೇಲೆ ಮೊತ್ತವನ್ನು ಲೆಕ್ಕ ಹಾಕಲಾಗುತ್ತದೆ. ಉದಾಹರಣೆಗೆ 1992ರಲ್ಲಿ ಪ್ರಕರಣ ದಾಖಲಾಗಿದ್ದರೆ ಅಂದಿನ ದಂಡದ ದರವೇ ಅನ್ವಯವಾಗುತ್ತದೆ. ಈ ಒಂದು ಬಾರಿಯ ಇತ್ಯರ್ಥ ಯೋಜನೆಯ ಮೂಲಕ ವಾಹನ ಮಾಲೀಕರು ಬಾಕಿ ಪ್ರಕರಣಗಳನ್ನು ಮುಕ್ತಾಯಗೊಳಿಸಲು ಅವಕಾಶ ಸಿಗಲಿದೆ ಎಂದು ಸಾರಿಗೆ ಇಲಾಖೆ ತಿಳಿಸಿದೆ.

ಕಳೆದ ಮೂರು ದಶಕಗಳಲ್ಲಿ ರಾಜ್ಯದಾದ್ಯಂತ ನಡೆದ ವಿವಿಧ ಜಾರಿ ಕಾರ್ಯಾಚರಣೆಗಳ ವೇಳೆ ಈ ಪ್ರಕರಣಗಳು ದಾಖಲಾಗಿದ್ದವು. ಇದೀಗ ವಾಹನ ಮಾಲೀಕರು ತಮ್ಮ ದಾಖಲೆಗಳನ್ನು ಸಕ್ರಮಗೊಳಿಸಿ ಬಾಕಿ ಪ್ರಕರಣಗಳನ್ನು ಮುಕ್ತಾಯಗೊಳಿಸಲು ಈ ಯೋಜನೆ ನೆರವಾಗಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಬಾಕಿ ಇರುವ ಸಾರಿಗೆ ನಿಯಮ ಉಲ್ಲಂಘನೆ ಪ್ರಕರಣಗಳನ್ನು ಹೊಂದಿರುವ ವಾಹನ ಮಾಲೀಕರು ಮತ್ತು ನಿರ್ವಾಹಕರು ತಮ್ಮ ಸಮೀಪದ ಪ್ರಾದೇಶಿಕ ಸಾರಿಗೆ ಕಚೇರಿಗೆ ಭೇಟಿ ನೀಡಿ ಈ ಸೀಮಿತ ಅವಧಿಯ ರಿಯಾಯಿತಿ ಪ್ರಯೋಜನ ಪಡೆದುಕೊಳ್ಳುವಂತೆ ಇಲಾಖೆ ಮನವಿ ಮಾಡಿದೆ.

### ಮಂಡ್ಯ ಮೇಡಂಗೂ ಟೋಪಿ!

ಅಂದುಕೊಳ್ಳುತ್ತಿದ್ದೆವು. ಇರಲಿ ಇನ್ನೂ ಎರಡೂ ವರ್ಷ ಇದೆ. 2028ರ ಚುನಾವಣೆಯಲ್ಲಿ ನೋಡೋಣ ಎಂದು ರೇವಣ್ಣ ಹೇಳಿದರು.

### ಕಾವೇರಿಗೆ ವಿಜಯ್ ಹೊಸ ಕ್ಯಾತೆ

ಬಂದರೆ, ಕೃಷಿ ಉತ್ಪಾದನೆ ಜೊತೆಗೆ ರೈತರ ಜೀವನೋಪಾಯದ ಮೇಲೂ ತೀವ್ರ ಪರಿಣಾಮ ಬೀರುತ್ತದೆ. ಇದನ್ನು ನಿಲ್ಲಿಸಲು ಮತ್ತು ಸರಿಯಾದ ಸಮಯದಲ್ಲಿ ತಮಿಳುನಾಡಿಗೆ ನೀರು ಒದಗಿಸಲು ಸರ್ಕಾರ ಅಗತ್ಯ ಕಾನೂನು ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ ಎಂದು ಸರ್ಕಾರ ರಾಜ್ಯಪಾಲರ ಭಾಷಣದಲ್ಲಿ ಉಲ್ಲೇಖಿಸಿದೆ.

# ಪಶ್ಚಿಮಘಟ್ಟ ಸಂರಕ್ಷಣೆಗೆ ಸೂಚನೆ



ಚಾಮರಾಜನಗರ, ತಾಣಗಳಲ್ಲಿ ಮುಖ್ಯವಾಗಿರುವ ಪಶ್ಚಿಮಘಟ್ಟಗಳ ಸಂರಕ್ಷಣೆ ಹಾಗೂ ಪರಿಸರಕ್ಕೆ ಪೂರಕವಾಗುವ ಹಲವು ಕ್ರಮಗಳಿಗೆ ಮುಂದಾಗಲು ಸೂಚಿಸಲಾಗಿದೆ ಎಂದು ರಾಜ್ಯ ಪಶ್ಚಿಮಘಟ್ಟ ಸಂರಕ್ಷಣಾ ಕಾರ್ಯಪಡೆ ಸಮಿತಿ ಅಧ್ಯಕ್ಷರಾದ ಮೊಹಮ್ಮದ್ ತಬ್ರೇಜ್ ಆಲಂ ಷರೀಫ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಪಶ್ಚಿಮಘಟ್ಟಗಳ ಸಂರಕ್ಷಣೆ ಸಂಬಂಧ ಸಮಿತಿಯು ಸಭೆ ನಡೆಸಿ ಹಲವು ಕ್ರಮಗಳನ್ನು ಕೈಗೊಳ್ಳಲು ನಿರ್ದೇಶನ ನೀಡಿದೆ. ಪಶ್ಚಿಮಘಟ್ಟಗಳ ವ್ಯಾಪ್ತಿಯ ಪ್ರವಾಸಿ ಸ್ಥಳಗಳಲ್ಲಿ ಪರಿಸರ ಮಾಲಿನ್ಯವಾಗದಂತೆ ಮಾರ್ಗದರ್ಶನ ಮಾಡಲು ಸಿಬ್ಬಂದಿ ನಿಯೋಜಿಸುವಂತೆ ತಿಳಿಸಲಾಗಿದೆ. ಪ್ಲಾಸ್ಟಿಕ್ ನಿಯಂತ್ರಣಕ್ಕೆ ಕಟ್ಟುನಿಟ್ಟಿನ ಕ್ರಮ ವಹಿಸಲು ಸಹ ನಿರ್ದೇಶನ ನೀಡಲಾಗಿದೆ ಎಂದರು. ಪಶ್ಚಿಮಘಟ್ಟಗಳ ಪ್ರವೇಶ ದ್ವಾರಗಳಲ್ಲಿ ಹಸಿರು ಚೆಕ್ ಪೋಸ್ಟ್ ನಿರ್ಮಿಸಲು ಶಿಫಾರಸ್ಸು ಮಾಡಲಾಗುತ್ತಿದೆ. ಪಶ್ಚಿಮಘಟ್ಟಗಳ ಮಹತ್ವ ಸಾರಲು ಹಾಗೂ ಪರಿಸರ ಜಾಗೃತಿಗಾಗಿ ಪಶ್ಚಿಮಘಟ್ಟಗಳ ವೈಶಿಷ್ಟ್ಯಗಳನ್ನು ಒಳಗೊಂಡ ಗೀತೆಗಳನ್ನು ಬಿಡುಗಡೆ ಮಾಡಲು ಸಿದ್ದತೆ ಮಾಡಲಾಗಿದೆ. ಪಶ್ಚಿಮಘಟ್ಟದ ಬಗ್ಗೆ ವಿವರ ನೀಡುವ ಮಾಹಿತಿ ಫಲಕಗಳು, ಗೋಡೆಗಳನ್ನು ಪ್ರವಾಸಿ ತಾಣಗಳಲ್ಲಿ ನಿರ್ಮಿಸಲು ಸೂಚಿಸಲಾಗಿದೆ ಎಂದು ತಿಳಿಸಿದರು. ಕರ್ನಾಟಕವು ಸೇರಿದಂತೆ ಹಲವು ರಾಜ್ಯಗಳಲ್ಲಿ ಹರಡಿರುವ ಪಶ್ಚಿಮಘಟ್ಟಗಳ ಸಂರಕ್ಷಣೆಗಾಗಿ ರಾಷ್ಟ್ರೀಯ ಮಟ್ಟದ ಸಮಗ್ರ ನೀತಿ ರೂಪಿಸಬೇಕೆಂಬ ಪ್ರಸ್ತಾವವನ್ನು ಪಶ್ಚಿಮಘಟ್ಟಗಳ ಸಂರಕ್ಷಣಾ ಕಾರ್ಯಪಡೆ ಸಮಿತಿಯು ಮುಂದಿಟ್ಟಿದೆ ಎಂದು ಅಧ್ಯಕ್ಷರಾದ ಮೊಹಮ್ಮದ್ ತಬ್ರೇಜ್ ಆಲಂ ಷರೀಫ್ ಅವರು ಹೇಳಿದರು. ಉಚ್ಚ ನ್ಯಾಯಾಲಯದ ಸೀನಿಯರ್ ಕೌನ್ಸಿಲರ್ ಮೃತ್ಯುಂಜಯ, ಹಿರಿಯ ವಿಜ್ಞಾನಿ ನಯೀಮ್ ಉಲ್ಲಾ ಅವರು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

# ಸಾಧಕರಿಗೆ ಒಡೆಯರ್ ಪ್ರಶಸ್ತಿ ಪ್ರದಾನ

ಮೈಸೂರು: ಕನ್ನಡ ಚಳವಳಿ ಕೇಂದ್ರ ಸಮಿತಿಯ ಜಿಲ್ಲಾ ಪತ್ರಕರ್ತರ ಭವನದಲ್ಲಿ ವಿವಿಧ ಕ್ಷೇತ್ರದ ಸಾಧಕರಿಗೆ ನಾಲ್ವಡಿ ಕೃಷ್ಣರಾಜ ಒಡೆಯರ್ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಮೈಸೂರು ವಾಣಿಜ್ಯ ಮತ್ತು ಕೈಗಾರಿಕೆಗಳ ಸಂಘದ ಅಧ್ಯಕ್ಷ ಡಾ.ಕೆ.ಬಿ. ಲಿಂಗರಾಜು, ಸಮಾಜ ಸೇವಕ ಬಿ.ಆರ್. ನಟರಾಜ ಜೋಯಿಸ್, ಉದ್ಯಮಿ ದೇವಪ್ರಕಾಶ್, ಶಿಕ್ಷಣ ಕ್ಷೇತ್ರದ ಆದಿಶೇಷಗೌಡ, ಪತ್ರಕರ್ತ ಮಹೇಂದ್ರ ದೇವನೂರುರಿಗೆ ನಾಲ್ವಡಿ ಕೃಷ್ಣರಾಜ ಒಡೆಯರ್ ಪ್ರಶಸ್ತಿ ಪ್ರದಾನ ಮಾಡಲಾಯಿತು. ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿದರು.

ಸಮಿತಿ ಅಧ್ಯಕ್ಷ ಮೂಗೂರು ನಂಜುಂಡಸ್ವಾಮಿ ಪ್ರಾಸ್ತಾವಿಕವಾಗಿ ಮಾತನಾಡಿ, ರೈತರು ಹಾಗೂ ಇತರೆ ಹೋರಾಟಗಾರರ ಮೇಲಿನ ಪ್ರಕರಣಗಳನ್ನು ಹಿಂದಕ್ಕೆ ಪಡೆದಿದೆ. ಆದರೆ ಕನ್ನಡಪರ ಹೋರಾಟಗಾರರ ಪ್ರಕರಣ ಮಾತ್ರ ಹಿಂದಕ್ಕೆ ತೆಗೆದುಕೊಂಡಿಲ್ಲ ಎಂದರು.

ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್ ಅಧ್ಯಕ್ಷತೆ ವಹಿಸಿದ್ದರು. ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷ ಎಂ. ಚಂದ್ರಶೇಖರ್ ಆಶಯ ಭಾಷಣ ಮಾಡಿದರು. ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಕೆ.ದೀಪಕ್ ಮಾತನಾಡಿದರು. ರಂಗಕರ್ಮಿ ರಾಜಶೇಖರ ಕದಂಬ, ಎಚ್.ಕೆ. ಅನಂತ, ದಾರಿಪುರ ಚಂದ್ರಶೇಖರ್, ಜೈಪ್ರಕಾಶ್, ನಾರಾಯಣರಾವ್, ರಂಗನಾಥ್ ಮೈಸೂರು ಮೊದಲಾದವರು ಇದ್ದರು.



# ಗಾಜಿನ ಸೇತುವೆಗೆ ಜಿಲ್ಲಾಧಿಕಾರಿ ಭೇಟಿ

## ಪ್ರವಾಸಿಗರ ಸುರಕ್ಷತೆ ಗಮನಹರಿಸಿ ಮುಂದಿನ ಕ್ರಮ: ಸೋಮಶೇಖರ್

ಮಡಿಕೇರಿ: ತಾಲೂಕಿನ ಪ್ರಸಿದ್ಧ ಪ್ರವಾಸಿ ತಾಣಗಳಾದ ಅಬ್ಬಿ ಜಲಪಾತ ಹಾಗೂ ಮಾಂದಲ್‌ಪಟ್ಟಿ ಮಾರ್ಗದ ಜಂಕ್ಷನ್ ಮತ್ತು ಉಡೋತ್‌ಮೊಟ್ಟೆ ಬಳಿ ಇರುವ ಗಾಜಿನ ಸೇತುವೆಗಳಿಗೆ (ಗ್ಲಾಸ್ ಬ್ರಿಡ್ಜ್) ಜಿಲ್ಲಾಧಿಕಾರಿ ಎಸ್.ಜೆ. ಸೋಮಶೇಖರ್ ಅವರು ಗುರುವಾರ ಭೇಟಿ ನೀಡಿ ಜಂಟಿ ಪರಿಶೀಲನೆ ನಡೆಸಿದರು. ಮುಂಬರುವ ಮಳೆಗಾಲದ ಹಿನ್ನೆಲೆಯಲ್ಲಿ ಪ್ರವಾಸಿಗರ ಸುರಕ್ಷತೆ ಹಾಗೂ ನಿಯಮಗಳ ಪಾಲನೆಗೆ ಪ್ರಮುಖ ಆದ್ಯತೆ ನೀಡಿ ಈ ಆಕಸ್ಮಿಕ ಭೇಟಿಯನ್ನು ಕೈಗೊಳ್ಳಲಾಗಿತ್ತು.

**ಗಾಜಿನ ಸೇತುವೆಗಳ ಸುರಕ್ಷತೆ ಹಾಗೂ ನಿಯಮಗಳ ಪರಿಶೀಲನೆ**

ಮೊದಲಿಗೆ ಅಬ್ಬಿ ಜಲಪಾತ ಹಾಗೂ ಮಾಂದಲ್‌ಪಟ್ಟಿ ಜಂಕ್ಷನ್ ಬಳಿಯ ಗಾಜಿನ ಸೇತುವೆಯನ್ನು ವೀಕ್ಷಿಸಿದ ಜಿಲ್ಲಾಧಿಕಾರಿಗಳು, ಸೇತುವೆ ನಿರ್ಮಾಣದ ಜಾಗ, ಅದಕ್ಕೆ ಸಂಬಂಧಪಟ್ಟ ಇಲಾಖೆಗಳಿಂದ ಪಡೆದಿರುವ ಕಾನೂನಾತ್ಮಕ ಅನುಮತಿ ಹಾಗೂ ನಿರ್ಮಾಣದ ಸಂದರ್ಭದಲ್ಲಿ ಎಂಜಿನಿಯರ್‌ಗಳು ನೀಡಿರುವ ಸುರಕ್ಷತಾ ದೃಢೀಕರಣ ಪತ್ರಗಳನ್ನು ಪರಿಶೀಲಿಸಿದರು. ಇದರೊಂದಿಗೆ ಪ್ರವಾಸಿಗರಿಗೆ ನಿಗದಿಪಡಿಸಿರುವ ಶುಲ್ಕ, ವೀಕ್ಷಣೆಯ ಕಾಲಾವಕಾಶ ಹಾಗೂ ವಾಹನ ನಿಲುಗಡೆಗೆ (ಪಾರ್ಕಿಂಗ್) ಕಲ್ಪಿಸಲಾಗಿರುವ ಸ್ಥಳಾವಕಾಶದ ಬಗ್ಗೆ ಸಂಪೂರ್ಣ ಮಾಹಿತಿ ಪಡೆದುಕೊಂಡರು. ಪ್ರವಾಸೋದ್ಯಮ ಇಲಾಖೆಯ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕೆಂದು ಮಾಲೀಕರಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಬಳಿಕ ಉಡೋತ್‌ಮೊಟ್ಟೆ ಬಳಿಯ ಗಾಜಿನ ಸೇತುವೆಯನ್ನು ವೀಕ್ಷಿಸಿದ ಅವರು, ಅಲ್ಲಿ ವಾಹನ ನಿಲುಗಡೆಗೆ ಸೂಕ್ತ ಜಾಗವಿಲ್ಲದಿರುವುದರಿಂದ ಸಾಮಾನ್ಯ ವಾಹನಗಳ ಸಂಚಾರಕ್ಕೆ ತೊಂದರೆಯಾಗದಂತೆ ಎಚ್ಚರ ವಹಿಸಲು ಸೂಚಿಸಿದರು. ಮಳೆಗಾಲದಲ್ಲಿ ಮುನ್ನೆಚ್ಚರಿಕೆ ವಹಿಸುವ ಸಲುವಾಗಿ ಈ ಹಿಂದೆ ಈ ಎರಡು ಗಾಜಿನ ಸೇತುವೆಗಳ ವೀಕ್ಷಣೆಗೆ ನಿರ್ಬಂಧ ಹೇರಲಾಗಿತ್ತು. ಈ ಆದೇಶದ ಮರುಪರಿಶೀಲನೆ ನಡೆಸಿ, ಪ್ರವಾಸಿಗರು ಮತ್ತು ಸ್ಥಳೀಯರ ಹಿತಾಸಕ್ತಿ ಹಾಗೂ ಸುರಕ್ಷತೆಯನ್ನು ಜಂಟಿಯಾಗಿ ಕಾಯ್ದುಕೊಳ್ಳಲು ಜಿಲ್ಲಾಡಳಿತ ಸೂಕ್ತ ಕ್ರಮ ಕೈಗೊಳ್ಳಲಿದೆ ಎಂದು ಡಿಸಿ ಭರವಸೆ ನೀಡಿದರು. ಈ ಪ್ರಮುಖ ಪರಿಶೀಲನಾ ಭೇಟಿಯ ಸಂದರ್ಭದಲ್ಲಿ ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕರಾದ ಶಶಿಧರ್, ಇಲಾಖೆಯ ಸಮಾಲೋಚಕರಾದ ಜತಿನ್, ಕಂದಾಯ ಇಲಾಖೆಯ ಅಧಿಕಾರಿಗಳು, ಗಾಜಿನ ಸೇತುವೆ ಹಾಗೂ ಹೋಂಸ್ಟೇ ಮಾಲೀಕರು ಉಪಸ್ಥಿತರಿದ್ದರು.



### ಕಸ ವಿಲೇವಾರಿ, ಮೂಲ ಸೌಕರ್ಯಕ್ಕೆ ಆದೇಶ

ಪರಿಸರ ಸಂರಕ್ಷಣೆಯ ಭಾಗವಾಗಿ ಹೋಂಸ್ಟೇ ಮತ್ತು ರೆಸಾರ್ಟ್‌ಗಳಲ್ಲಿ ಉತ್ಪತ್ತಿಯಾಗುವ ಹಸಿ ಕಸ ಹಾಗೂ ಒಣ ಕಸವನ್ನು ಕಡ್ಡಾಯವಾಗಿ ಬೇರ್ಪಡಿಸಿ ವೈಜ್ಞಾನಿಕವಾಗಿ ವಿಲೇವಾರಿ ಮಾಡ ಬೇಕು ಎಂದು ಜಿಲ್ಲಾಧಿಕಾರಿ ತಿಳಿಸಿದರು. ಪ್ರವಾಸಿ ಗರಿಗೆ ಶುದ್ಧ ಕುಡಿಯುವ ನೀರು ಒದಗಿಸುವುದರ ಜೊತೆಗೆ ಅಲ್ಲಿ ಕರ್ತವ್ಯ ನಿರ್ವಹಿಸುವ ಪ್ರತಿಯೊಬ್ಬ ಸಿಬ್ಬಂದಿಯ ಸಂಪೂರ್ಣ ಹಿನ್ನೆಲೆಯ ಮಾಹಿತಿಯನ್ನು ಮಾಲೀಕರು ಹೊಂದಿರಬೇಕು ಎಂದು ಕಟ್ಟುನಿಟ್ಟಾಗಿ ಸೂಚಿಸಿದರು

### ಜೀಪ್ ಚಾಲಕರಿಗೆ ಎಚ್ಚರಿಕೆ, ಹೋಂಸ್ಟೇಗಳ ತಪಾಸಣೆ

ಇದೇ ವೇಳೆ ಮಾಂದಲ್‌ಪಟ್ಟಿ ಜಂಕ್ಷನ್‌ನಲ್ಲಿ ಕಾರ್ಯಾಚರಣೆ ನಡೆಸುವ ಪ್ರವಾಸಿ ಜೀಪುಗಳ ವಿವರಗಳನ್ನು ಪಡೆದ ಜಿಲ್ಲಾಧಿಕಾರಿಗಳು, ಪ್ರವಾಸಿಗರಿಂದ ಪಡೆಯಲಾಗುತ್ತಿರುವ ಬಾಡಿಗೆ ದರ, ವಾಹನ ಮತ್ತು ಚಾಲಕರ ಪರವಾನಗಿಗಳ (ಲೈಸೆನ್ಸ್) ನೈಜತೆಯನ್ನು ಪರಿಶೀಲಿಸಿದರು. ಪ್ರವಾಸಿಗರಿಗೆ ಯಾವುದೇ ರೀತಿಯ ಕಿರಿಕಿರಿ ಉಂಟುಮಾಡಬಾರದು ಹಾಗೂ ಸಾರ್ವಜನಿಕರಿಂದ ದೂರುಗಳು ಬಾರದಂತೆ ಅತ್ಯಂತ ಎಚ್ಚರಿಕೆಯಿಂದ ಮತ್ತು ಸುರಕ್ಷಿತವಾಗಿ ವಾಹನ ಚಾಲನೆ ಮಾಡಬೇಕೆಂದು ನಿರ್ದೇಶಿಸಿದರು. ನಂತರ ಕಡಗದಾಳು ಬಳಿಯ ಹೋಂಸ್ಟೇ ಹಾಗೂ ರೆಸಾರ್ಟ್ ಒಂದಕ್ಕೆ ಅನುಮತಿ ನೀಡುವ ಸಂಬಂಧ ಸ್ಥಳ ಪರಿಶೀಲನೆ ನಡೆಸಿದ ಜಿಲ್ಲಾಧಿಕಾರಿಗಳು, ಕೃಷಿಯೇತರ ಚಟುವಟಿಕೆಗೆ ಭೂಮಿ ಪರಿವರ್ತನೆಯಾಗಿದೆಯೇ (ನಾನ್-ಅಗ್ರಿಕಲ್ಚರ್ ಕನ್ವರ್ಷನ್), ಗ್ರಾಮ ಪಂಚಾಯಿತಿಯ ಅನುಮತಿ, ಪೊಲೀಸ್ ಇಲಾಖೆಯ ನಿರಕ್ಷೇಪಣಾ ಪತ್ರ (ಓಔಅ) ಹಾಗೂ ವಿದ್ಯುತ್ ಸಂಪರ್ಕದ ದಾಖಲೆಗಳನ್ನು ಸೂಕ್ಷ್ಮವಾಗಿ ವೀಕ್ಷಿಸಿದರು. ರೆಸಾರ್ಟ್‌ಗಳಲ್ಲಿ ಸುರಕ್ಷತೆಯ ದೃಷ್ಟಿಯಿಂದ ಸಿಸಿಟಿವಿ ಕ್ಯಾಮೆರಾಗಳು, ನೋಂದಣಿ ಪುಸ್ತಕ ಹಾಗೂ ದೂರು ನಿರ್ವಹಣಾ ಪುಸ್ತಕಗಳನ್ನು ಕಡ್ಡಾಯವಾಗಿ ಇಟ್ಟುಕೊಳ್ಳಬೇಕು. ವಿದೇಶಿ ಪ್ರವಾಸಿಗರು ಆಗಮಿಸಿದರೆ ಅವರ ಪಾಸ್‌ಪೋರ್ಟ್, ವೀಸಾ ಮತ್ತು ಗುರುತಿನ ??ಟಿಗಳನ್ನು ಪರಿಶೀಲಿಸಿ ಕಡ್ಡಾಯವಾಗಿ ಸ್ಥಳೀಯ ಪೊಲೀಸ್ ಠಾಣೆಗೆ ಮಾಹಿತಿ ನೀಡಬೇಕು ಎಂದು ಆದೇಶಿಸಿದರು.

## ಮೊದಲ ಪುಟದಿಂದ

### ವಚನಾನಂದ ಶ್ರೀ ಜಾಮೀನು ಪ್ರಶ್ನಿಸಿ ಅರ್ಜಿ: 30ಕ್ಕೆ ಆದೇಶ

ವಾದ-ಪ್ರತಿವಾದವನ್ನು ಜೂನ್ 11ರಂದು ಆಲಿಸಿದ್ದ ನ್ಯಾಯಾಲಯ ಆದೇಶವನ್ನು ಜೂನ್ 18ಕ್ಕೆ ಕಾಯ್ದಿರಿಸಿತ್ತು. ಈ ನಡುವೆ ನಿರೀಕ್ಷಣಾ ಜಾಮೀನು ರದ್ದು ಕೋರಿ ಸಂತ್ರಸ್ತ ಬಾಲಕನ ತಾಯಿ ಹೈಕೋರ್ಟ್ ಮೊರೆ ಹೋಗಿದ್ದರು.

ಎಫ್‌ಐಆರ್ ದಾಖಲಾಗುವುದಕ್ಕೂ ಮುನ್ನವೇ ಸ್ವಾಮೀಜಿ ಪಡೆದಿರುವ ನಿರೀಕ್ಷಣಾ ಜಾಮೀನು ರದ್ದು ಮಾಡುವಂತೆ ಹರಿಹರ ಗ್ರಾಮಾಂತರ ಠಾಣೆ ಪೊಲೀಸರು ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದರು. ಇದಕ್ಕೆ ಸ್ವಾಮೀಜಿ ಪರ ವಕೀಲ ಎಸ್.ವಿ.ಪಾಟೀಲ ತಕರಾರು ಸಲ್ಲಿಸಿದ್ದರು.

ನಿರೀಕ್ಷಣಾ ಜಾಮೀನು ರದ್ದು ಕೋರಿ ಪೊಲೀಸರು ಸಲ್ಲಿಸಿದ ಅರ್ಜಿಯ ವಿಚಾರಣೆಯನ್ನು ಜಿಲ್ಲಾ ನ್ಯಾಯಾಲಯ ನಡೆಸುತ್ತಿರುವಾಗಲೇ ಸಂತ್ರಸ್ತ ಬಾಲಕನ ತಾಯಿ ಹೈಕೋರ್ಟ್ ಮೊರೆ ಹೋಗಿದ್ದಾರೆ. ಇದು ವಿಚಾರಣಾ ನ್ಯಾಯಾಲಯದ ಗಮನಕ್ಕೆ ಬಂದಿದೆ. ಹೀಗಾಗಿ, ಅಂತಿಮ ಆದೇಶದ ದಿನಾಂಕವನ್ನು ನ್ಯಾಯಾಧೀಶರು ಮುಂದೂಡಿದರು ಎಂದು ಸ್ವಾಮೀಜಿ ಪರ ವಕೀಲ ಎಸ್.ವಿ.ಪಾಟೀಲ ತಿಳಿಸಿದ್ದಾರೆ.

### ಆರ್‌ಎಸ್‌ಎಸ್ ಬಗ್ಗೆ ಕಾಳಜಿ ಏಕೆ?

ನೀಡಲಾಗಿದೆ. ಇವರಿಗೆ ಸ್ವಂತ ಬುದ್ಧಿ ಇಲ್ಲ. ಸುಮ್ಮನೆ ಸಿಕ್ಕಿರುವ ಗೃಹ ಖಾತೆಯಲ್ಲಿ ಸರಿಯಾಗಿ ಕೆಲಸ ಮಾಡಿ ಹೆಸರು ಗಳಿಸಲಿ ಎಂದು ವ್ಯಂಗ್ಯವಾಡಿದರು.

ಸಂಘಟನೆಯ ವಿರುದ್ಧದ ಹೇಳಿಕೆಗಳನ್ನು ನಿಲ್ಲಿಸಿ. ಗೃಹ ಸಚಿವರಾಗಿ ತಮ್ಮ ಜವಾಬ್ದಾರಿ ಅರಿತು ಕೆಲಸ ಮಾಡಲಿ ಎಂದು ಅವರು ಈ ಸಂದರ್ಭದಲ್ಲಿ ಸಲಹೆ ನೀಡಿದರು.

### ಬ್ಯಾಂಕ್ ಖಾತೆ ಸ್ಥಗಿತಕ್ಕೆ ಪತ್ರ

ಪಕ್ಷವು ತೀವ್ರ ಬಂಡಾಯವನ್ನು ಎದುರಿಸುತ್ತಿರುವಾಗ ಭಿನ್ನಮತೀಯರು ಪಕ್ಷದ ಬಹುಕೋಟಿ ಹಣವನ್ನು ಲೂಟಿ ಮಾಡಬಹುದು ಅಥವಾ ಬೇರೆಡೆಗೆ ವರ್ಗಾಯಿಸಬಹುದು ಎಂಬ ಭೀತಿಯಿಂದ ಪಕ್ಷದ ಬ್ಯಾಂಕ್ ಖಾತೆಗಳನ್ನು ಸ್ಥಗಿತಗೊಳಿಸುವಂತೆ ಕೋಲ್ಕತ್ತಾದ ಎಚ್‌ಡಿಎಫ್‌ಸಿ ಬ್ಯಾಂಕ್ ಗೆ ಬಿಸ್ವಾಸ್ ಪತ್ರ ಬರೆದಿದ್ದಾರೆ.

# ಜಾಗತಿಕ ವಿಜ್ಞಾನಿಗಳ ಪಟ್ಟಿಯಲ್ಲಿ ಸ್ಥಾನ ಪಡೆದ ಡಾ. ಶೋಬಿತ್ ರಂಗಪ್ಪ

ಮೈಸೂರು: ಮೈಸೂರು ಮೂಲದ ವಿಜ್ಞಾನಿ ಡಾ. ಶೋಬಿತ್ ರಂಗಪ್ಪ ಅವರು ಅಂತರರಾಷ್ಟ್ರೀಯ ಮಟ್ಟದಲ್ಲಿ ಮತ್ತೊಂದು ಮಹತ್ವದ ಸಾಧನೆ ಮಾಡಿದ್ದಾರೆ.ಸಿಯಾರ್ಂಕ್ ಗ್ಲೋಬಲ್ ಸೈಂಟಿಸ್ಟ್ ಇನ್ಡೆಕ್ಸ್?2025 ಪ್ರಕಟಿಸಿರುವ ಜಾಗತಿಕ ವಿಜ್ಞಾನಿಗಳ ಪಟ್ಟಿಯಲ್ಲಿ ಅವರು ವಿಶ್ವದ ಅಗ್ರ 5 ಶೇಕಡಾ ವಿಜ್ಞಾನಿಗಳಲ್ಲಿ ಸ್ಥಾನ ಪಡೆದಿದ್ದಾರೆ.



ಇನ್ ಸ್ಟಿಟ್ಯೂಟ್ ಆಫ್ ಮಾಲಿಕ್ಯುಲರ್ ಮೆಡಿಸಿನ್ ಗೆ ಸಂಬಂಧಿಸಿದ ಡಾ. ಶೋಬಿತ್ ರಂಗಪ್ಪ ಅವರಿಗೆ ಜಾಗತಿಕ ಶ್ರೇಯಾಂಕದಲ್ಲಿ 6,65,342ನೇ ಸ್ಥಾನ ಲಭಿಸಿದ್ದು, ಅವರ ಸಂಶೋಧನಾ ಕೊಡುಗೆಗಳು ಹಾಗೂ ವೈಜ್ಞಾನಿಕ ಪ್ರಕಟಣೆಗಳ ಆಧಾರದ ಮೇಲೆ ಈ ಮಾನ್ಯತೆ ನೀಡಲಾಗಿದೆ.

ಸೈಯಾರ್ಂಕ್ ಗ್ಲೋಬಲ್ ಸಂಸ್ಥೆಯು ಕಠಿಣ ಬಿಬ್ಲಿಯೋಮೆಟ್ರಿಕ್ ವಿಶ್ಲೇಷಣೆ ಮೂಲಕ ವಿಶ್ವದ ವಿಜ್ಞಾನಿಗಳನ್ನು ಮೌಲ್ಯಮಾಪನ ಮಾಡುತ್ತಿದ್ದು, ಡಾ. ಶೋಬಿತ್ ರಂಗಪ್ಪ ಅವರ ಸಾಧನೆ ಕರ್ನಾಟಕ ಹಾಗೂ ಭಾರತದ ವೈಜ್ಞಾನಿಕ ಕ್ಷೇತ್ರಕ್ಕೆ ಹೆಮ್ಮೆಯ ವಿಷಯವಾಗಿದೆ. ಈ ಸಾಧನೆಗೆ ಶೈಕ್ಷಣಿಕ ಮತ್ತು ಸಂಶೋಧನಾ ವಲಯದಿಂದ ಅಭಿನಂದನೆಗಳು ವ್ಯಕ್ತವಾಗಿವೆ.

**ಎಸ್ಸಿ ಎಸ್ಟಿ ಸಮುದಾಯದ ಮುಖಂಡರ ಆಗ್ರಹ**

# ಪರಿಶಿಷ್ಟ ನೇರ ಸಾಲ ಸೌಲಭ್ಯ ಒದಗಿಸಿ

ಗುಂಡ್ಲುಪೇಟೆ :- ಪರಿಶಿಷ್ಟ ಜಾತಿ. ಪಂಗಡದ ಸಮುದಾಯದವರಿಗೆ ಆಯಾ ಇಲಾಖೆಗಳಿಂದ ಬರುವ ಯೋಜನೆಗಳಲ್ಲಿ ಬ್ಯಾಂಕ್ ಗಳಿಂದ ನೇರ ಸಾಲ ಸೌಲಭ್ಯ ಒದಗಿಸಬೇಕೆಂದು ಎಸ್ಸಿ ಎಸ್ಟಿ ಸಮುದಾಯದ ಮುಖಂಡರು ಅಗ್ರಹಿಸಿದರು

ಪಟ್ಟಣದ ತಾಲೂಕು ಕಚೇರಿ ಸಭಾಂಗಣದಲ್ಲಿ ಅಧಿಕಾರಿಗಳ ಗೈರು ಹಾಜರಿಯಿಂದ ಮುಂದೂಡಲಾಗಿದ್ದ ತಹಸೀಲ್ದಾರ್ ಅಧ್ಯಕ್ಷತೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಹಿತರಕ್ಷಣಾ ಸಮಿತಿ ಸಭೆ ನಡೆಸಲಾಯಿತು. ನಂತರ ವಕೀಲ ಕಾಂತ ರಾಜ್ ಮಾತನಾಡಿ ಎಸ್ಸಿ ಎಸ್ಟಿ ಸಮುದಾಯದವರಿಗೆ ಸಾಲ ಸೌಲಭ್ಯ ಸಿಗದೆ ತೊಂದರೆ ಅನುಭವಿಸುತ್ತಿದ್ದಾರೆ ಬ್ಯಾಂಕ್ ಮ್ಯಾನೇಜರ್ ಗಳು ಸಿಬಿಲ್ ಸ್ಕೋರ್ ಕಾರಣ ನೀಡುತ್ತಾರೆ ಸಮು ದಾಯದ ಜನರು ನೋವು ಅನುಭವಿಸುವಂತ್ತಾಗಿದೆ ಎಂದು ಲೀಡ್ ಬ್ಯಾಂಕ್ ಮ್ಯಾನೇಜರ್ ರವರನ್ನು ತರಟೆಗೆ ತೆಗೆದುಕೊಂಡರು. ಸಮುದಾಯದವರಿಗೆ ಸರ್ಕಾರ ಎಲ್ಲಾ ಅನುಕೂಲತೆ ಒದಗಿಸಿಕೊಟ್ಟಿದ್ದರೂ ಅವು



ಫಲಾನುಭಿಗಳಿಗೆ ತಲುಪದೆ ತೂಂದರೆ ಪಡುವಂತಾಗಿದೆ ಮುಂದಿನ ಸಭೆಯಲ್ಲಿ ಆಯಾ ಬ್ಯಾಂಕ್ ನ ಅಧಿಕಾರಿಗಳನ್ನು ಕರೆದು ಸಮಸ್ಯೆ ನಿವಾರಣೆಗೆ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು

ಲೀಡ್ ಬ್ಯಾಂಕ್ ವ್ಯವಸ್ಥಾಪಕಿ ಸುರೇಖಾ ಉತ್ತರಿಸಿ, ಪ್ರಾಯೋಜಿತ ಸಂಸ್ಥೆಗಳಿಂದ ಯೋಜನೆ ವಿಸ್ತರಿಸುತ್ತಿದ್ದು ಪಂಚಾಯತ್ ವ್ಯಾಪ್ತಿಯಲ್ಲಿ ಜಾಗೃತಿ ಕಾರ್ಯಕ್ರಮ ನಡೆಸಿ ಜನರಿಗೆ ಅಗತ್ಯ ಮಾಹಿತಿ ನೀಡುತ್ತೇವೆ, ಲೋನ್ ಪಡೆಯಲು ಸಿಬಿಲ್ ಎಷ್ಟು ಮುಖ್ಯ ಎಂಬುದರ ಕುರಿತಾಗಿ ಅರಿವು ಮೂಡಿಸಲಾಗುತ್ತದೆ ಎಂದು ತಿಳಿಸಿದರು.

ತಾಲೂಕಿನಲ್ಲಿ ವೈದ್ಯರ ಕೊರತೆ ಸಾಕಷ್ಟಿದು ಜನಸಾಮಾನ್ಯರಿಗೆ ತೀವ್ರ ತೊಂದರೆಯಾಗಿದೆ ಆದರೆ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ನಿರ್ಲಕ್ಷ್ಯ ವಹಿಸುತ್ತಿದ್ದೀರಿ ಎಂದು ಟಿ ಎಚ್ ಓ ಅಲೀಂಪಾಷಾ ಅವರನ್ನ ತರಾಟೆಗೆ ತೆಗೆದುಕೊಂಡರು. ಕಾಡಂಚಿನ ಗ್ರಾಮದ ಜನರಿಗೆ ಆರೋಗ್ಯ ಸೇವೆ ಮರೀಚಿಕೆಯಾಗಿದೆ ಎಂದರು. ತಹಶೀಲ್ದಾರ್ ಎಂ ಎಸ್ ತನ್ಮಯ್, ಪುರಸಭೆ ಮುಖ್ಯಾಧಕಾರಿ ಸರವಣ, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಮೋಹನ್ ಕುಮಾರ್, ಇಓ ಷಣ್ಮುಗಂ, ಸರ್ಕಲ್ ಇನ್ಸ್ ಪೆಕ್ಟರ್ ಜಯಕುಮಾರ್, ತೆರಕಣಾಂಬಿ ಸಬ್ ಇನ್ಸ್ ಪೆಕ್ಟರ್ ಮಹೇಶ್ ಕ್ಷೇತ್ರ ಶಿಕ್ಷಣಾಧಿಕಾರಿ ಟಿಆರ್ ಸ್ವಾಮಿ ಕೃಷಿ ಇಲಾಖೆಯ ಸಹಾಯಕ ನಿರ್ದೇ ಶಕ , ಶಶಿಧರ್. ಪಿಡಬ್ಲ್ಯೂ ಡಿ ಇಲಾಖೆಯ ರವಿಕುಮಾರ್ ಸಿಡಿಪಿಓ ಹೇಮಾವತಿ, ಮುಖಂಡರಾದ ಸುಭಾಷ್ ಮಾಡ್ರಹಳ್ಳಿ ,ಅರ್ ಸೊಮಣ್ಣ, ಮುತ್ತಣ್ಣ. ಸುರೇಶ್ ನಾಯಕ ,ರಂಗಸ್ವಾಮಿ ಮಾಡ್ರಹಳ್ಳಿ ,ಸಿದ್ದಯ್ಯ ಹಸಗೂಲಿ ರಾಜಗೋಪಾಲ ಗೋವಿಂದ ನಾಯಕ. ಅರ್ ಡಿ , ಉಲ್ಲಾಸ್, ಮತ್ತಿತರರಿದ್ದರು.

# ವಿದ್ಯುತ್: ಖಾಸಗಿ ಸಂಸ್ಥೆಗೆ ವಿರೋಧ

ಕೊಳ್ಳೇಗಾಲ: ಕರ್ನಾಟಕದಲ್ಲಿ ವಿದ್ಯುತ್ ವಿತರಣಾ ಪರವಾನಗಿಯನ್ನು ಖಾಸಗಿ ಸಂಸ್ಥೆಗೆ ನೀಡುವ ಪ್ರಕ್ರಿಯೆಯನ್ನು ವಿರೋಧಿಸಿ ತಾಲ್ಲೂಕು ಕರ್ನಾಟಕ ರಾಜ್ಯ ರೈತ ಸಂಘದ ಪದಾಧಿಕಾರಿಗಳು ಪ್ರತಿಭಟನೆ ನಡೆಸಿದರು.

ಪಟ್ಟಣದ ಸೆಸ್ಕ್ ಉಪವಿಭಾಗ ಕಚೇರಿ ಎದುರು ಜಮಾಯಿಸಿ, ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗದ ವತಿಯಿಂದ ವಿದ್ಯುತ್ ವಿತರಣಾ ಪರವಾನಗಿಯನ್ನು ಟಾಟಾ ಪವರ್ ಕಂಪನಿಗೆ ನೀಡಬಾರದು ಹಾಗೂ ರಾಜ್ಯದ ವಿದ್ಯುತ್ ಕ್ಷೇತ್ರವನ್ನು ಖಾಸಗೀಕರಣಗೊಳಿಸಬಾರದು ಎಂದು ಆಗ್ರಹಿಸಿ ರೈತರು ಆಕ್ರೋಶ ವ್ಯಕ್ತಪಡಿಸಿದರು.

ನಂತರ ಸೆಸ್ಕ್ ಉಪವಿಭಾಗ ಕಾರ್ಯಪಾಲಕ ಇಂಜಿನಿಯರ್ ತಬ್ಬಸ್ಸುಮ್ ಅಪ್ಜಾ ರವರಿಗೆ ಮನವಿಪತ್ರ ಸಲ್ಲಿಸಿ, ವಿದ್ಯುತ್ ಕ್ಷೇತ್ರವನ್ನು ಸಾರ್ವಜನಿಕ ವಲಯದಲ್ಲೇ ಉಳಿಸಿ ರೈತರು ಹಾಗೂ ಸಾಮಾನ್ಯ ಗ್ರಾಹಕರ ಹಿತಾಸಕ್ತಿಯನ್ನು ಕಾಪಾಡುವಂತೆ ಸರ್ಕಾರವನ್ನು ಒತ್ತಾಯಿಸಿದರು.

ಮಾಧ್ಯಮದವರೊಂದಿಗೆ ರೈತ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಭಾಸ್ಕರ್ ಮಾತನಾಡಿ, ರಾಜ್ಯ ಸರ್ಕಾರ ವಿದ್ಯುತ್ ಕ್ಷೇತ್ರವನ್ನು ಖಾಸಗೀಕರಣಗೊಳಿಸುವ ಯಾವುದೇ ಕ್ರಮಕ್ಕೆ ಮುಂದಾಗಬಾರದು. ವಿದ್ಯುತ್ ವಿತರಣೆಯನ್ನು ಖಾಸಗಿ ಕಂಪನಿಗಳಿಗೆ ಒಪ್ಪಿಸಿದರೆ ರೈತರು ಮತ್ತು ಸಾಮಾನ್ಯ ಗ್ರಾಹಕರ ಮೇಲೆ ಹೆಚ್ಚುವರಿ ಆರ್ಥಿಕ ಹೊರೆ ಬೀಳುವ ಸಾಧ್ಯತೆ ಇದೆ. ಸಾರ್ವಜನಿಕ ವಲಯದ ವಿದ್ಯುತ್ ಸೇವೆಯನ್ನು ಮತ್ತಷ್ಟು ಬಲಪಡಿಸುವ ಮೂಲಕ ಜನಸಾಮಾನ್ಯರಿಗೆ ಗುಣಮಟ್ಟದ ಸೇವೆ ಒದಗಿಸಬೇಕು ಎಂದು ಆಗ್ರಹಿಸಿದರು. ಈ ಪ್ರತಿಭಟನೆಯಲ್ಲಿ ಸತ್ತೇಗಾಲ ಗ್ರಾಮ ಘಟಕದ ಅಧ್ಯಕ್ಷ ಕಚೇರಿ ಮಹದೇವ, ಕಾರ್ಯದರ್ಶಿ ಪುಟ್ಟೇಗೌಡ, ಸಿದ್ದರಾಜು, ನಂಜುಂಡಸ್ವಾಮಿ, ರಾಜು, ನಂಜುಂಡಯ್ಯ, ನಾಗಣ್ಣ ರೈತರು ಸಂಘದ ಹಲವರು ಉಪಸ್ಥಿತರಿದ್ದರು.



## ಮೂವರ ಅಭಿನಂದನೆಗೆ ನಿರ್ಣಯ: ಡಾ.ಬಿಜೆವಿ



ಮೈಸೂರು: ನಗರ ಹಾಗೂ ಗ್ರಾಮಾಂತರ ಜಿಲ್ಲಾ ಕಾಂಗ್ರೆಸ್ ಸಮಿತಿವತಿಯಿಂದ ಜೂ.21ರಂದು ಕೆಪಿಸಿಸಿ ಅಧ್ಯಕ್ಷ ಅಧಿಕಾರ ವಹಿಸಿಕೊಳ್ಳಲಿರುವ ಬಿ.ಕೆ.ಹರಿಪ್ರಸಾದ್ ಕಾರ್ಯಕ್ರಮದ ಹಿನ್ನೆಲೆಯಲ್ಲಿ ಇಂದಿರ ಕಾಂಗ್ರೆಸ್ ಭವನದಲ್ಲಿ ಪೂರ್ವಭಾವಿ ಸಭೆ ಆಯೋಜಿಸಲಾಗಿತ್ತು.

ಕೆಪಿಸಿಸಿ ಅಧ್ಯಕ್ಷರ ಪದಗ್ರಹಣ ಸಮಾರಂಭದ ಸಿದ್ಧತೆ ಕುರಿತು ಮಾತನಾಡಿದ ಮೈಸೂರು ಜಿಲ್ಲಾ ಕಾಂಗ್ರೆಸ್ ಸಮಿತಿಯ ಜಿಲ್ಲಾಧ್ಯಕ್ಷ ಡಾ.ಬಿ.ಜೆ.ವಿಜಯ್ ಕುಮಾರ್ ಸೂರ್ಯ ತನ್ನ ಪಥ ಬದಲಾಯಿಸುವ ಹಾಗೆ ಕಾಂಗ್ರೆಸ್ ಪಕ್ಷದಲ್ಲಿ 3 ಮಂದಿ ಪ್ರಮುಖರು ತಮ್ಮ ಪತ ಬದಲಿಸಿದ್ದಾರೆ. ದೇಶ ಕಂಡ ಧೀಮಂತ ನಾಯಕ ಸಿದ್ದರಾಮಯ್ಯ ಅಧಿಕಾರವನ್ನು ಹಸ್ತಾಂತರ ಮಾಡಿ ಇಡೀ ದೇಶಕ್ಕೆ ಮಾದರಿಯಾಗಿದ್ದಾರೆ. ಡಿ.ಕೆ.ಶಿವಕುಮಾರ್ ವಿದ್ಯಾರ್ಥಿ ಕಾಂಗ್ರೆಸ್ ನಿಂದ ಬೆಳೆದು ಬಂದು ಕರ್ನಾಟಕ ಪ್ರದೇಶ್ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರಾಗಿ ಈಗ ಮುಖ್ಯಮಂತ್ರಿ ಆಗಿದ್ದಾರೆ. ಕಾಂಗ್ರೆಸ್ ನ ಎಲ್ಲಾ ಘಟಕದಲ್ಲೂ ಕೆಲಸ ಮಾಡಿದ ಬಿ.ಕೆ.ಹರಿಪ್ರಸಾದ್ ಕೆಪಿಸಿಸಿ ಅಧ್ಯಕ್ಷರಾಗಿದ್ದಾರೆ. ಆದ್ದರಿಂದ ಮೈಸೂರು ನಗರ ಹಾಗೂ ಜಿಲ್ಲಾ ಕಾಂಗ್ರೆಸ್ ಸಮಿತಿ ಈ ಮೂರು ಮಂದಿಗೆ ಅಭಿನಂದನಾ ನಿರ್ಣಯವನ್ನು ಅಂಗೀಕರಿಸಿ ಕರ್ನಾಟಕ ಪ್ರದೇಶ್ ಕಾಂಗ್ರೆಸ್ ಸಮಿತಿಗೆ ಕಳಿಸುವ ಪ್ರಸ್ತಾವನೆಯನ್ನು ಸಭೆಗೆ ಮಂಡಿಸಿ, ಎಲ್ಲರೂ ಒಮ್ಮತದಿಂದ ಕೈ ಎತ್ತುವ ಮೂಲಕ ಅನುಮೋದನೆ ಪಡೆದರು. ಇದು ಏಷ್ಯಾ ಖಂಡದ ರಾಜಕೀಯ ಪಕ್ಷಗಳ ಇತಿಹಾಸದಲ್ಲಿ ಕಾಂಗ್ರೆಸ್ ಮಾದರಿ ಎಂದರು.

ಸಿದ್ದರಾಮಯ್ಯ ಮೈಸೂರಿನ ಮಗ, ಡಿ.ಕೆ ಶಿವಕುಮಾರ್ ಮೈಸೂರು ಅಳಿಯ ಹಾಗೂ ಬಿ.ಕೆ ಹರಿಪ್ರಸಾದ್ ಕೂಡ ಮೈಸೂರು ಅಳಿಯ ಹಾಗಾಗಿ ಮೈಸೂರು ಜಿಲ್ಲೆಗೆ ಕರ್ನಾಟಕದ ರಾಜಕಾರಣದಲ್ಲಿ ವಿಶಿಷ್ಟ ಸ್ಥಾನ ಇರುವುದು ನಮಗೆ ಹೆಮ್ಮೆಯ ಸಂಗತಿ. 21ರ ಅಧಿಕಾರ ಸ್ವೀಕಾರ ಸಮಾರಂಭಕ್ಕೆ 11 ವಿಧಾನಸಭಾ ಕ್ಷೇತ್ರದಿಂದ ಕಾರ್ಯಕರ್ತರು ಪದಾಧಿಕಾರಿಗಳು ಜನಪ್ರತಿನಿಧಿಗಳು ಕಡ್ಡಾಯವಾಗಿ ಭಾಗವಹಿಸಬೇಕೆಂಬ ಕೆಪಿಸಿಸಿ ಸುತ್ತೋಲೆಯನ್ನ ಮಂಡಿಸಿದರು. ಚುನಾವಣೆಗೆ ಇನ್ನು ಕೇವಲ ಎರಡು ವರ್ಷಗಳು ಬಾಕಿ ಇದ್ದು ಪಕ್ಷದಲ್ಲಿ ದುಡಿದ ಕಾರ್ಯಕರ್ತರಿಗೆ ನಿಗಮ ಮಂಡಳಿಗಳಲ್ಲಿ ಅವಕಾಶ ಮಾಡಿಕೊಡಬೇಕೆಂದು ಸಭೆಯ ಮೂಲಕ ಸರ್ಕಾರವನ್ನ ಒತ್ತಾಯಿಸಿದರು.

ನಗರಾಧ್ಯಕ್ಷ ಆರ್.ಮೂರ್ತಿ ಮಾತನಾಡಿ ಆರ್ ಎಸ್ ಎಸ್ ವಿರುದ್ಧದ ಗಟ್ಟಿ ಧ್ವನಿ ಬಿ ಕೆ ಹರಿಪ್ರಸಾದ್ ಎಂದು ಹೇಳಿ, ಈ ಸಂದರ್ಭದಲ್ಲಿ ನಾವು ಪ್ರಿಯಾಂಕ್ ಖರ್ಗೆ ಅವರಿಗೆ ಅಭಿನಂದನೆ ಸಲ್ಲಿಸಬೇಕು ಎಂದರು. ಆರ್ ಎಸ್ ಎಸ್ ಲೆಕ್ಕ ಕೊಡುತ್ತಿಲ್ಲ, ನೋಂದವಣೆ ಮಾಡುತ್ತಿಲ್ಲ ಈಗ ಬಿಜೆಪಿ ಮತ್ತು ಆರ್ ಎಸ್ ಎಸ್ ಗೆ ಭಯ ಶುರು ಆಗಿದೆ ಎಂದರು. ಹರಿಪ್ರಸಾದ್ ಅವರಿಗೆ ರಾಜ್ಯದ ಮೂಲೆ ಮೂಲೆಯೂ ಗೊತ್ತು ಅವರದ್ದು ಸರಳ ವ್ಯಕ್ತಿ ಇಂತಹ ವ್ಯಕ್ತಿ ಪಕ್ಷದ ಚುಕ್ಕಾಣಿ ಹಿಡಿದಿದ್ದಾರೆ. ಅದು ನಮಗೆ ಹೆಮ್ಮೆಯ ವಿಷಯ ಎಂದು ಹೇಳಿ ಕಾರ್ಯಕರ್ತರಿಗೆ ಸ್ಥಾನ ಮಾನಗಳನ್ನು ಕೊಡಬೇಕು ಎಂದರು. ಸಭೆಯಲ್ಲಿ ಮಾಜಿ ಶಾಸಕರಾದ ಮರಿತಿಬ್ಬೇಗೌಡ, ಡಾ.ಭಾರತಿ ಶಂಕರ್ , ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಸೋಮಣ್ಣ, ಸತೀಶ್ ಕುಮಾರ್, ರವಿ ಮಂಚೇಗೌಡನ ಕೊಪ್ಪಲ್, ನಾಗಭೂಷಣ್, ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷರಾದ ಶ್ರೀಮತಿ ಪುಷ್ಪಲತಾ ಚಿಕ್ಕಣ್ಣ, ಪ್ರೇಮ ಶಂಕರ್, ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅರುಣ್ ಕುಮಾರ್, ಪುಷ್ಪವಲ್ಲಿ, ಪದಾಧಿಕಾರಿಗಳಾದ ಎಡತಲೆಮಂಜುನಾಥ್, ಶಿವಣ್ಣ, ಶಿವಪ್ರಸಾದ್, ಸಿದ್ದಯ್ಯ, ಈಶ್ವರ್ ಚಕ್ಕಡಿ, ಮೋಹನ್, ಗಿರೀಶ್,ಎಂ.ಕೆ.ಅಶೋಕ್, ಡ್ರೈರಿ ವೆಂಕಟೇಶ್, ರಮೇಶ್, ಸುನಂದ ಕುಮಾರ್, ಮಾಜಿ ಮೇಯರ್ ಗಳಾದ ಚಿಕ್ಕಣ್ಣ, ಪುಷ್ಪಲತಾ ಜಗನ್ನಾಥ್, ಪ್ರೇಮಕುಮಾರಿ, ರಾಜೇಶ್ವರಿ, ಶಿವಮಾದು, ಮಧುಕುಮಾರ್ , ಮಹದೇವು, ಮಹೇಶ್ ಇತರರು ಭಾಗವಹಿಸಿದ್ದರು.

ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

# ಕೃಷಿ ಮೂಲಕ ರೈತರಿಗೆ ನಾಯಕತ್ವ

## ದೇಶವನ್ನು ಮುನ್ನಡೆಸುವ ಸಾಮರ್ಥ್ಯ ರೈತರಿಗಿದೆ: ಜಯಸೂರ್ಯನ್ ರಾಮನಗರದಲ್ಲಿ ಬಿಜೆಪಿ ಜಿಲ್ಲಾ ರೈತ ಮೋರ್ಚಾದ ಕಚೇರಿ ಉದ್ಘಾಟನೆ

ರಾಮನಗರ: ಇಂದು ಭಾರತದಲ್ಲಿ ಪೆಟ್ರೋಲ್ ಮತ್ತು ಡೀಸೆಲ್‌ಗೆ ಪರ್ಯಾಯವಾಗಿ ಎಥನಾಲ್ ಬಳಕೆಯನ್ನು ಹೆಚ್ಚಿಸಲಾಗುತ್ತಿದೆ. ಎಥನಾಲ್ ಅನ್ನು ಕಬ್ಬು, ಧಾನ್ಯಗಳು ಹಾಗೂ ಇತರೆ ಕೃಷಿ ಉತ್ಪನ್ನಗಳಿಂದ ತಯಾರಿಸಬಹುದು. ಭವಿಷ್ಯದಲ್ಲಿ ಕೃಷಿಕರು ಮತ್ತು ರೈತರು ದೇಶದ ಆರ್ಥಿಕ ನಾಯ ಕತ್ವವನ್ನು ವಹಿಸುವ ಶಕ್ತಿಯನ್ನು ಪಡೆಯಲಿದ್ದಾರೆ ಎಂದು ಬಿಜೆಪಿ ರೈತ ಮೋರ್ಚಾದ ರಾಷ್ಟ್ರೀಯ ಉಪಾಧ್ಯಕ್ಷ ಜಯಸೂರ್ಯನ್ ಹೇಳಿದರು.

ನಗರದಲ್ಲಿ ಬಿಜೆಪಿ ರೈತ ಮೋರ್ಚಾದ ಕಚೇರಿಯನ್ನು ಉದ್ಘಾಟಿಸಿ ಅವರು ಮಾತನಾಡಿದರು. ನಾವು ರೈತರು ದೇಶವನ್ನಷ್ಟೇ ಅಲ್ಲ, ಜಗತ್ತನ್ನೂ ಮುನ್ನಡೆಸುವ ಸಾಮರ್ಥ್ಯ ಹೊಂದಿದ್ದೇವೆ. ಕೃಷಿ ಕ್ಷೇತ್ರದ ಮಹತ್ವ ಇದೇ ಆಗಿದೆ ಎಂದರು.

**ಕೃಷಿ ಇಂದು ಆಹಾರ ಉತ್ಪಾದನೆಗೆ ಸೀಮಿತವಾಗಿಲ್ಲ**

ಒಂದು ಕಾಲದಲ್ಲಿ ಕೃಷಿ ಎಂದರೆ ಕೇವಲ ಆಹಾರ ಉತ್ಪಾದನೆ ಎಂಬ ಕಲ್ಪನೆ ಇತ್ತು. ಆದರೆ ಇಂದಿನ ಕೃಷಿ ಕೇವಲ ಆಹಾರಕ್ಕೆ ಸೀಮಿತವಾಗಿಲ್ಲ. ಕೃಷಿಯಿಂದ ಇಂಧನ, ರಾಸಾಯನಿಕ ಉತ್ಪನ್ನಗಳು, ಬಟ್ಟೆಗಳು, ಔಷಧಿಗಳು ಹಾಗೂ ಅನೇಕ ಕೈಗಾರಿಕಾ ಉತ್ಪನ್ನಗಳು ತಯಾರಾಗುತ್ತಿವೆ, ರೈತರು ಕೃಷಿ ಮೂಲಕವೇ ದೇಶವನ್ನು ಮುನ್ನಡೆಸುವ ಅವಕಾಶ ವಿದೆ ಎಂದರು. ರೈತರು ಕೃಷಿಯ ಮೂಲಕ,



ಇಂಧನ ಉತ್ಪಾದನೆಯ ಮೂಲಕ, ಆರ್ಥಿಕ ಶಕ್ತಿಯ ಮೂಲಕ, ವೈಜ್ಞಾನಿಕ ಮತ್ತು ತಾಂತ್ರಿಕ ಪ್ರಗತಿಯ ಮೂಲಕ ನಮ್ಮ ರಾಷ್ಟ್ರದ ಆರ್ಥಿಕ ಬಲವನ್ನು ವೃದ್ಧಿಸಬಹುದು ಹಾಗೂ ವಿದೇಶಿ ಅವಲಂಬನೆಯನ್ನು ಕಡಿಮೆ ಮಾಡಬಹುದು ಎಂದರು.

ಇಂದು ಭಾರತವು ಕೇವಲ ಆಹಾರ ಉತ್ಪಾದನೆಯಲ್ಲಿ ಮಾತ್ರವಲ್ಲ, ಇಂಧನ ಉತ್ಪಾದನೆಯಲ್ಲಿಯೂ ಮಹತ್ವದ ಪಾತ್ರ ವಹಿಸುತ್ತಿದೆ. ಪೆಟ್ರೋಲ್ ಮತ್ತು ಡೀಸೆಲ್‌ಗೆ ಪರ್ಯಾಯವಾಗಿ ಎಥನಾಲ್ ಬಳಕೆಯನ್ನು ಹೆಚ್ಚಿಸಲಾಗುತ್ತಿದೆ. ಎಥನಾಲ್ ಅನ್ನು ಕಬ್ಬು, ಧಾನ್ಯಗಳು ಹಾಗೂ ಇತರೆ ಕೃಷಿ ಉತ್ಪನ್ನಗಳಿಂದ ತಯಾರಿಸಬಹುದು. ಭವಿಷ್ಯದಲ್ಲಿ ಕೃಷಿಕರು ಮತ್ತು ರೈತರು ದೇಶದ ಆರ್ಥಿಕ ನಾಯಕತ್ವವನ್ನು ವಹಿಸುವ ಶಕ್ತಿಯನ್ನು ಪಡೆಯಲಿದ್ದಾರೆ. ನಾವು ರೈತರು ದೇಶವನ್ನಷ್ಟೇ ಅಲ್ಲ, ಜಗತ್ತನ್ನೂ ಮುನ್ನಡೆಸುವ ಸಾಮರ್ಥ್ಯ ಹೊಂದಿದ್ದೇವೆ. ಕೃಷಿ ಕ್ಷೇತ್ರದ ಮಹತ್ವ ಇದೇ ಆಗಿದೆ ಎಂದರು. ರಾಜ್ಯ ರೈತ ಮೋರ್ಚಾದ ಉಪಾಧ್ಯಕ್ಷ ಎಂ.ರುದ್ರೇಶ್, ರೈತ ಮೋರ್ಚಾದ ಜಿಲ್ಲಾಧ್ಯಕ್ಷ ಜಗನ್ನಾಥ್, ಬಿಜೆಪಿ ಮುಖಂಡರುಗಳಾದ ದೇವರಾಜ್, ಎಸ್.ಅರ್.ನಾಗರಾಜ್, ವರದರಾಜ ಗೌಡ ಮುಂತಾದವರು ಉಪಸ್ಥಿತರಿದ್ದರು.

**ಭಾರತ ಅಭಿವೃದ್ಧಿ ಸಾಧಿಸುತ್ತಿದೆ**

ಇಂದು ಜಗತ್ತಿನಾದ್ಯಂತ ಭಾರತವು ಅತ್ಯಂತ ವೇಗವಾಗಿ ಅಭಿವೃದ್ಧಿ ಸಾಧಿಸುತ್ತಿದೆ. ಗಲ್ಫ್ ಯುದ್ಧದ ನಡುವೆಯೂ ಅಮೆರಿಕಾ, ಚೀನಾ, ಜಪಾನ್ ಸೇರಿದಂತೆ ಅನೇಕ ಅಭಿವೃದ್ಧಿಶೀಲ ರಾಷ್ಟ್ರಗಳಿಗಿಂತ ಭಾರತ ಹಲವು ಕ್ಷೇತ್ರಗಳಲ್ಲಿ ಮುನ್ನಡೆ ಸಾಧಿಸಿದೆ. ತಂತ್ರಜ್ಞಾನ, ಕೃಷಿ ಆಧಾರಿತ ಉದ್ಯಮ, ರಕ್ಷಣಾ ಕ್ಷೇತ್ರ ಸೇರಿದಂತೆ ಅನೇಕ ಕ್ಷೇತ್ರಗಳಲ್ಲಿ ಭಾರತ ಇಂದು ಜಾಗತಿಕ ನಾಯಕತ್ವದ ಸ್ಥಾನದಲ್ಲಿದೆ. ವಿಶೇಷವಾಗಿ ಕೃಷಿ ಕ್ಷೇತ್ರದಲ್ಲಿ ಭಾರತ ವಿಶ್ವದ ಪ್ರಮುಖ ಉತ್ಪಾದಕ ರಾಷ್ಟ್ರವಾಗಿದೆ. ಅಕ್ಕಿ, ಗೋಧಿ, ತರಕಾರಿಗಳು, ಹಾಲು, ಮೊಟ್ಟೆ, ಧಾನ್ಯಗಳು, ಸಿರಿಧಾನ್ಯಗಳು ಸೇರಿದಂತೆ ಅನೇಕ ಕೃಷಿ ಉತ್ಪನ್ನಗಳ ಉತ್ಪಾದನೆ ಯಲ್ಲಿ ಭಾರತ ಅಗ್ರಸ್ಥಾನದಲ್ಲಿದೆ ಎಂದು ಕೃಷಿ ಕ್ಷೇತ್ರದ ಭವಿಷ್ಯದ ಬಗ್ಗೆ ಬೆಳಕು ಚೆಲ್ಲಿದರು. ಇಂದು ಭಾರತೀಯ ರೂಪಾಯಿ ವಿಶ್ವದ ಪ್ರಮುಖ ಕರೆನ್ಸಿಗಳ ಎದುರು ತನ್ನ ಸಾಮರ್ಥ್ಯವನ್ನು ತೋರಿಸುತ್ತಿದೆ. ಇದರ ಹಿಂದಿರುವ ಪ್ರಮುಖ ಶಕ್ತಿ ನಮ್ಮ ರೈತರ ಉತ್ಪಾದಕತೆ, ಬೆಳೆ ವೈವಿಧ್ಯೀಕರಣ ಮತ್ತು ನವೀನತೆ, ಹೀಗಾಗಿ ಉತ್ಪಾದಕತೆ, ವೈವಿಧ್ಯೀಕರಣ ಮತ್ತು ನವೀನತೆಗಳ ಮೂಲಕ ನಾವು ರಾಷ್ಟ್ರವನ್ನು ಮುನ್ನಡೆಸಬಹುದು. ನಾವು ರೈತರು ನಮ್ಮ ರಾಷ್ಟ್ರದ ಹೆಮ್ಮೆಯ ನಾಯಕರು. ಮುಂದಿನ ದಿನಗಳಲ್ಲಿ ನಾವು ಜಗತ್ತಿನ ಹೆಮ್ಮೆಯ ನಾಯಕರಾಗುವ ಸಾಮರ್ಥ್ಯವನ್ನು ಹೊಂದಿದ್ದೇವೆ ಎಂದು ನೆರೆದಿದ್ದ ರೈತ ಮೋರ್ಚಾದ ಕಾರ್ಯಕರ್ತರಲ್ಲಿ ಹುರುಪು ತುಂಬಿದರು.

## ವಿದ್ಯುತ್ ಖಾಸಗೀಕರಣಕ್ಕೆ ವಿರೋಧ



ಚಾಮರಾಜನಗರ, ರಾಜ್ಯದಲ್ಲಿ ವಿದ್ಯುತ್ ವಿತರಣಾ ಪರವಾನಗಿ ಕೋರಿ ಟಾಟಾ ಪವರ್ ಕಂಪೆನಿ ಸಲ್ಲಿಸಿರುವ ಅರ್ಜಿಯನ್ನು ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗ ತಿರಸ್ಕರಿಸಬೇಕೆಂದು ಆಗ್ರಹಿಸಿ ಕರ್ನಾಟಕ ರಾಜ್ಯ ಅನುಮತಿ ಪಡೆದ ವಿದ್ಯುತ್ ಗುತ್ತಿಗೆದಾರರ ಸಂಘವು ಜೂ. 22ರಂದು ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನವನದಲ್ಲಿ ಪ್ರತಿಭಟನೆ ನಡೆಯಲಿದೆ ಎಂದು ಸಂಘದ ಜಿಲ್ಲಾ ಸಮಿತಿ ಅಧ್ಯಕ್ಷ ಜಿ.ಎಂ.ಸುರೇಶ್ ತಿಳಿಸಿದರು. ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ, ಅಂದು ಸಂಘದ ರಾಜ್ಯಾಧ್ಯಕ್ಷರಾದ ಸಿ. ರಮೇಶ್ ಅವರ ನೇತೃತ್ವದಲ್ಲಿ ನಡೆಯಲಿರುವ ಬೃಹತ್ ಪ್ರತಿಭಟನೆಗೆ ಜಿಲ್ಲೆಯ ಗುತ್ತಿಗೆದಾರರು, ಗ್ರಾಹಕರು, ರೈತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶ್ವಸಿಗೊಳಿಸಿಕೊಡಬೇಕು ಎಂದು ಮನವಿ ಮಾಡಿದರು.

ವಿದ್ಯುತ್ ಖಾಸಗೀಕರಣದಿಂದ ತೆರಿಗೆ, ಸಾರ್ವಜನಿಕ ಹಣದ ಮೇಲೆ ಹೊರೆಯಾಗಲಿದ್ದು, ಖಾಸಗಿ ಕಂಪನಿಗಳು ಲಾಭ ಉದ್ದೇಶದಿಂದ ಕೆಲಸ ಮಾಡುತ್ತದೆ. ಇದರಿಂದ ಸಾಮಾನ್ಯ ಜನರಿಗೆ , ಬಡ ವರ್ಗದವರಿಗೆ ವಿದ್ಯುತ್ ದರಭಾರ ಹೆಚ್ಚಾಗಿ ಬೀಳಬಹುದು.ಅಲ್ಲದೆ ಗುತ್ತಿಗೆದಾರರಿಗೆ ತೊಂದರೆಯಾಗಲಿದೆ. ಇದರಿಂದ ಸಾವಿರಾರು ನೌಕರರ ಉದ್ಯೋಗ ಭದ್ರತೆ, ಸರ್ಕಾರಿ ಸೇವೆಯ ಸ್ಥಿರತೆ ಮೇಲೆ ಪರಿಣಾಮ ಬೀಳುವ ಸಾಧ್ಯತೆ ಇದೆ. ಖಾಸಗಿ ಕಂಪನಿಗಳು ನಗರ ಮತ್ತು ಲಾಭದಾಯಕ ಪ್ರದೇಶಗಳಿಗೆ ಮಾತ್ರ ಸೇವೆ ನೀಡುವ ಸಾಧ್ಯತೆ ಇದ್ದು, ಗ್ರಾಮೀಣ, ಹಿಂದುಳಿದ ಪ್ರದೇಶಗಳು ನಿರ್ಲಕ್ಷ್ಯಕ್ಕೊಳಗಾಗುವ ಸಾಧ್ಯತೆ ಇದೆ ಆದ್ದರಿಂದ ವಿದ್ಯುತ್ ಖಾಸಗೀಕರಣ ಕೈ ಬಿಡಬೇಕು ಎಂದು ಒತ್ತಾಯಿಸಿದರು.

ಜಿಲ್ಲೆಯ ಗ್ರಾಹಕರು, ಸಾರ್ವಜನಿಕರು, ರೈತರು, ವಿದ್ಯುತ್ ಖಾಸಗೀಕರಣ ವಿರೋಧಿಸಿ ಆಕ್ಷೇಪಣೆ ಸಲ್ಲಿಸಬೇಕು ಎಂದು ಮನವಿ ಮಾಡಿದರು.

ಪ್ರಧಾನ ಕಾರ್ಯದರ್ಶಿ ಭಾನುಪ್ರಕಾಶ್ ಮಾತನಾಡಿ, ವಿದ್ಯುತ್ ಖಾಸಗೀಕರಣದಿಂದ ಗುತ್ತಿಗೆದಾರರು, ಕಾರ್ಮಿಕರು ಬದುಕು ಬೀದಿಗೆ ಬೀಳಲಿದೆ ಗ್ರಾಹಕರ ಮೇಲಿನ ಹೆಚ್ಚುವರಿ ಆರ್ಥಿಕ ಹೊರೆಯಾಗಲಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಸಮಿತಿಯ ಉಪಾಧ್ಯಕ್ಷ ಅನ್ಸರ್ ಆಲಿಖಾನ್ , ಜಿಲ್ಲಾ ಖಜಾಂಚಿ ಎಂ.ಎನ್. ಸಂಪತ್ ಕುಮಾರ್, ಪಿಆರ್ ಓ ಮಹದೇವ ಸೋಮವಾರಪೇಟೆ, ಶಿವಪ್ರಸಾದ್, ಸಿದ್ದಾರ್ಥ, ಜಿಲ್ಲಾ ಕಾರ್ಯಕಾರಿಣಿ ಸಮಿತಿ ಸದಸ್ಯರಾದ ರಾಜು ಕೆಂಪನಪುರ ಹಾಜರಿದ್ದರು.

## ಲಕ್ಷ್ಮಿ ಹೆಬ್ಬಾಳ್ಕರ್‌ಗೆ ಸಚಿವೆ ಸ್ಥಾನ ನೀಡಿ

ಮೈಸೂರು: ರಾಜ್ಯ ರಾಜಕಾರಣದಲ್ಲಿ ವಿಶಿಷ್ಟ ಛಾಪು ಮೂಡಿಸಿರುವ ಲಕ್ಷ್ಮಿ ಹೆಬ್ಬಾಳ್ಕರ್ ಅವರಿಗೆ ರಾಜ್ಯ ಸಚಿವ ಸಂಪುಟ ವಿಸ್ತಣೆ ವೇಳೆ ಖಾತೆ ನೀಡಬೇಕೆಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಯುವ ಘಟಕದ ರಾಜ್ಯ ನಿರ್ದೇಶಕ ಕೆ.ಎಸ್. ಕಂಚಮಳ್ಳಿ ಮಹೇಶ್‌ರೆಡ್ಡಿ ಆಗ್ರಹಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ರಾಜ್ಯದ ಅಭಿವೃದ್ಧಿ, ಮಹಿಳಾ ಸಬಲೀಕರಣ ಹಾಗೂ ಜನಪರ ಆಡಳಿತಕ್ಕೆ ಲಕ್ಷ್ಮಿ ಹೆಬ್ಬಾಳ್ಕರ್ ತಮ್ಮನ್ನು ಸಮರ್ಥಿಸಿಕೊಂಡಿದ್ದಾರೆ. ಇವರಿಗೆ ಆಡಳಿತಾತ್ಮಕ ಅನುಭವವಿದ್ದು, ಜನಪರ ಕಾರ್ಯ ವೈಖರಿಯವರಾಗಿದ್ದಾರೆ. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸಚಿವರಾಗಿ ಕಾರ್ಯ ನಿರ್ವಹಿಸಿದ ಅವಧಿಯಲ್ಲಿ ಮಹಿಳೆಯರು, ಮಕ್ಕಳು ಹಾಗೂ ದುರ್ಬಲ ವರ್ಗಗಳ ಕಲ್ಯಾಣಕ್ಕಾಗಿ ಅನೇಕ ಯೋಜನೆ ಜಾರಿಗೊಳಿಸಿದ್ದಾರೆ. ಇವರ ಆಡಳಿತ ಎಲ್ಲರ ಮೆಚ್ಚುಗೆಗೆ ಪಾತ್ರವಾಗಿದ್ದು, ಅವರ ಜನಸಂಪರ್ಕದ ಸಾಮರ್ಥ್ಯ ಕಾಂಗ್ರೆಸ್ ಪಕ್ಷಕ್ಕೆ ಪ್ರಮುಖ ಶಕ್ತಿಯಾಗಿದೆ. ಹೀಗಾಗಿ ಮತ್ತೊಮ್ಮೆ ಸಚಿವ ಸ್ಥಾನ ನೀಡಬೇಕೆಂದು ಪಕ್ಷದ ವರಿಷ್ಠರಲ್ಲಿ ಹಾಗೂ ಸಿಎಂ ಡಿ.ಕೆ. ಶಿವಕುಮಾರ್ ಅವರಲ್ಲಿ ಮನವಿ ಮಾಡಿದರು. ಅಲ್ಲದೆ, ವೀರಶೈವ– ಲಿಂಗಾಯತ ಸಮುದಾಯದ ಪ್ರತಿನಿಧಿಯೂ ಆಗಿದ್ದು, ಅವರ ಅನುಭವ ಪರಿಗಣಿಸಿ ಸಚಿವ ಸ್ಥಾನ ನೀಡಿದಲ್ಲಿ ಮಹಿಳಾ ನಾಯಕತ್ವ ಹಾಗೂ ಸಮುದಾಯಕ್ಕೆ ನ್ಯಾಯ ಒದಗಿಸಿದಂತಾಗುತ್ತದೆ ಎಂದರು. ಮೂಗೂರು ನಂಜುಂಡಸ್ವಾಮಿ, ಎಸ್. ಪ್ರದೀಪ್‌ಕುಮಾರ್, ವೀರಶೈವ ಮೂರ್ತಿ, ಪ್ರಭುಸ್ವಾಮಿ ಇದ್ದರು.



## ವಿದ್ಯುತ್ ಕ್ಷೇತ್ರವನ್ನು ಖಾಸಗೀಕರಣಗೊಳಿಸದಂತೆ ಆಗ್ರಹ



ಗುಂಡ್ಲುಪೇಟೆ: ಪಟ್ಟಣದ ತಾಲ್ಲೂಕು ಕಚೇರಿ ಮುಂಭಾಗ ಕರ್ನಾಟಕ ರಾಜ್ಯ ರೈತಸಂಘ ಶಿವಪುರ ಮಹದೇವಪ್ಪ ಬಣದಿಂದ ಕರ್ನಾಟಕ ರಾಜ್ಯದಲ್ಲಿ ಕೆಇಆರ್ ಸಿ ವತಿಯಿಂದ ವಿದ್ಯುತ್ ವಿತರಣಾ ಪರವಾನಿಗೆಯನ್ನು ಟಾಟಾ ಪವರ್ ಕಂಪನಿಯವರಿಗೆ ನೀಡದಂತೆ ಮತ್ತು ವಿದ್ಯುತ್ ಕ್ಷೇತ್ರವನ್ನು ಖಾಸಗೀಕರಣಗೊಳಿಸದಂತೆ ಹಾಗು ಎಪಿಎಂಸಿ ಯಲ್ಲಿ ಮಹಾರಾಷ್ಟ್ರ ಮತ್ತಿತರ ಕಡೆಯಿಂದ ಕಡಿಮೆ ಬೆಲೆಗೆ ಕೋಸು ತಂದು ಇಲ್ಲಿ ಮಾರಾಟ ಮಾಡುವುದರಿಂದ ಸ್ಥಳೀಯ ರೈತರಿಗೆ ಬೆಲೆ ಕುಸಿತವಾಗಲಿದೆ ಇದನ್ನು ತಪ್ಪಿಸಬೇಕು ಆಗ್ರಹಿಸಿ ಪ್ರತಿಭಟನೆ ನಡೆಸಲಾಯಿತು.

ಪಟ್ಟಣದ ಹೊಸ ಪ್ರವಾಸಿ ಮಂದಿರದಿಂದ ಹೊರಟ ಪ್ರತಿಭಟನೆ ನಿರತ ರೈತರು ಬಸವೇಶ್ವರ ವೃತ್ತದ ಬಳಿ ರಾಷ್ಟ್ರೀಯ ಹೆದ್ದಾರಿ ತಡೆದು ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರದ ವಿರುದ್ಧ ದಿಕ್ಕಾರದ ಘೋಷಣೆ ಕೂಗಿ ಆಕ್ರೋಶ ಹೊರಹಾಕಿದರು ಕೆಇಬಿ ಎಇಇ ಸಿದ್ದಲಿಂಗಪ್ಪ ನವರಿಗೆ ಮನವಿ ಸಲ್ಲಿಸಿದರು.

ರೈತಸಂಘದ ಜಿಲ್ಲಾಧ್ಯಕ್ಷ ಮಹದೇವಪ್ಪ ಶಿವಪುರ ಮಾತನಾಡಿ ಕೇಂದ್ರ .ಮತ್ತು ರಾಜ್ಯ ಸರ್ಕಾರಗಳು ಜನರನ್ನು ನಿರ್ನಾಮ ಮಾಡಲು ಹೊರಟಿದ್ದಾರೆ, ವಿದ್ಯುತ್ ಖಾಸಗಿಕರಣದಿಂದ ಈಗಾಗಲೇ ಟೆಂಡರ್ ಕಾರ್ಯ ನಡೆಯುತ್ತಿದ್ದು ಆಕ್ಷೇಪಣೆ ಸಲ್ಲಿಸಲು ಅವಕಾಶ ನೀಡಲಾಗಿದೆ ಚಾಮರಾಜನಗರ ಜಿಲ್ಲೆ ಸೇರಿದಂತೆ ಇಪ್ಪತ್ತು ಜಿಲ್ಲೆಯನ್ನು ಖಾಸಗೀಕರಣ ಮಾಡಲು ಸಿದ್ದತೆ ನಡೆಸುತ್ತಿದ್ದು ಜನರು ಹೆಚ್ಚಿನ ಬೆಲೆ ಗೆ ಮೊಬೈಲ್ ರೀಚಾರ್ಜ್ ಮಾಡಿಸುವಂತೆ ಮುಂದೆ ವಿದ್ಯುತ್ ರೀಚಾರ್ಜ್ ಮಾಡಿಸಿ ಬದುಕಬೇಕಾಗುತ್ತದೆ ಹಣವಿಲ್ಲದ ಬಡವರು ಕತ್ತಲೆಯಲ್ಲಿಯೇ ಜೀವನ ಸಾಗಿಸಬೇಕಾಗುತ್ತದೆ ಇದಕ್ಕೆ ಇಡೀ ಸಾರ್ವಜನಿಕ ವಲಯದ ವಿರೋಧವಿದೆ ಎಂದರು. ಈ ಸಂದರ್ಭದಲ್ಲಿ ನಾಗರಾಜಪ್ಪ ವೀರನಪುರ, ರಾಜಶೇಖರ್ ,ಶಿವಣ್ಣ, ರಘು, ಪ್ರವೀಣ, ಕುಮಾರ ಹಕ್ಕಲಪುರ, ಸಿದ್ದಶೆಟ್ಟಿ, ಮಹದೇವಸ್ವಾಮಿ, ಬಸಮ್ಮ, ಪುಟ್ಟೇಗೌಡ ಮತ್ತಿತರರಿದ್ದರು.

## 21ರಂದು ದೇವಸ್ಥಾನದ ವಾರ್ಷಿಕೋತ್ಸವ

ಚಾಮರಾಜನಗರ, ನಗರದ ಭ್ರಮರಾಂಬ ಬಡಾವಣೆಯ 4ನೇ ಕ್ರಾಸ್ ನಲ್ಲಿರುವ ಶ್ರೀಮಹಾಗಣಪತಿ ದೇವಸ್ಥಾನ ವಾರ್ಷಿಕೋತ್ಸವವು ಜೂ. 21 ರಂದು ನಡೆಯಲಿದೆ.

ಸ್ವಸ್ತಿಶ್ರೀ ಶಾಲಿವಾಹನ ಶಕೆ ವರ್ಷಗಳು 1948ನೇ ಶ್ರೀ ಪರಾಭವ ನಾಮ ಸಂವತ್ಸರ ನಿಜಜೇಷ್ಠ ಮಾಸದ ಶುಕ್ಲಪಕ್ಷದ ಸಪ್ತಮಿ ತಿಥಿ ಭಾನುವಾರದಂದು

ಶ್ರೀ ಮಹಾಗಣಪತಿ ದೇವಸ್ಥಾನದ ವಾರ್ಷಿಕೋತ್ಸವದ ಅಂಗವಾಗಿ ಪ್ರಾತಃಕಾಲ ಮೂಲ ದೇವರ ಅಭಿಷೇಕ, ಗಣಪತಿಪೂಜೆ, ಪುಣ್ಯಾಹ, ಕಳಶ ಸ್ಥಾಪನೆ, ನವಗ್ರಹ ಹೋಮ, ಗಣಪತಿ ಹೋಮ, ಪರಿವಾರ ದೇವತೆಗಳ ಹೋಮ ಹಾಗೂ ಆಂಜನೇಯಸ್ವಾಮಿ ಹೋಮ, ನಂತರ ಶ್ರೀ ಅಂಜನೇಯಸ್ವಾಮಿಯವರಿಗೆ ನೂತನ ಕವಚಧಾರಣೆ ಹಾಗೂ ಮಧ್ಯಾಹ್ನ 12–30 ಗಂಟೆಗೆ ಮಹಾಪೂರ್ಣಾಹುತಿ, ಮಹಾಮಂಗಳಾರತಿ ನಂತರ ಪ್ರಸಾದ ವಿನಿಯೋಗ ನೇರವೇರಲಿದ್ದು ಸಮಸ್ತ ಭಕ್ತ ಮಹಾಶಯರು ಸಕಾಲಕ್ಕೆ ಆಗಮಿಸಿ ಭಗವಂತನ ಕೃಪೆಗೆ ಪಾತ್ರರಾಗಬೇಕು

ಅಂದು ಸಂಜೆ 4:30 ಗಂಟೆಗೆ ಶ್ರೀ ಮಹಾಗಣಪತಿ ದೇವರನ್ನು ಮುತ್ತಿನ ಪಲ್ಲಕ್ಕಿ ಉತ್ಸವವು ಪ್ರಮುಖ ಬೀದಿಗಳಲ್ಲಿ ಜರುಗಲಿದ್ದು ರಾತ್ರಿ 8–30 ಗಂಟೆಗೆ ಮಹಾಮಂಗಳಾರತಿ, ಪ್ರಸಾದ ವಿನಿಯೋಗ ಏರ್ಪಡಿಸಲಾಗಿದೆ. ಈ ಎಲ್ಲಾ ಕಾರ್ಯಕ್ರಮಗಳಿಗೆ ಭಕ್ತಾಧಿಗಳು ಸಕಾಲಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ತನು,ಮನ, ಧನ ಅರ್ಪಿಸಿ ಕಾರ್ಯಕ್ರದ ಯಶಸ್ಸಿಗೆ ಶ್ರಮಿಸಬೇಕು ಎಂದು ಶ್ರೀಮಹಾಗಣಪತಿ ಸೇವಾ ಸಮಿತಿ ಕೋರಿದೆ.




**ಕಾಡಾ ಅಧ್ಯಕ್ಷ ಪಿ.ಮರಿಸ್ವಾಮಿ ಹೇಳಿಕೆ । ಶಾಸಕ ದರ್ಶನ್‌ಧ್ರುವನಾರಾಯಣ್‌ರಿಂದ ಕಾನೂನು ಪದವಿ ವಿದ್ಯಾರ್ಥಿಗಳಿಗೆ ಬ್ಲೇಜರ್(ಕಪ್ಪು ಕೋಟು) ಕೊಡುಗೆ**

## ಕಾನೂನು ಕಾಲೇಜು ಸ್ಥಾಪನೆಗೆ ದಿ.ಧ್ರುವನಾರಾಯಣ್ ಶ್ರಮ ಬಹಳ

ಚಾಮರಾಜನಗರ, ಶೈಕ್ಷಣ ಕವಾಗಿ ಹಿಂದುಳಿದ ಜಿಲ್ಲೆಯಲ್ಲಿ ಅಭಿವೃದ್ಧಿಪಡಿಸಬೇಕೆಂಬ ಉದ್ದೇಶದಿಂದ ಸಂಸದರಾಗಿದ್ದ ದಿ.ಆರ್. ಧ್ರುವನಾರಾಯಣ್ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಿದ್ದರು. ಅವರ ಶ್ರಮದ ಫಲವೇ ಕಾನೂನು ಕಾಲೇಜು ಸ್ಥಾಪನೆ ಎಂದು ಕಾಡಾ ಅಧ್ಯಕ್ಷ ಪಿ.ಮರಿಸ್ವಾಮಿ ತಿಳಿಸಿದರು.

ನಗರದ ಸರ್ಕಾರಿ ಕಾನೂನು ಕಾಲೇಜಿನಲ್ಲಿ ಪ್ರಥಮ ವರ್ಷದ ಕಾನೂನು ಪದವಿ ವಿದ್ಯಾರ್ಥಿಗಳಿಗೆ ನಂಜನಗೂಡು ಕ್ಷೇತ್ರದ ಶಾಸಕ ದರ್ಶನ್ ಧ್ರುವನಾರಾಯಣ್ ಅವರು ಬ್ಲೇಜರ್(ಕಪ್ಪು ಕೋಟು)ಅನ್ನು ಕೊಡುಗೆಯಾಗಿ ನೀಡಿದ್ದು, ಇದನ್ನು ವಿದ್ಯಾರ್ಥಿಗಳಿಗೆ ವಿತರಿಸಿ ಅವರು ಮಾತನಾಡಿದರು. ಎರಡು ಬಾರಿ ಸಂಸದರಾಗಿ, ಮತ್ತೇರಡು ಬಾರಿ ಶಾಸಕರಾಗಿ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯ ಅಭಿ ವೃದ್ದಿಗೆ ತಮ್ಮದೇ ಆದ ಕೊಡುಗೆಯನ್ನು ದಿ. ಧ್ರುವನಾ ರಾಯನ್ ಅವರು ನೀಡಿದ್ದಾರೆ. ಶೈಕ್ಷಣ ಕವಾಗಿ ಹಿಂದುಳಿದ ಜಿಲ್ಲೆಯನ್ನು ಅಭಿವೃದ್ದಿಪಡಿಸಬೇಕೆಂಬ ಹಂಬಲದೊಂದಿಗೆ ಮೆಡಿಕಲ್ ಕಾಲೇಜು, ಕೇಂದ್ರಿಯ ವಿದ್ಯಾಲಯ,



ಕೃಷಿ ಕಾಲೇಜು, ಇಂಜಿನಿಯರಿಂಗ್ ಕಾಲೇಜು, ಏಕಲವ್ಯ ಶಾಲೆ ಸೇರಿದಂತೆ ಅನೇಕ ವಸತಿ ಶಾಲೆಯನ್ನು ಜಿಲ್ಲೆಗೆ ತಂದ ಕೀರ್ತಿ ಅವರಿಗೆ ಸಲ್ಲು ತ್ತದೆ. ಇದರೊಂದಿಗೆ ದಿ. ಎಚ್.ಎಸ್. ಮಹದೇವಪ್ರ ಸಾದ್ ಅವರು ಕೊಡುಗೆಯು ಬಯಹ ಬಹಳಿದೆ. ಇವರಿಬ್ಬರು ಜಿಲ್ಲೆಯ ಅಭಿವೃದ್ದಿಗಾಗಿ ಜೋಡೆತ್ತಿದಂತೆ ದುಡಿಯುತ್ತಿದ್ದಾರೆ. ಅವರ ಅಕಾಲಿಕ ಮರಣದಿಂದ ಜಿಲ್ಲೆಗೆ ಹಾಗೂ ನಮಗೆ, ನಿಮಗೆ ಹೆಚ್ಚಿನ ನಷ್ಟವಾಗಿದೆ. ಇವರ ಮಕ್ಕಳಾದ ದರ್ಶನ್, ಮತ್ತು ಗಣೇಶ್ ಪ್ರಸಾದ್ ಶಾಸಕರಾಗಿ ಜನ ಸೇವೆಯಲ್ಲಿ ತೊಡಗಿಸಿಕೊಂಡಿದ್ದಾರೆ ಎಂದರು.

ಶಾಸಕ ದರ್ಶನ್ ಧ್ರುವನಾರಾಯಣ್ ಓರ್ವ ವಕೀಲರು, ಅವರಿಗೆ ಕಾನೂನು ವಿದ್ಯಾರ್ಥಿಗಳ ಸಂಕಷ್ಟ ಅರಿವಿದೆ. ಹೀಗಾಗಿ ನಿಮ್ಮ ಮನವಿಗೆ ಸ್ಪಂದಿಸಿ, ಬ್ಲೇಜರ್ ಕೊಡಿಸಿದ್ದಾರೆ. ಇನ್ನು ಹೆಚ್ಚಿನ ರೀತಿಯಲ್ಲಿ ಅವರು ಸಹಾಯ ಮಾಡಲಿದ್ದಾರೆ. ಅವರಿಗೆ ಸಹ ತಂದೆಯಂತೆ ಚಾನಗರ ಜಿಲ್ಲೆಯ ಬಗ್ಗೆ ಅಪಾರ ಪ್ರೀತಿ ಇದೆ ಎಂದರು.

ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಬಿ.ಕೆ. ರವಿಕುಮಾರ್ ಮಾತನಾಡಿ, ಸಂಸದರಾಗಿದ್ದ ಧ್ರುವನಾರಾಯಣ್ ಅವರಿಗೆ ಜಿಲ್ಲೆಯಲ್ಲಿ ಕಾನೂನು ಕಾಲೇಜು ಆರಂಭಿಸಬೇಕೆಂಬ ಕನಸು ಇತ್ತು. ಇದನ್ನು ನೆನಸಲು ಮಾಡಲು ಅವರು ಮಾಡಿದ ಪ್ರಯತ್ನಗಳು ಹಲವು, ಉತ್ತರದ ಬೀದರ್ಗೆ ಮಂಜೂರು ಆಗಿದ್ದ ಕಾನೂನು ಕಾಲೇಜನ್ನು ದಕ್ಷಿಣದ ಚಾ.ನಗರಕ್ಕೆ ತಂದದ್ದೇ ಅದ್ಬುತ. ಅಂದಿನ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಕಾನೂನು ಸಚಿವರಾಗಿದ್ದ ಜಯಚಂದ್ರ ಅವರ ಮುಖಾಂತರ ಜಿಲ್ಲೆಯಲ್ಲಿ ಕಾಲೇಜಿಗೆ ಅಗತ್ಯವಾದ ಎಲ್ಲಾ ಮೂಲಭೂತ ಸೌಲಭ್ಯವನ್ನು ಕಲ್ಪಿಸಿಕೊಡುವ ಭರಸವೆಯೊಂದೇ ಕಾಲೇಜು ಆರಂಭಕ್ಕೆ ಅನುಮತಿ ಪಡೆದುಕೊಂಡು ಬಂದರು. ನಂತರ ದಿನಗಳಲ್ಲಿ ಶಾಸಕ ಪುಟ್ಟರಂಗಶೆಟ್ಟರು, ಸಂಸದರಾದ ಸುನೀಲ್ ಬೋಸ್ ಅವರುಗಳ ಪ್ರಯತ್ನದಿಂದ ಕಾಲೇಜು ಆರಂಭವಾಗಿದೆ ಎಂದರು. ಕಾರ್ಯಕ್ರಮದಲ್ಲಿ ಕಾನೂನು ಕಾಲೇಜಿನ ಪ್ರಾಂಶುಪಾಲೆ ಲಲಿತಾ ಬಾಯಿ, ಜಿಲ್ಲಾ ಕಾಂಗ್ರೆಸ್ ಮಧ್ಯಮ ಕಾರ್ಯದರ್ಶಿ ಗೌಡಹಳ್ಳಿ ರಾಜೇಶ್, ಎನ್‌ಎಸ್‌ಯುಐನ ಅಧ್ಯಕ್ಷ ನಾಗು ಮೋಹನ್, ತಾಲೂಕು ಯುವ ಕಾಂಗ್ರೆಸ್ ಅಧ್ಯಕ್ಷ ಅಕ್ಷಯ್, ವಿದ್ಯಾರ್ಥಿ ಕಾಲೇಜು ವಿದ್ಯಾರ್ಥಿ ಸಂಘದ ಅಧ್ಯಕ್ಷ ನಿಶ್ಚಿತ್ ಕುಮಾರ್ ಹಾಗೂ ವಿದ್ಯಾರ್ಥಿಗಳು ಇದ್ದರು.

## ಜೂ.21ಕ್ಕೆ ಎಸ್. ಎಲ್.ಬೈರಪ್ಪ ಸಂಸ್ಮರಣೆ

ಮೈಸೂರು: ಶ್ರೀರಂಗಪಟ್ಟಣದ ಪ್ರಿಯದರ್ಶನ ಸಾಂಸ್ಕೃತಿಕ ವೇದಿಕೆ ವತಿಯಿಂದ ಜೂ. 21 ರ ಸಂಜೆ 4ಕ್ಕೆ ಕೃಷ್ಣಮೂರ್ತಿಪುರಂ ಬಿಎಸ್‌ಎಸ್ ವಿದ್ಯೋದಯ ರಾಮ ಅಯ್ಯರ್ ರಸ್ತೆಯ ಪದ್ಮಜಾ ಶ್ರೀನಿವಾಸ ಸಭಾಂಗಣದಲ್ಲಿ ಡಾ.ಎಸ್.ಎಲ್. ಭೈರಪ್ಪ ಸಂಸ್ಮರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಸಂಸ್ಕೃತ ವಿದ್ವಾಂಸ ಗ.ನಾ. ಭಟ್ಟ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಹಿರಿಯ ಪತ್ರಕರ್ತ ವಿಶ್ವೇಶ್ವರ ಭಟ್ ಅಧ್ಯಕ್ಷತೆ ವಹಿಸುವರು, ಡಾ.ಎಚ್.ವಿ. ನಾಗರಾಜರಾವ್, ಆರ್. ವಾಸುದೇವ ಭಟ್ ಅತಿಥಿಗಳಾಗಿರುವರು, ಭೈರಪ್ಪ ಮತ್ತು ರಾಷ್ಟ್ರೀಯತೆ ಕುರಿತು ಪ್ರೊ. ಅಜಕ್ಕಳ ಗಿರೀಶ್ ಭಟ್, ಭೈರಪ್ಪನವರ ವೈಚಾರಿಕತೆ ಮತ್ತು ಚಿಂತನ– ಮಂಥನಗಳು ಕುರಿತು ತಾವು ಮಾತನಾಡುವುದಾಗಿ ತಿಳಿಸಿದರು. ಗೀತಾ ವಿ.ಹೆಗ್ಗಡೆ, ಪ್ರಿಯದರ್ಶನ್ ಇದ್ದರು.



# ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ: ಅಣಕು ಪ್ರತಿಭಟನೆ




ಮೈಸೂರು: ನೀಟ್ ಯುಜಿ ಪ್ರಶ್ನೆ ಪತ್ರಿಕೆ ಸೋರಿಕೆಯಿಂದ ವಿದ್ಯಾರ್ಥಿಗಳ ಸಾವಿಗೆ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಕಾರಣರಾಗಿದ್ದಾರೆ ಎಂದು ಆರೋಪಿಸಿ, ಅಣಕು ಶವಯಾತ್ರೆಯ ಮೂಲಕ ಕೆ.ಆರ್.ಕ್ಷೇತ್ರದ ಕಾಂಗ್ರೆಸ್ ಪದಾಧಿಕಾರಿಗಳು ಗುರುವಾರ ರಾಮಸ್ವಾಮಿ ವೃತ್ತದ ಬಳಿ ಪ್ರತಿಭಟನೆ ನಡೆಸಿದರು.

ದೇಶಾದ್ಯಂತ ನೀಟ್ ಹಗರಣದಿಂದ ಬೇಸತ್ತು ಕೆಲ ವಿದ್ಯಾರ್ಥಿಗಳು ಆತ್ಮಹತ್ಯೆಗೆ ಶರಣಾಗಿದ್ದು, ಕೇಂದ್ರ ಸರಕಾರವು ವಿದ್ಯಾರ್ಥಿ ವಿರೋಧಿ ನೀತಿ ಅನುಸರಿಸುತ್ತಿದೆ. ನೀಟ್ ಹಗರಣವನ್ನು ನಿರ್ಲಕ್ಷ್ಯ ಮಾಡಿ ಹಲವಾರು ವಿದ್ಯಾರ್ಥಿಗಳ ಸಾವಿಗೆ ಕಾರಣರಾಗಿರುವ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರ ಅಣಕು ಶವಯಾತ್ರೆಯ ಮೂಲಕ ಆಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಮಾತನಾಡಿ, 22 ಲಕ್ಷ ವಿದ್ಯಾರ್ಥಿಗಳು ಹಾಗೂ ವಿದ್ಯಾರ್ಥಿಗಳನ್ನು ನಂಬಿರುವ ಪೋಷಕರ ಕುಟುಂಬದ ಬದುಕಿನ ಭವಿಷ್ಯದ ಜೊತೆ ಕೇಂದ್ರ ಸರಕಾರ ಚೆಲ್ಲಾಟವಾಡುತ್ತಿದೆ. ನೀಟ್ ಪರೀಕ್ಷೆಯ ಮರು ಪರೀಕ್ಷೆಯ ಬೇಸರದಿಂದ ಕೆಲವು ವಿದ್ಯಾರ್ಥಿಗಳು ಪ್ರಾಣ ಕಳೆದುಕೊಂಡಿದ್ದಾರೆ ಎಂದು ಕಿಡಿಕಾರಿದರು. ವಿದ್ಯಾರ್ಥಿಗಳ ಮಾನಸಿಕ ಮತ್ತು ಬೌದ್ಧಿಕ ಮಟ್ಟಕ್ಕೆ ಪೆಟ್ಟು ನೀಡುವಂತಹ ಕೆಟ್ಟ ಕೆಲಸ ಬಿಜೆಪಿ ನೇತೃತ್ವದ ಕೇಂದ್ರ ಸರಕಾರದಲ್ಲಿ ನಿರಂತರವಾಗಿ ನಡೆದಿದೆ. ಇಡೀ ದೇಶ ವ್ಯಾಪ್ತಿಯಲ್ಲಿ ನೀಟ್ ಮತ್ತು ಇನ್ನಿತರ ಪ್ರವೇಶ ಪರೀಕ್ಷೆಗಳಿಗೋಸ್ಕರ ಪೋಷಕರು, ಕೋಟ್ಯಂತರ ರೂಪಾಯಿ ಖರ್ಚು ಮಾಡುತ್ತಾರೆ. ಮಕ್ಕಳ ಪರಿಶ್ರಮ ಮತ್ತು ಪೋಷಕರ ಹಣವನ್ನು ವ್ಯರ್ಥ ಮಾಡುತ್ತಿರುವ ಕೇಂದ್ರ ಸರಕಾರದ ಧೋರಣೆ ಖಂಡನೀಯ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಕೂಡಲೇ ತಮ್ಮ ಸಚಿವ ಸ್ಥಾನಕ್ಕೆ ರಾಜೀನಾಮೆ ಕೊಡಬೇಕು. ದೇಶದಲ್ಲಿ ಒಂದು ಪರೀಕ್ಷೆ ನಡೆಸಲು ಸೈನ್ಯವನ್ನು ನಿಯೋಜನೆ ಮಾಡುವಂತಹ ಅಭದ್ರತೆಯ ಕೇಂದ್ರ ಸರಕಾರ ನಮ್ಮ ದೇಶದಲ್ಲಿದೆ ಎಂದು ಹೇಳಲು ನಾಚಿಕೆ ಪಡುವಂತಾಗಿದೆ. ವಿಶ್ವಗುರು ಎಂದು ಬೆನ್ನು ತಟ್ಟಿಕೊಳ್ಳುವ ಮೋದಿ ಅವರು ದೇಶದ ಮಕ್ಕಳಿಗೆ ನೀಡಿರುವ ಅತೀ ದೊಡ್ಡ ಪೆಟ್ಟು ಇದಾಗಿದ್ದು, ದೇಶದ ಪರೀಕ್ಷೆ ಇತಿಹಾಸದಲ್ಲಿ ಕಪ್ಪು ಚುಕ್ಕೆ ತಂದ ಕೀರ್ತಿ ಇವರದಾಗಿದೆ ಎಂದು ಕಿಡಿಕಾರಿದರು. ಪ್ರತಿಭಟನೆಯಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಜಿ.ಸೋಮಶೇಖರ್, ಶ್ರೀಧರ್, ಮಾಜಿ ಮೇಯರ್‌ಗಳಾದ ಟಿ.ಬಿ. ಚಿಕ್ಕಣ್ಣ, ಪುಷ್ಪಲತಾ ಚಿಕ್ಕಣ್ಣ, ನಗರ ಪಾಲಿಕೆ ಮಾಜಿ ಸದಸ್ಯ ಜೆ.ಗೋಪಿ, ಆರ್.ಎಚ್.ಕುಮಾರ್, ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಜೆ.ವಿನಯ್ ಕುಮಾರ್, ಸದಸ್ಯ ಡೈರಿ ವೆಂಕಟೇಶ್, ಕಾಂಗ್ರೆಸ್ ಮುಖಂಡರಾದ ರವಿಶಂಕರ್, ಜೋಗಿ ಮಹೇಶ್, ಅಶೋಕಪುರಂ ಮಂಜುನಾಥ್, ರಮೇಶ್, ಆಶ್ರಯ ಸಮಿತಿ ಸದಸ್ಯ ಗುಣಶೇಖರ್, ಸೋಮು ಕುರುಬಾರಳ್ಳಿ ಮತ್ತಿತರರು ಪಾಲ್ಗೊಂಡಿದ್ದರು.

## 23ರಂದು ಕುಂದು ಕೊರತೆ ಪರಿಹಾರಕ್ಕೆ ನೇರ ಫೋನ್ ಇನ್ ಕಾರ್ಯಕ್ರಮ

ಚಾಮರಾಜನಗರ, ಜಿಲ್ಲೆಯ ಸಾರ್ವಜನಿಕರ ಕುಂದು ಕೊರತೆಗಳನ್ನು ಆಲಿಸಿ ಪರಿಹರಿಸುವ ಸಲುವಾಗಿ ನೇರ ಫೋನ್ ಇನ್ ಕಾರ್ಯಕ್ರಮವನ್ನು ಜೂನ್ 23ರಂದು ಬೆಳಿಗ್ಗೆ 11 ರಿಂದ 12 ಗಂಟೆಯವರೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ.

ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಹಾಗೂ ಇತರೆ ಎಲ್ಲಾ ಜಿಲ್ಲಾಮಟ್ಟದ ಅಧಿಕಾರಿಗಳು ನೇರ ಫೋನ್ ಇನ್ ಕಾರ್ಯಕ್ರಮದಲ್ಲಿ ಉಪಸ್ಥಿತರಿರುತ್ತಾರೆ.

ಸಾರ್ವಜನಿಕರು ಜೂನ್ 23ರಂದು ಬೆಳಿಗ್ಗೆ 11 ರಿಂದ 12 ಗಂಟೆಯವರೆಗೆ ದೂರವಾಣಿ ಸಂಖ್ಯೆ 08226-223163 ಗೆ ಕರೆ ಮಾಡಿ ತಮ್ಮ ಕುಂದು ಕೊರತೆಗಳನ್ನು ತಿಳಿಸಿ ಪರಿಹರಿಸಿಕೊಳ್ಳುವಂತೆ ಜಿಲ್ಲಾಧಿಕಾರಿಯವರು ಪ್ರಕಟಣೆಯಲ್ಲಿ ಕೋರಿದ್ದಾರೆ.

ಕರ್ನಾಟಕ ಸರ್ಕಾರ
ಮುಖ್ಯ ವೈದ್ಯಾಧಿಕಾರಿಗಳ ಕಛೇರಿ,
ಸಾರ್ವಜನಿಕ ಆಸ್ಪತ್ರೆ, ಶ್ರೀರಂಗಪಟ್ಟಣ, ಮಂಡ್ಯ ಜಿಲ್ಲೆ
ಸಂಖ್ಯೆ:ಸಾ.ಆ.ಶ್ರೀ/87/2026-27 ದಿ:17-06-2026.

ಇ-ಪ್ರಕ್ಯೂರ್‌ಮೆಂಟ್ ಪಕಟಣೆ

2026-27 ನೇ ಸಾಲಿಗೆ 31/03/2027 ರವರೆಗೆ ಮಾತ್ರ ಒಳರೋಗಿಗಳಿಗೆ ಸಿದ್ಧಪಡಿಸಿದ ಪಥ್ಯಾಹಾರವನ್ನು ಪೂರೈಕೆ ಮಾಡಲು ಅರ್ಹ ಟೆಂಡರ್‌ದಾರರಿಂದ/ ಮಾನ್ಯತೆ ಪಡೆದ ಅಧಿಕೃತ ಸಂಸ್ಥೆಗಳಿಂದ ಕರ್ನಾಟಕ ಪಾರದರ್ಶಕ ಅಧಿನಿಯಮ 1999-2000 ಮೇರೆಗೆ ದ್ವಿಲಕೋಟೆ ಪದ್ಧತಿಯನ್ವಯ ಮೊಹರಾದ ಟೆಂಡರ್‌ಗಳನ್ನು ಅಹ್ವಾನಿಸಲಾಗಿದೆ. ಟೆಂಡರ್ ಅಂದಾಜು ಮೊತ್ತ, ಇ.ಎಂ.ಡಿ ಮೊತ್ತ ಮತ್ತು ಇತರೆ ಟೆಂಡರ್‌ಗೆ ಸಂಬಂಧಿಸಿದ ಮಾಹಿತಿಯನ್ನು www.eproc.karnataka.gov.in ವೆಬ್ ಸೈಟ್ ನಿಂದ ಡೌನ್ ಲೋಡ್ ಮಾಡಿಕೊಂಡು ಸಲ್ಲಿಸುವ ಮೂಲಕ ಇ-ಪ್ರಕ್ಯೂರ್‌ಮೆಂಟ್ ನಲ್ಲಿ ಭಾಗವಹಿಸಬಹುದು. ಭರ್ತಿ ಮಾಡಿದ ಟೆಂಡರ್‌ಗಳನ್ನು ದಿ:16.07.2026 ರ ಸಂಜೆ 5.30 ಘಂಟೆಯೊಳಗೆ ಸಲ್ಲಿಸಬೇಕು. ಹೆಚ್ಚಿನ ವಿವರಗಳನ್ನು ಮೇಲ್ಕಂಡ ಕಛೇರಿಯಿಂದ ಕಛೇರಿ ವೇಳೆಯಲ್ಲಿ ಪಡೆಯಬಹುದಾಗಿದೆ ಅಥವಾ ವೆಬ್‌ಸೈಟ್‌ನಲ್ಲಿ ಕಾಣಬಹುದು.

ಸಹಿ/-ಮುಖ್ಯ ವೈದ್ಯಾಧಿಕಾರಿಗಳು,
ಸಾರ್ವಜನಿಕ ಆಸ್ಪತ್ರೆ, ಶ್ರೀರಂಗಪಟ್ಟಣ, ಮಂಡ್ಯ ಜಿಲ್ಲೆ.

ವಾಸಾಸಂಇ/ಹಿಸನಿ-ಮಂ/ಕೆಎಸ್‌ಎಂಸಿ&ಎ/211/2025-26

# ಫ್ಲಾರೆನ್ಸ್ ನೈಟಿಂಗೇಲ್ ಸೇವೆ ಸ್ಮರಣೀಯ



ಚಾಮರಾಜನಗರ, ಆಧುನಿಕ ನರ್ಸಿಂಗ್‌ನ ಸಂಸ್ಥಾಪಕಿ ಫ್ಲಾರೆನ್ಸ್ ನೈಟಿಂಗೇಲ್ ಅವರ ನಿಸ್ವಾರ್ಥ ಸೇವೆ ಮತ್ತು ತ್ಯಾಗ ನಿಜಕ್ಕೂ ಶ್ರೇಷ್ಠವಾದುದು ಎಂದು ಚಾಮರಾಜ ನವರ ವೈದ್ಯಕೀಯ ವಿಜ್ಞಾನ ಸಂಸ್ಥೆ ಮತ್ತು ಬೋಧನಾ ಆಸ್ಪತ್ರೆಯ ಡೀನ್ ಮತ್ತು ನಿರ್ದೇಶಕ ಹೆಚ್.ಜಿ. ಮಂಜುನಾಥ್ ಹೇಳಿದರು.

ನಗರದ ಯಡಬೆಟ್ಟದಲ್ಲಿರುವ ಚಾಮರಾಜನಗರ ವೈದ್ಯಕೀಯ ವಿಜ್ಞಾನ ಸಂಸ್ಥೆ ಮತ್ತು ಬೋಧನಾ ಆಸ್ಪತ್ರೆಯಲ್ಲಿ ನಡೆದ ಅಂತರಾಷ್ಟ್ರೀಯ ಶುಶೂಷಕ ಅಧಿಕಾರಿಗಳ ದಿನಾಚರಣೆ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಗಾಯಾಳು ಸೈನಿಕರ ಪಾಲಿಗೆ 'ದೇವತೆ'ಯಂತೆ ಹಗಲಿರುಳು ದುಡಿದ ಅವರು, ವೈದ್ಯಕೀಯ ಮತ್ತು ದಾದಿಯರ ಕ್ಷೇತ್ರಕ್ಕೆ ನೀಡಿದ ಕೊಡುಗೆಗಳು ಇತಿ ಹಾಸದಲ್ಲಿ ಸದಾ ಸ್ಮರಣೀಯ ಎಂದರು. ಅಂತಾ ರಾಷ್ಟ್ರೀಯ ಶುಶ್ರೂಷಕ ಅಧಿಕಾರಿಗಳ ದಿನಾಚರಣೆ ಯನ್ನು ಪ್ರತಿ ವರ್ಷ ಮೇ 12 ರಂದು ವಿಶ್ವದಾದ್ಯಂತ ಆಚರಿಸಲಾಗುತ್ತದೆ. ಆಧುನಿಕ ನರ್ಸಿಂಗ್‌ನ ಸಂಸ್ಥಾಪಕಿ ಫ್ಲಾರೆನ್ಸ್ ನೈಟಿಂಗೇಲ್ ಅವರ ಜನ್ಮ ದಿನದ ನೆನಪಿಗಾಗಿ ಈ ದಿನವನ್ನು ಆಚರಿಸಲಾಗುತ್ತದೆ. ಶುಶ್ರೂಷಕರು ಆರೋಗ್ಯ ಕ್ಷೇತ್ರದಲ್ಲಿ ಸಲ್ಲಿಸುತ್ತಿರುವ ಅಮೂಲ್ಯವಾದ ಮತ್ತು ನಿಸ್ವಾರ್ಥ ಸೇವೆಯನ್ನು ಗೌರವಿಸುವುದು ಈ ದಿನದ ಮುಖ್ಯ ಉದ್ದೇಶವಾಗಿದೆ ಎಂದರು. ಫ್ಲಾರೆನ್ಸ್ ನೈಟಿಂಗೇಲ್ ಅವರ ನಿಸ್ವಾರ್ಥ ಸೇವೆ ಮತ್ತು ತ್ಯಾಗ ನಿಜಕ್ಕೂ ಶ್ರೇಷ್ಠವಾದುದು. ಗಾಯಾಳು ಸೈನಿಕರ ಪಾಲಿಗೆ 'ದೇವತೆ'ಯಂತೆ ಹಗಲಿರುಳು ದುಡಿದ ಅವರು, ವೈದ್ಯಕೀಯ ಮತ್ತು ದಾದಿಯರ ಕ್ಷೇತ್ರಕ್ಕೆ ನೀಡಿದ ಕೊಡುಗೆಗಳು ಇತಿಹಾಸದಲ್ಲಿ ಸದಾ ಸ್ಮರಣೀಯ. ಎಲ್ಲ ಚೆನ್ನಾಗಿ ಕೆಲಸ ಮಾಡುತಿ ದ್ದೀರಿ. ನಾವು ಒಳ್ಳೆಯ ಕೆಲಸ ಮಾಡುವಾಗ ವಿಘ್ನ ಬರುತ್ತದೆ. ಅ ವಿಘ್ನಗಳನ್ನು ಎದುರಿಸಿ ಕೆಲಸ ಮಾಡುವ ಮೂಲಕ ರೋಗಿಗಳಿಗೆ ಉತ್ತಮ ಸೇವೆ ನೀಡಬೇಕಾಗುತ್ತದೆ ಎಂದರು. ಒಬ್ಬ ರೋಗಿಯನ್ನು ಚೆನ್ನಾಗಿ ಗುಣ ಮಾಡಿ ಮನೆಕಳುಹಿ ಸಿಕೊಡುವುದರಿಂದ ಸಿಗುವ ಸಂತೋಷ ಯಾವುದ ರಲ್ಲೂ ಸಿಗೋದಿಲ್ಲ. ಆಸ್ಪತ್ರೆ ಸ್ವಚ್ಛವಾಗಿಟ್ಟುಕೊಳ್ಳಿ. ಸಿಮ್ಸ್ ನಿಮ್ಮ ಆಸ್ಪತ್ರೆ, ನಮ್ಮ ಆಸ್ಪತ್ರೆ ಎಂದು ತಿಳಿದು ಕೊಂಡು ಕೆಲಸ ಮಾಡಿ. ಆಸ್ಪತ್ರೆ ಸ್ವಚ್ಛವಾಗಿಟ್ಟುಕೊಂಡು ರೋಗಿಯೊಂದಿಗೆ ಅಕ್ಕರೆ ಮಾತನಾಡಿ,...ರೋಗಿ ಗುಣಮುಖರಾಗುತ್ತಾರೆ ನಮ್ಮ ಬದುಕು ಸಾರ್ಥಕ ಆಗುತ್ತದೆ ಎಂದರು. ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಎಂ.ಚೆನ್ನಭೋವಿ, ಮೆಡಿಕಲ್ ಸೂಪರಡೆಂಟ್ ಡಾ.ಸಿ.ವಿ.ಮಾರುತಿ, ನಿವಾಸಿ ವೈದ್ಯಾಧಿಕಾರಿ ಇಜಾಜ್ ವುಲ್ಲಾಖಾನ್, ಪ್ರಾಂಶುಪಾಲ ಕೆ.ಟಿ.ಅಜಯ್, ನರ್ಸಿಂಗ್ ಅಧೀಕ್ಷಕಿ ಗ್ರೇಡ್ 2

# ಗ್ಯಾರಂಟಿ ಫಲಾನುಭವಿಗಳಿಗೆ ಆತಂಕ ಬೇಡ



ಮೈಸೂರು: ಬಡವರಿಗೆ ಅನುಕೂಲವಾಗಲೆಂದು ಗ್ಯಾರಂಟಿ ಯೋಜನೆಗಳನ್ನು ನಮ್ಮ ಸರ್ಕಾರ ಅನುಷ್ಠಾನ ಮಾಡಿದ್ದು, ಯಾವುದೇ ಕಾರಣಕ್ಕೂ ಸ್ಥಗಿತಗೊಳಿಸುವುದಿಲ್ಲ. ಆದ್ದರಿಂದ ಫಲಾನುಭವಿಗಳು ಆತಂಕಕ್ಕೆ ಒಳಗಾಗಬಾರದು ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ತಾಲ್ಲೂಕು ಅಧ್ಯಕ್ಷ ಬಿ.ಗುರುಸ್ವಾಮಿ ತಿಳಿಸಿದರು.

ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಗುರುವಾರ ನಡೆದ ಗ್ಯಾರಂಟಿ ಯೋಜನೆಗಳ ಅನು ಷ್ಠಾನ ಸಮಿತಿಯ ತಾಲ್ಲೂಕು ಮಟ್ಟದ ಪ್ರಗತಿ ಪರಿ ಶೀಲನಾ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು. ಗೃಹಲಕ್ಷ್ಮಿ ಯೋಜನೆಯ ಹಣವು ಮೃತಪಟ್ಟವರ ಖಾತೆಗೆ ಸಂದಾಯವಾಗುತ್ತಿದ್ದರೆ, ಅಂತಹ ಪ್ರಕರ ಣವನ್ನು ಪರಿಶೀಲಿಸಿ ಕ್ರಮ ಕೈಗೊಳ್ಳಬೇಕು. ಅದೇ ಕುಟುಂಬದ ಅರ್ಹ ಯಜಮಾನಿಯನ್ನು ನೋಂದಣಿ ಮಾಡಿಸಬೇಕು. ಅಲ್ಲದೆ, ತಾಂತ್ರಿಕ ಸಮಸ್ಯೆಯಿಂದ ಹೆಸರು ಕೈಬಿಟ್ಟದ್ದಲ್ಲಿ ಅವರನ್ನು ನೋಂದಣಿ ಮಾಡಿಸಬೇಕು ಎಂದು ತಿಳಿಸಿದರು.

ಗ್ರಾಮ ಪಂಚಾಯಿತಿಯೂ ಸೇರಿ ಇಲಾಖೆಗಳು ಒಟ್ಟಾಗಿ ಪರಿಶೀಲನೆ ಮಾಡಬೇಕು. ನಗರ ಪ್ರದೇಶದಲ್ಲಿ 2825, ಗ್ರಾಮಾಂತರದಲ್ಲಿ 1527 ಸೇರಿದಂತೆ ಒಟ್ಟು 4352 ಮರಣ ಹೊಂದಿದ್ದಾರೆ. ಅದರಲ್ಲಿ ಇಲ್ಲಿಯವರೆಗೆ 1756 ಫಲಾನುಭವಿಗಳನ್ನು ಅದೇ ಮನೆಯಲ್ಲಿ ಗುರುತಿಸಿ ನೋಂದಣಿ ಮಾಡಿಸಿ ಅವರ ಖಾತೆಗೆ ಹಣ ಜಮೆಯಾಗುತ್ತಿದೆ ಎಂದು ಮಾಹಿತಿ ಇದೆ. ಈ ಪ್ರಗತಿಯ ವೇಗ ಹೆಚ್ಚಿಸಬೇಕು ಎಂದು ಸೂಚನೆ ನೀಡಿದರು.

ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಸಿ.ಕೃಷ್ಣ ಮಾತನಾಡಿ, ಗ್ಯಾರಂಟಿ ಯೋಜ ನೆಯನ್ನು ನಮ್ಮ ತಾಲ್ಲೂಕಿನಲ್ಲಿ ಉತ್ತಮವಾಗಿ ಅನುಷ್ಠಾನಗೊಳಿಸಬೇಕು. ಮೃತಪಟ್ಟ ಗೃಹಲಕ್ಷ್ಮೀ ಫಲಾನುಭವಿಗಳನ್ನು ಪರಿಶೀಲನೆ ನಡೆಸಬೇಕು. ಅಧ್ಯಕ್ಷರು ಹಾಗೂ ಸದಸ್ಯರು ತಿಳಿಸುವ ದೂರುಗಳಿಗೆ ಸಂಬಂಧಿಸಿದ ಅಧಿಕಾರಿಗಳು ಸ್ಪಂದಿಸಿ ಮುತವರ್ಜಿ ಯಿಂದ ಸಮಸ್ಯೆ ಬಗೆಹರಿಸಬೇಕು ಎಂದು ಸೂಚಿಸಿ ದರು. ಸಭೆಯಲ್ಲಿ ಸಮಿತಿಯ ಸದಸ್ಯ ಬಿ.ರವಿ, ರಾಣಿ, ಎಂ.ಸೋಮಣ್ಣ, ಕರೀಗೌಡ, ಮಹದೇವು, ಶಂಕರ್, ತಾ.ಪಂ.ಯೋಜನಾಧಿಕಾರಿ ಸುರೇಶ್, ವಿಷಯ ನಿರ್ವಾಹಕ ಬಿ.ಆರ್.ಸೋಮಶೇಖರ್ ಸೇರಿ ಇತರರು ಹಾಜರಿದ್ದರು.

# ಮೈಸೂರು ವಾರಿಯರ್ಸ್ ಘೋಷಣೆ

## ಜೂ.20 ರಿಂದ ಜು.12ರವರೆಗೆ ಮಹಾರಾಜ ಟ್ರೋಫಿ ಪಂದ್ಯಾವಳಿ



ಮೈಸೂರು: ಜೂ.20ರಿಂದ ಜು.12ರವರೆಗೆ ಮೈಸೂರು, ಬೆಂಗಳೂರು, ಹುಬ್ಬಳ್ಳಿಯಲ್ಲಿ ನಡೆಯಲಿರುವ ಮಹಾರಾಜ ಟ್ರೋಫಿಗೆ ಮೈಸೂರು ವಾರಿಯರ್ಸ್ ಸಜ್ಜಾಗಿದ್ದು, ಪ್ರಶಸ್ತಿ ಗೆಲ್ಲುವ ತವಕದಲ್ಲಿದೆ.

ಎನ್.ಆರ್‌ಗ್ರೂಪ್ ಮಾಲೀಕತ್ವದ ಎರಡು ಬಾರಿಯ ಚಾಂಪಿಯನ್ ಮೈಸೂರು ವಾರಿಯರ್ಸ್ ಅನುಭವಿ ಹಾಗೂ ಯುವ ಪ್ರತಿಭಾವಂತ ಆಟಗಾರರಿಂದ ಕೂಡಿದ್ದು, ಈ ಬಾರಿ ಪ್ರಶಸ್ತಿ ಗೆಲ್ಲುವ ನೆಚ್ಚಿನ ತಂಡವಾಗಿದೆ. ಟೂರ್ನಿ ಆರಂಭಕ್ಕೆ ಒಂದು ದಿನ ಬಾಕಿಯಿದ್ದು, ಗುರುವಾರ ನಗರದ ಖಾಸಗಿ ಹೋಟೆಲ್‌ನಲ್ಲಿ ನಡೆದ ಕಾರ್ಯಕ್ರಮದಲ್ಲಿ ತಂಡದ ಆಟಗಾರರನ್ನು ಅನಾವರಣಗೊಳಿಸಲಾಯಿತು. ಐಪಿಎಲ್‌ನಲ್ಲಿ ಆರ್‌ಸಿಬಿ, ಪಂಜಾಬ್ ತಂಡ ಪ್ರತಿನಿಧಿಸಿರುವ ಮೈಸೂರಿನವರೇ ಆದ ವೈಶಾಕ್ ವಿಜಯ್‌ಕುಮಾರ್ ತಂಡದ ನಾಯಕನಾಗಿ ಆಯ್ಕೆಯಾದರು.

ಈ ವೇಳೆ ಮಾತನಾಡಿದ ತಂಡದ ಮಾಲೀಕ ಅರ್ಜುನ್ ರಂಗ, ಈ ಬಾರಿಯ ಟೂರ್ನಿಗಾಗಿ ಮೈಸೂರು ವಾರಿಯರ್ಸ್ ಸಜ್ಜಾಗಿದ್ದು, ಬ್ಯಾಟಿಂಗ್ ಹಾಗೂ ಬೌಲಿಂಗ್‌ನಲ್ಲಿ ಸಮಬಲದೊಂದಿಗೆ ಕೂಡಿದೆ. ಭಾರತ ತಂಡ, ಕರ್ನಾಟಕ ತಂಡದಲ್ಲಿ ಆಡಿರುವ ಆಟಗಾರರೊಂದಿಗೆ, ಯುವ ಆಟಗಾರರು ತಂಡಕ್ಕೆ ಆಸರೆಯಾಗಿದ್ದು, ಟೂರ್ನಿಯಲ್ಲಿ ಉತ್ತಮ ಪ್ರದರ್ಶನ ನೀಡುವ ವಿಶ್ವಾಸವಿದೆ ಎಂದು ಹೇಳಿದರು.

ತಂಡದ ಮುಖ್ಯ ಕೋಚ್ ಆರ್.ಎಕ್ಸ್. ಮುರಳೀಧರ್ ಮಾತನಾಡಿ, ನಮ್ಮದು ಶಕ್ತಿಯುತ ತಂಡ. ಉತ್ತಮ ಬ್ಯಾಟ್ಸ್‌ಮನ್‌ಗಳು, ಬೌಲರ್‌ಗಳನ್ನು ಹೊಂದಿದ್ದೇವೆ. ಅಂತಾರಾಷ್ಟ್ರೀಯ ಕ್ರಿಕೆಟ್, ದೇಶೀಯ ಕ್ರಿಕೆಟ್ ಆಡಿದವರು ನಮ್ಮ ತಂಡದಲ್ಲಿ ಇದ್ದಾರೆ. ಉತ್ಸಾಹಿ ಯುವ ಪಡೆ ನಮ್ಮಲ್ಲಿದೆ. ಮುಖ್ಯವಾಗಿ ವೈಶಾಕ್ ಅವರಂತಹ ಆಟಗಾರರ ನಾಯಕತ್ವದಲ್ಲಿ ನಮ್ಮ ತಂಡ ಈ ಬಾರಿ ಟೂರ್ನಿಯಲ್ಲಿ ಉತ್ತಮ ಪ್ರದರ್ಶನ ನೀಡಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

### ತಂಡ

ವೈಶಾಕ್ ವಿಜಯ್‌ಕುಮಾರ್(ನಾಯಕ), ರೋಹನ್ ಆರ್.ರೇವಂಕರ್, ಅಭಿಷೇಕ್ ಪ್ರಭಾಕರ್, ಎಸ್.ಅಗಸ್ತ್ಯ, ಯುವರಾಜ್ ಅರೋರಾ, ಲಿಖಿತ್ ಬನ್ನೂರು, ದೀಪಕ್ ದೇವಾಡಿಗ, ಸಿ.ಸಂಜಯ್ ಅಶ್ವಿನ್, ಕೆ.ಎಸ್. ಲಂಕೇಶ್, ಗೌತಮ್ ಸಾಗರ್, ವಿಶಾಲ್ ಒನ್ನಾಟ್, ಮಾಧವ್ ಪ್ರಕಾಶ್ ಬಜಾಜ್, ಮೋನಿಷ್ ರೆಡ್ಡಿ, ಎಸ್.ಯು.ಕಾರ್ತಿಕ್, ಕೆ.ಪಿ.ಕಾರ್ತಿಕೇಯ, ಲವೀಶ್ ಕೌಶಲ್, ರಿತೇಶ್ ಭಟ್ಕಳ, ಎಲ್.ಆರ್.ಚೇತನ್, ಮನೋಜ್ ಭಾಂಡಗೆ ಹಾಗೂ ದೇವದತ್ ಪಡಿಕ್ಕಲ್.

### ಅಧಿಕೃತ ಗೀತೆ ಬಿಡುಗಡೆ

ಇದಕ್ಕೂ ಮುನ್ನ ಭಾರತ ಕ್ರಿಕೆಟ್ ತಂಡದ ಮಾಜಿ ಆಟಗಾರ ಜಾವಗಲ್ ಶ್ರೀನಾಥ್ 2026ನೇ ಸಾಲಿನ ಮಹಾರಾಜ ಟ್ರೋಫಿ ಹಾಗೂ ಮೈಸೂರು ವಾರಿಯರ್ಸ್ ತಂಡದ ಅಧಿಕೃತ ಗೀತೆ ಬಿಡುಗಡೆಗೊಳಿಸಿದರು. ಕಾರ್ಯಕ್ರಮದಲ್ಲಿ ಕೆಎಸ್‌ಸಿಎ ಕಾರ್ಯದರ್ಶಿ ಸಂತೋಷ್ ಮೆನನ್, ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ(ಕೆಎಸ್‌ಸಿಎ) ಮೈಸೂರು ವಲಯ ಸಂಚಾಲಕ ಶ್ರೀನಿವಾಸ್ ಪ್ರಸಾದ್ ಸೇರಿ ಇತರರು ಇದ್ದರು.

> ಮಹಾರಾಜ ಟ್ರೋಫಿ ಯುವ ಕ್ರಿಕೆಟಿಗರ ಪ್ರತಿಭೆ ಅನಾವರಣಕ್ಕೆ ಉತ್ತಮ ವೇದಿಕೆಯಾಗಿದ್ದು, ಸರಿಯಾಗಿ ಬಳಸಿಕೊಳ್ಳಿ. ಯಾರನ್ನೋ ಮೆಚ್ಚಿಸಲು ಪ್ರಯತ್ನಿಸದೆ ನಿಮ್ಮ ಪ್ರತಿಭೆಗೆ ತಕ್ಕಂತೆ ಆಟವಾಡಿ. ಈ ಬಾರಿಯ ಟೂರ್ನಿಯಲ್ಲಿ ಐಪಿಎಲ್ ಮಾದರಿಯ ತಂತ್ರಜ್ಞಾನ ಅಳವಡಿಸಲಾಗಿದೆ. ಡಿಆರ್‌ಎಸ್ ಸೇರಿದಂತೆ ಹಲವು ತಾಂತ್ರಿಕ ಸೌಲಭ್ಯ ಪರಿಚಯಿಸಲಾಗಿದ್ದು, ನಿಯಮಗಳು, ವ್ಯವಸ್ಥೆಗಳು ಐಪಿಎಲ್ ಮಾದರಿಯಲ್ಲೇ ಇರಲಿವೆ.
> –**ಜಾವಗಲ್ ಶ್ರೀನಾಥ್** ಮಾಜಿ ಕ್ರಿಕೆಟಿಗ

> ಕ್ರಿಕೆಟ್ ಕೇವಲ ಬೆಂಗಳೂರಿಗೆ ಸೀಮಿತವಾಗಿರದೆ ರಾಜ್ಯದ ಎಲ್ಲಾ ವಲಯಗಳಲ್ಲೂ ಬೆಳೆಯಬೇಕೆಂಬ ಉದ್ದೇಶದಿಂದ ವಲಯ ಮಟ್ಟದ ಕ್ರಿಕೆಟ್‌ಗೆ ಹೆಚ್ಚು ಆದ್ಯತೆ ನೀಡಲಾಗುತ್ತಿದೆ. ಮುಂದಿನ ದಿನಗಳಲ್ಲಿ ಮೆಸೂರನ್ನು ರಣಜಿ ಪಂದ್ಯ ಸೇರಿ ಇಂಡಿಯಾ ಎ ಪಂದ್ಯಗಳ ಆತಿಥ್ಯ ಕೇಂದ್ರವನ್ನಾಗಿ ರೂಪಿಸಲಾಗುವುದು. ಜತೆಗೆ ಮಳೆಗಾಲದಲ್ಲಿ ಅಭ್ಯಾಸಕ್ಕೆ ಅನುಕೂಲವಾಗಲೆಂದು ಒಳಾಂಗಣ ಅಭ್ಯಾಸದ ಅಂಕಣ ನಿರ್ಮಿಸಲಾಗುವುದು.
> –**ಸಂತೋಷ್ ಮೆನನ್** ಕೆಎಸ್‌ಸಿಎ

> ನನ್ನ ಕ್ರಿಕೆಟ್ ಪ್ರಯಣ ಆರಂಭ ವಾಗಿದ್ದೇ ಮೈಸೂರು ವಾರಿಯರ್ಸ್ ನಿಂದ. ಇದೀಗ ಅದೇ ತಂಡದ ನಾಯಕನಾಗಿರುವುದಕ್ಕೆ ಖುಷಿಯಾ ಗಿದೆ. ತಂಡ ಅನುಭವಿ ಹಾಗೂ ಯುವ ಆಟಗಾರರಿಂದ ಕೂಡಿದ್ದು, ಉತ್ತಮವಾಗಿದೆ. ಹೀಗಾಗಿ ಪ್ರಶಸ್ತಿ ಜಯಿಸುವ ವಿಶ್ವಾಸವಿದೆ.
> – **ವೈಶಾಕ್ ವಿಜಯಕುಮಾರ್** ಮೈಸೂರು ವಾರಿಯರ್ಸ್ ನಾಯಕ

## ನಿಂತಿದ್ದ ಲಾರಿಗೆ ಕಾರು ಡಿಕ್ಕಿ ಓರ್ವ ಯುವಕ ಮೃತ ಹಲವರಿಗೆ ಗಾಯ

ಚಾಮರಾಜನಗರ, ಯುವಕರು ಪ್ರಯಾಣಿಸುತ್ತಿದ್ದ ಕಾರು ಯಂಳದೂರು ಪಟ್ಟಣದ ಹೊರವಲಯದ ಕಂದಹಳ್ಳಿ ಬಳಿ ಅಪಘಾತಕ್ಕೀಡಾಗಿ ಓರ್ವ ಯುವಕ ಮೃತಪಟ್ಟು ಹಲವರು ಗಾಯಗೊಂಡ ಘಟನೆ ನಡೆದಿದೆ.

ಯಳಂದೂರು ಪಟ್ಟಣದ ನಿವಾದಿ ಪ್ರಸಾದ್ ( 26) ಸ್ಥಳದಲ್ಲೆ ಮೃತಪಟ್ಟರೆ ಗಂಭೀರವಾಗಿ ಗಾಯಗೊಂಡ ಚೇತನ್, ರಾಜೇಶ್ ರನ್ನು ಮೈಸೂರಿನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಉಳಿದಂತೆ ಹರ್ಷ, ಚಂದ್ರು, ದುಂಡ ಮೂವರು ಯಳಂದೂರಿನ ಸರಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಯಳಂದೂರು ಪಟ್ಟಣದಿಂದ ಸಂತೇಮರಹಳ್ಳಿ ಕಡೆಗೆ ಕಾರು ಪ್ರಯಾಣಿಸುತ್ತಿದ್ದಾಗ ಕಂದಹಳ್ಳಿ ರಸ್ತೆ ಬದಿ ನಿಂತಿದ್ದ ಟಿಪ್ಪರ್ ಲಾರಿ ಹಾಗೂ ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆದಿದೆ. ಡಿಕ್ಕಿ ಹೊಡೆದ ರಭಸಕ್ಕೆ ಕಾರಿನ ಮುಂಭಾಗ ನುಜ್ಜು ಗುಜ್ಜಾಗಿದ್ದು ಪ್ರಸಾದ್ ಎಂಬ ಯುವಕನ ತಲೆಗೆ ತೀವ್ರ ಪೆಟ್ಟಾಗಿದ್ದು ಸ್ಥಳದಲ್ಲೇ ಮೃತಪಟ್ಟಿದ್ದಾನೆ. ಘಟನೆ ನಡೆದ ಸ್ಥಳಕ್ಕೆ ಆಗಮಿಸಿದ ಪೊಲೀಸರು ಪರಿಶೀಲನೆ ನಡೆಸಿದರು. ಯುವಕನ ಮೃತ ದೇಹವನ್ನು ಸಿಮ್ಸ್ ಆಸ್ಪತ್ರೆಯ ಶವಗಾರಕ್ಕೆ ರವಾನಿಸಿ ಮರಣೋತ್ತರ ಪರೀಕ್ಷೆ ನಡೆಸಲಾಯಿತು. ಯಳಂದೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ವಿದ್ಯುತ್ ಖಾಸಗೀಕರಣಗೊಳಿಸಿದರೆ ಹೋರಾಟ



ಮೈಸೂರು: ರೈತರಿಗೆ ಮರಣ ಶಾಸನವಾಗಲಿರುವ ವಿದ್ಯುತ್ ಇಲಾಖೆ ಖಾಸಗೀಕರಣ ಹಾಗೂ ಟಾಟಾ ಕಂಪನಿಗೆ ವಿದ್ಯುತ್ ವಿತರಣಾ ಜವಾಬ್ದಾರಿ ನೀಡಿಕೆಗೆ ರಾಜ್ಯ ಸರ್ಕಾರ ಮುಂದಾಗಬಾರದು. ಒಂದು ವೇಳೆ ಅ ರೀತಿ ಮಾಡಿದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ರೈತ ಪರ್ವ ಹೋರಾಟ ನಡೆಸಲಿದೆ ಎಂದು ರಾಜ್ಯಾಧ್ಯಕ್ಷ ಅರುಣ್‌ಕುಮಾರ್ ಎಚ್ಚರಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ವಿದ್ಯುತ್ ಖಾಸಗೀಕರಣದಿಂದ ಜನಸಾಮಾನ್ಯರು ಹಾಗೂ ರೈತಾಪಿ ವರ್ಗದವರಿಗೆ ಆರ್ಥಿಕ ಸಂಕಷ್ಟ ಎದುರಾಗಲಿದೆ. ಉಚಿತ ಪಂಪ್‌ಸೆಟ್ ವಿದ್ಯುತ್‌ಗೆ ಕತ್ತರಿ ಬೀಳಲಿದೆ. ನಿಗದಿತ ವೇಳೆಗೆ ಬಿಲ್ ಪಾವತಿಸದಿದ್ದಲ್ಲಿ ಕೂಡಲೇ ವಿದ್ಯುತ್ ಕಡಿತಗೊಳಿಸುವ ಖಾಸಗೀಕರಣದಿಂದ ಜನರ ಬದುಕು ಕತ್ತಲುಮಯವಾಗಲಿದೆ ಎಂದು ಕಳವಳ ವ್ಯಕ್ತಪಡಿಸಿದರು. ಇದಲ್ಲದೆ, ವಿದ್ಯುತ್ ಇಲಾಖೆಯಲ್ಲಿ ಕೆಲಸ ಮಾಡುವ ಸಾವಿರಾರು ಉದ್ಯೋಗಿಗಳನ್ನು ಬೀದಿಪಾಲು ಮಾಡುವವಂತಾಗುತ್ತದೆ. ಇದು ಎಲ್ಲರಿಗೂ ಮರಣ ಶಾಸನವಾಗುವ ಹಿನ್ನೆಲೆಯಲ್ಲಿ ಸಂಬಂಧಪಟ್ಟ ರೈತ ಸಂಘಟನೆಗಳು ಆಕ್ಷೇಪ ಸಲ್ಲಿಸಿದ್ದು, ಸರ್ಕಾರ ಪುರಸ್ಕರಿಸಬೇಕೆಂದು ಆಗ್ರಹಿಸಿದರು.

ಇನ್ನಿತರ ಪದಾಧಿಕಾರಿಗಳಾದ ಚಾಮರಾಜ ಮಂಡಕಳ್ಳಿ, ಶ್ರೀಧರ್ ನಾಯಕ್, ಭರತ್ ಕಡಕೊಳ, ಮಂಚನಾಯಕ, ಮೀಸೆ ಮಂಜಣ್ಣ ಇದ್ದರು.

## ಚಾಮರಾಜನಗರದಲ್ಲಿ ಐದು ಕಡೆ ಬೀದಿ ಬದಿ ಜಾಗೃತಿ ಸಭೆ

# ಎಸ್‌ಐಆರ್ ವಿರೋಧಿ ಜನಜಾಗೃತಿ ಜಾಥಾ: ಜಾಗೃತಿ ಸಭೆ

ಚಾಮರಾಜನಗರ, ಮತದಾರರ ವಿಶೇಷ ತೀವ್ರ ಪರಿಷ್ಕರಣೆ (ಎಸ್ ಐ ಆರ್) ವಿರೋಧಿ ಜಾಗೃತಿ ಜಾಥಾ ಬುಧವಾರ ಬೆಳಿಗ್ಗೆ 11ಗಂಟೆಗೆ ನಂಜನಗೂಡು ಮಾರ್ಗ ಪಟ್ಟಣ ಪ್ರವೇಶಿಸಿ, ಐದು ಕಡೆ ಬೀದಿ ಬದಿ ಜಾಗೃತಿ ಸಭೆಗಳನ್ನು ನಡೆಸಿತು.ಮೊದಲಿಗೆ ಪಟ್ಟಣದ ಪ್ರವೇಶ ಕಮಾನಿನ ಬಳಿ ಸ್ವಾಗತಿಸಲಾಯಿತು. ರಾಜ್ಯದ ಐದು ಭಾಗಗಳಿಂದ ಹೊರಟು ಇಡೀ ರಾಜ್ಯದಲ್ಲಿ ಜನಜಾಗೃತಿ ಮೂಡಿಸಿ 20ರಂದು ಬೆಂಗಳೂರಿನ ಫ್ರೀಡಮ್ ಪಾರ್ಕ್ ನಲ್ಲಿ ಎಸ್‌ಐಆರ್ ವಿರೋಧಿ ಬೃಹತ್ ಪ್ರತಿರೋಧ ಸಮಾವೇಶದಲ್ಲಿ ಪಾಲ್ಗೊಳ್ಳುವ ಜಾಥಾಗಳ ಪೈಕಿ ಉಡುಪಿಯಿಂದ ಹೊರಟು, ಕೊಡಗು,ಮೈಸೂರು ಜಿಲ್ಲೆಗಳಲ್ಲಿ ಜಾಗೃತಿ ಮೂಡಿಸಿ ಬಂದ ವಿ.ಎಸ್.ಶ್ರೀಧರ್ ನೇತೃತ್ವದ ಜಾಥಾ ಇಲ್ಲಿಗೆ ಆಗಮಿಸಿತು. ಮೊದಲಿಗೆ ಚಾಮರಾಜೇಶ್ವರ ಪಾರ್ಕ್ ಮುಂಭಾಗ ಕ್ರಾಂತಿ ಗೀತೆ ಹಾಡಿ, ಎಸ್‌ಐಆರ್ ವಿರುದ್ದ ಘೋಷಣೆಗಳನ್ನು ಮೊಳಗಿಸಲಾಯಿತು.

***ಕೇಂದ್ರ ಬಿಜೆಪಿ ಷಡ್ಯಂತ್ರ***

ಪ್ರೊ.ವಿ.ಎಸ್. ಶ್ರೀಧರ್ ಸಭಿಕರನ್ನು ಉದ್ದೇಶಿಸಿ ಮಾತನಾಡಿ,ಈ ಹಿಂದೆ ಚುನಾವಣಾ ಅಯೋಗ ಯಾವುದೇ ಅರ್ಹ ಮತದಾರ ಪಟ್ಟಿಯಿಂದ ಬಿಟ್ಟು ಹೋಗದಂತೆ ಅಭಿಯಾನ ನಡೆಸುತ್ತಿತ್ತು. ಆದರೆ




ಈಗಿನ ಕೇಂದ್ರ ಬಿಜೆಪಿ ಸರ್ಕಾರದ ಬಾಲಬಡುಕ ಚುನಾವಣಾ ಅಯೋಗ ಮತದಾರರನ್ನು ಪಟ್ಟಿಯಿಂದ ತೆಗೆದುಹಾಕುವ ಷಡ್ಯಂತ್ರ ರೂಪಿಸಿದೆ.ಅದರ ಮುಖ್ಯ ಗುರಿ ಅಲ್ಪಸಂಖ್ಯಾತರು, ಆದಿವಾಸಿಗಳು, ಅಲೆಮಾರಿಗಳು ಮಹಿಳೆಯರು ಹಾಗೂ ಹಿಂದುಳಿದ ವರ್ಗಗಳು. ಎಲ್ಲರ ಬಳಿ ಇರುವ ಆಧಾರ್,ಬಿಪಿಎಲ್ ಕಾರ್ಡು,ಮತದಾರರ ಗುರುತಿನ ಚೀಟಿ ಪೂರಕ ದಾಖಲೆ ಅಲ್ಲ. ಬದಲಿಗೆ ಯಾರ ಬಳಿಯು ಇಲ್ಲದ 11 ದಾಖಲೆಗಳನ್ನು ಒದಗಿಸಲು ಹೇಳಲಾಗಿದೆ. 2002 ಮತ್ತು 2025 ರ ಮತದಾರರ ಪಟ್ಟಿಯಲ್ಲಿ ಒಂದೇ ಹೆಸರಿದ್ದು ಹೊಂದಾಣಿಕೆ ಆಗಬೇಕು. ಆನಂತರ ಎನ್ಯೂಮರೆಷನ್ ಫಾರಂ ತುಂಬಿಸಬೇಕು. ಸ್ವಲ್ಪ ವ್ಯತ್ಯಾಸ ಕಂಡು ಬಂದರೂ ಲಾಜಿಕಲ್ ಡಿಸ್ಕ್ರಿಪೆನ್ಸಿ ಎಂಬ ಎಐ ಆಧಾರಿತ ಕಂಪ್ಯೂಟರ್ ಅನುಮಾನಿತ ವ್ಯಕ್ತಿ ಎಂದು ಪಟ್ಟಿಯಿಂದ ಹೊರಗಿಡುತ್ತದೆ. ಈ ರೀತಿ ಬಿಹಾರ್ ಪಶ್ಚಿಮ ಬಂಗಾಳಗಳಲ್ಲಿ ಲಕ್ಷಾಂತರ ಜನರನ್ನು ಮತದಾರರ ಪಟ್ಟಿಯಿಂದ ಹೊರಗೆ ಹಾಕಲಾಗಿದೆ. ಇವರಿಗೆ ಮುಂದಿನ ದಿನಗಳಲ್ಲಿ ಯಾವುದೇ ಸರ್ಕಾರಿ ಸೌಲಭ್ಯಗಳು ಸಿಗುವುದಿಲ್ಲ. ಆದ್ದರಿಂದ ಕಟ್ಟೆಚ್ಚರ ವಹಿಸಿ ನಿಮ್ಮ ಹೆಸರು ಮತದಾರರ ಪಟ್ಟಿಯಿಂದ ಹೊರಗುಳಿಯದಂತೆ ಜಾಗೃತೆ ವಹಿಸಿ ಎಂದು ಕರೆ ನೀಡಿದರು. ಉಳಿದಂತೆ ಪಚ್ಚಪ್ಪ ಸರ್ಕಲ್ ಗುಂಡ್ಲುಪೇಟೆ ವೃತ್ತದಲ್ಲಿ, ಅದೇ ರಸ್ತೆ ಟಿಪ್ಪು ವೃತ್ತದಲ್ಲಿಜಾಥಾದ ಉಮೇಶ್, ಸಂಘಟನೆಯ ಕೆ.ವೆಂಕಟರಾಜು,ಎಸ್ ಡಿ ಪಿಐ ನ ಅಬ್ರಾರ್ ಅಹಮ್ಮದ್ ಜಾಗೃತಿ ಮೂಡಿಸಿದರು. ಭೀಮಸಮುದ್ರ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಜಾಥಾಗೆ ವಿದಾಯ ಹೇಳಲಾಯಿತು.

ಜಾಥಾದ ಹೇಮಂತ್,ಮಮತಾ,ಸವಿತಾ,ಮಂಜುಳ,ರಮೇಶ್.ಸೋಲಿಗ ಸಂಘದ ಮುತ್ತಯ್ಯ,ಗಿರೀಶ್ ಕುಮಾರ್. ಪರಿಸರವಾದಿ ಪುಣಜನೂರು ದೊರೆಸ್ವಾಮಿ. ದಲಿತ ಸಂಘಟನೆಗಳ ಸಂಘಸೇನಾ,ಬಂಗಾರಸ್ವಾಮಿ. ಎಸ್ ಡಿಪಿಐನ ಆರೀಫ್,ಇರ್ಫಾನ್ ಖಲೀಲ್,ನಸ್ರುಲ್ಲಾ,ಖಲೀಮುಲ್ಲಾ,ಅಮೀಖ್ ಮಹೇಶ್.ಪುನರ್ಚಿತ್ ಫ್ಯಾಕಲ್ಟಿ ಯ ಡಾ.ವೀರಭದ್ರನಾಯಕ್,ರಾಜೇಶ್ವರಿ, ಸಾಕಮ್ಮ,ಕಾವ್ಯ,ಭಾಗ್ಯ ಚಂದ್ರು, ಮಹೇಂದ್ರ, ಕವಿತಾ,ಮನುಜಪ್ರಿಯ ಭಾಗವಹಿಸಿದ್ದರು.

ಜಾಥಾ ನಾಗವಳ್ಳಿ,ಅಮೃತಭೂಮಿ ಗೆ ಹೋಗಿ ನಾಳೆ ಕೊಳ್ಳೇಗಾಲ, ಮಂಡ್ಯ ಮದ್ದೂರು ಮೂಲಕ ಬೆಂಗಳೂರು ತಲುಪಲಿದೆ.

## ಸಂಕ್ಷಿಪ್ತ ಸುದ್ದಿ

### ಅಕ್ರಮವಾಗಿ ಗಾಂಜಾ ಸಾಗಾಣಿಕೆ ಮಾಡುತ್ತಿದ್ದ ಆರೋಪಿಯ ಬಂಧನ

**ಮಂಡ್ಯ:** ದಿನಾಂಕ: 17-06-2026 ರಂದು ಸಂಜೆ 05-10 ಗಂಟೆಯ ಸಮಯದಲ್ಲಿ ಈ ಕೇಸಿನ ಫಿರ್ಯಾದಿಯವರಾದ ಶ್ರೀ ಯಶವಂತ್ ಕುಮಾರ್.ಎಸ್.ಬಿ, ಡಿವೈ.ಎಸ್.ಪಿ, ಮಳವಳ್ಳಿ ಉಪವಿಭಾಗ, ಮಳವಳ್ಳಿ ರವರು ಮದ್ದೂರು ಟೌನ್‌ನಲ್ಲಿ ಗಸ್ತಿನಲ್ಲಿದ್ದಾಗ, ಅವರಿಗೆ ಬಾತ್ಮೀದಾರರಿಂದ ಬಂದ ಮಾಹಿತಿ ಏನೆಂದರೇ, ಕೆಸ್ತೂರು ಪೊಲೀಸ್ ಠಾಣೆಯ ಸರಹದ್ದಿನ ತುಮಕೂರು ಮದ್ದೂರು ರಾಜ್ಯಹೆದ್ದಾರಿ-33 ರ ಮುಖ್ಯರಸ್ತೆಯಲ್ಲಿ ಯಾರೋ ಆಸಾಮಿ ಒಂದು ಸಿಲ್ವರ್ ಕಲರ್ ಕಾರಿನಲ್ಲಿ ಕುಣಿಗಲ್ ಕಡೆಯಿಂದ ಮದ್ದೂರು ಕಡೆಗೆ ಅಕ್ರಮವಾಗಿ ಗಾಂಜಾ ಇಟ್ಟುಕೊಂಡು ಗ್ರಾಹಕರಿಗೆ ಮಾರಾಟ ಮಾಡಲು ಸಾಗಾಣಿಕೆ ಮಾಡುತ್ತಿರುತ್ತಾರೆ. ಸದರಿ ಆಸಾಮಿಯ ಮೇಲೆ ಕಾನೂನು ಕ್ರಮ ಜರುಗಿಸಿ ಎಂದು ಬಾತ್ಮೀದಾರರಿಂದ ಖಚಿತ ಮಾಹಿತಿ ಬಂದ ಮೇರೆಗೆ ಯಶವಂತ್ ಕುಮಾರ್.ಎಸ್.ಬಿ, ಡಿವೈಎಸ್‌ಪಿ ರವರು ಸಂಜೆ 05-30 ಗಂಟೆಗೆ ಕೆಸ್ತೂರು ಪೊಲೀಸ್ ಠಾಣೆಗೆ ಹಾಜರಾಗಿ ನೀಡಿದ ವರದಿಯ ಮೇರೆಗೆ ಕೆಸ್ತೂರು ಪೋಲೀಸ್ ಠಾಣಾ ಮೊ.ನಂ. 91/2026 ಕಲಂ. 20(ಬಿ) ಎನ್.ಡಿ.ಪಿ.ಎಸ್. ಕಾಯ್ದೆ ರೀತ್ಯ ಕೇಸು ದಾಖಲಿಸಿ, ತನಿಖೆ ಕೈಗೊಂಡಿರುತ್ತದೆ.

ಈ ಪ್ರಕರಣದ ಆರೋಪಿ ಮತ್ತು ಮಾಲು ಪತ್ತೆಯ ಬಗ್ಗೆ ಮಾನ್ಯ ಮಂಡ್ಯ ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಡಾ. ವಿ.ಜೆ. ಶೋಭಾರಾಣಿ ಐಪಿಎಸ್ ಹಾಗೂ ಅಪರ ಪೊಲೀಸ್ ಅಧೀಕ್ಷಕರಾದ ಶ್ರೀ.ತಿಮ್ಮಯ್ಯ ಸಿ.ಇ. ರವರ ಮಾರ್ಗದರ್ಶನದಲ್ಲಿ ಮಳವಳ್ಳಿ ಉಪವಿಭಾಗದ ಪೊಲೀಸ್ ಉಪಾಧೀಕ್ಷಕರಾದ ಶ್ರೀ.ಯಶವಂತ್ ಕುಮಾರ್ ಎಸ್.ಬಿ. ರವರ ನೇತೃತ್ವದಲ್ಲಿ ವಿಶೇಷ ತಂಡವನ್ನು ರಚನೆ ಮಾಡಲಾಗಿರುತ್ತದೆ. ಸದರಿ ವಿಶೇಷ ತಂಡದಲ್ಲಿ ಮದ್ದೂರು ಗ್ರಾಮಾಂತರ ವೃತ್ತದ ವೃತ್ತ ನಿರೀಕ್ಷಕರಾದ ನಾರಾಯಣಿ, ಮದ್ದೂರು ಟೌನ್ ಆರಕ್ಷಕ ನಿರೀಕ್ಷಕರಾದ ನವೀನ್, ಕೆ.ಎಂ. ದೊಡ್ಡಿ ಪೊಲೀಸ್ ನಿರೀಕ್ಷಕರಾದ ಅನಿಲ್ ಕುಮಾರ್.ಜಿ.ಎಸ್. ಕೆಸ್ತೂರು ಪೊಲೀಸ್ ಠಾಣೆಯ ಪಿ.ಎಸ್.ಐ ಲಿಂಗರಾಜು, ಕೊಪ್ಪ ಠಾಣೆಯ ಪಿ.ಎಸ್.ಐ ಭೀಮಪ್ಪ.ಎಸ್.ಬಾಣಸಿ, ಬೆಸಗರಹಳ್ಳಿ ಠಾಣೆಯ ಪಿ.ಎಸ್.ಐ ಪ್ರಕಾಶ್ ಮೊದ್ದೂರು ಮತ್ತು ಸಿಬ್ಬಂದಿಯವರಾದ ಮಳವಳ್ಳಿ ಉಪವಿಭಾಗ ಕಛೇರಿಯ ಸಿ.ಹೆಚ್.ಸಿ-415 ಅನೀಫ್.ಬಿ ಹಾಗೂ ಸಿಪಿಸಿ-714 ಭರತ್.ಹೆಚ್.ಎಸ್, ಡಿವೈಎಸ್‌ಪಿ ಜೀಪ್ ಚಾಲಕ ಎ.ಹೆಚ್.ಸಿ-107 ಪ್ರೀತಿಕುಮಾರ್, ಕೊಪ್ಪ ಪೊಲೀಸ್ ಠಾಣೆಯ ಸಿಪಿಸಿ-240 ಶಿವಕುಮಾರ್ ಹಾಗೂ ಸಿಪಿಸಿ-706 ನಾಗೇಶ ಲಮಾಣಿ, ಸಿಪಿಸಿ-268 ಕಿರಣ್ ಬೆಸಗರಹಳ್ಳಿ ಠಾಣೆ, ಸಿಪಿಸಿ-183 ಪ್ರವೀಣ ಹಾಗೂ ಸಿ.ಹೆಚ್.ಸಿ-180 ಪುರುಷೋತ್ತಮ ಮದ್ದೂರು (ಗ್ರಾ) ವೃತ್ತ ಕಛೇರಿ ಹಾಗೂ ಕೆಸ್ತೂರು ಪೊಲೀಸ್ ಠಾಣೆಯ ಸಿಬ್ಬಂದಿಯವರಾದ ಸಿ.ಹೆಚ್.ಸಿ-288 ಸಿದ್ದರಾಜು, ಸಿ.ಹೆಚ್.ಸಿ-196 ಇಮ್ರಾನ್ ಉಲ್ಲಾಖಾನ್, ಸಿಪಿಸಿ-81 ಉಡಚಪ್ಪ ಮಾಯಪ್ಪನವರ್ ಹಾಗೂ ಜೀಪ್ ಚಾಲಕರಾದ ಎ.ಹೆಚ್.ಸಿ-117 ರಜಿತ್ ಸಿಪಿಐ ಮದ್ದೂರು(ಗ್ರಾ), ಎ.ಹೆಚ್.ಸಿ-83 ಮೋಹನ್ ಕುಮಾರ್ ಬೆಸಗರಹಳ್ಳಿ ಠಾಣೆ ರವರು ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದರು.

ಅದರಂತೆ ದಿನಾಂಕ: 17.06.2026 ರಂದು ಮಳವಳ್ಳಿ ಉಪವಿಭಾಗದ ಪೊಲೀಸ್ ಉಪಾಧೀಕ್ಷಕರಾದ ಶ್ರೀ.ಯಶವಂತ್ ಕುಮಾರ್ ಎಸ್.ಬಿ. ರವರ ನೇತೃತ್ವದ ವಿಶೇಷ ತಂಡ ಕೆಸ್ತೂರು ಟೌನ್‌ನಲ್ಲಿ ಹಾದುಹೋಗಿರುವ ತುಮಕೂರು ಮದ್ದೂರು ರಾಜ್ಯಹೆದ್ದಾರಿ-33 ರ ಮುಖ್ಯರಸ್ತೆಯಲ್ಲಿ ಪಂಚರುಗಳ ಸಮಕ್ಷಮ ಅನುಮಾನಾಸ್ಪದ ವಾಹನಗಳನ್ನು ಚೆಕ್ ಮಾಡುತ್ತಿದ್ದಾಗ, ಸದರಿ ರಸ್ತೆಯಲ್ಲಿ ಕುಣಿಗಲ್ ಕಡೆಯಿಂದ ಮದ್ದೂರು ಕಡೆಗೆ ಹೋಗುತ್ತಿದ್ದ ಕೆ.ಎ-03-ಎಂ.ಪಿ-1635 ಸಿಲ್ವರ್ ಕಲರ್ ನ ಮಾರುತಿ ಸುಜುಕಿ ಖಿಫಿ4 ಕಾರನ್ನು ತಡೆದು ನಿಲ್ಲಿಸಿ ಸದರಿ ಕಾರನ್ನು ಪರಿಶೀಲಿಸಿದಾಗ ಕಾರಿನ ಹಿಂದಿನ ಸೀಟಿನಲ್ಲಿ 02 ಪ್ಲಾಸ್ಟಿಕ್ ಚೀಲಗಳು ಹಾಗೂ ಕಾರಿನ ಹಿಂದಿನ ಡಿಕ್ಕಿಯಲ್ಲಿ 03 ಪ್ಲಾಸ್ಟಿಕ್ ಚೀಲಗಳು ಇದ್ದು, ಸದರಿ ಪ್ಲಾಸ್ಟಿಕ್ ಚೀಲಗಳನ್ನು ಪಂಚರ ಸಮಕ್ಷಮ ತೆರೆದು ಪರಿಶೀಲಿಸಲಾಗಿ 04 ಪ್ಲಾಸ್ಟಿಕ್ ಚೀಲಗಳಲ್ಲಿ ತಲಾ 10 ಪ್ಲಾಸ್ಟಿಕ್ ಪಾಕೆಟ್ಗಳಲ್ಲಿ ಹಾಗೂ ಮತ್ತೊಂದು ಪ್ಲಾಸ್ಟಿಕ್ ಚೀಲದಲ್ಲಿ 11 ಪ್ಲಾಸ್ಟಿಕ್ ಪಾಕೆಟ್‌ಗಳಲ್ಲಿ ಗಾಂಜಾ ಇದ್ದು, ಸದರಿ ಗಾಂಜಾವನ್ನು ತೂಕ ಮಾಡಿ ನೋಡಲಾಗಿ ಒಟ್ಟು 111 ಕೆ.ಜಿ, 04 ಗ್ರಾಂ ತೂಕವಿದ್ದು, ಸದರಿ ಗಾಂಜಾವನ್ನು ಹಾಗೂ ಕೃತ್ಯಕ್ಕೆ ಉಪಯೋಗಿಸಿದ್ದ ಕಾರನ್ನು ಪಂಚರ ಸಮಕ್ಷಮ ಅಮಾನತ್ತುಪಡಿಸಿಕೊಂಡಿರುತ್ತದೆ. ಇದರ ಒಟ್ಟು ಅಂದಾಜು ಮೌಲ್ಯ 60 ಲಕ್ಷ ರೂಗಳಾಗಿದ್ದು, ಆರೋಪಿಯ ಹೆಸರು ವಿಳಾಸ ವಿಚಾರಿಸಲಾಗಿ ಸದರಿ ಆರೋಪಿಯ ಹೆಸರು ಶ್ರೀನಿವಾಸ.ಸಿ ಬಿನ್ ಟಾಮು, ಮದನಪಲ್ಲಿ, ಆಂಧ್ರ ಪ್ರದೇಶ ರಾಜ್ಯ ಎಂದು ತಿಳಿಸಿದ್ದು ಈತನನ್ನು ಕೆಸ್ತೂರು ಟೌನ್‌ನಲ್ಲಿ ಹಾದುಹೋಗಿರುವ ತುಮಕೂರು ಮದ್ದೂರು ರಾಜ್ಯಹೆದ್ದಾರಿ-33 ರ ಮುಖ್ಯರಸ್ತೆಯಲ್ಲಿ ಪೊಲೀಸ್ ವಶಕ್ಕೆ ಪಡೆದುಕೊಂಡಿರುತ್ತದೆ.

## ಹಿರಿಯ ಪತ್ರಕರ್ತ ಡಿ.ಎನ್.ಶ್ರೀಪಾದು-75 ಅಭಿನಂದನಾ ಸಮಾರಂಭ

# ಸಾಧಕರ ಅನುಭವಗಳನ್ನು ದಾಖಲಿಸಿದರೆ ಮುಂದಿನ ಪೀಳಿಗೆಗೆ ಸ್ಫೂರ್ತಿ: ಡಾ. ಶ್ರೀ ನಿಶ್ಚಲಾನಂದನಾಥ ಸ್ವಾಮೀಜಿ

**ಮಂಡ್ಯ:** ಆದರ್ಶಗಳು ಕಣ್ಮರೆಯಾಗುತ್ತಿವೆ ಎಂಬ ಆತಂಕ ಸಮಾಜದಲ್ಲಿದೆ.ಆದರೆ ನಿಜವಾಗಿ ನೋಡಿದರೆ ಆದರ್ಶಗಳು ಸತ್ತಿಲ್ಲ.ಅವು ಬದುಕಿವೆ.ಅವುಗಳ ನಡುವೆ ಬದುಕುವುದು ಸಾಧ್ಯ ಎಂಬುದಕ್ಕೆ ಮೌಲ್ಯಗಳ ಜೊತೆ ಬದುಕಿರುವ ಡಿ.ಎನ್.ಶ್ರೀಪಾದು ಸಾಕ್ಷಿಯಾಗಿದ್ದಾರೆ.ಇಂತಹ ಸಾಧಕರ ಅನುಭವಗಳನ್ನು ದಾಖಲಿಸಿದರೆ ಮುಂದಿನ ಪೀಳಿಗೆಗೆ ಸ್ಫೂರ್ತಿಯಾಗುತ್ತದೆ ಎಂದು ಕೆಂಗೇರಿ ವಿಶ್ವ ಒಕ್ಕಲಿಗರ ಮಠದ ಪೀಠಾಧ್ಯಕ್ಷ ಡಾ.ಶ್ರೀ ನಿಶ್ಚಲಾನಂದನಾಥ ಸ್ವಾಮೀಜಿ ಅಭಿಪ್ರಾಯಪಟ್ಟರು.

ನಗರದ ಕರ್ನಾಟಕ ಸಂಘದ ಕೆ.ವಿ.ಶಂಕರಗೌಡ ಶತಮಾನೋತ್ಸವ ಭವನದಲ್ಲಿ ಶ್ರೀಪಾದು ಹಿತೈಷಿ ಪತ್ರಕರ್ತರ ಬಳಗದ ವತಿಯಿಂದ ಹಮ್ಮಿಕೊಂಡಿದ್ದ ಹಿರಿಯ ಪತ್ರಕರ್ತ ಕೊಳಲು ವಾರಪತ್ರಿಕೆಯ ಸಂಪಾದಕ ಡಿ.ಎನ್. ಶ್ರೀಪಾದು-75 ಅಭಿನಂದನಾ ಸಮಾರಂಭದ ದಿವ್ಯ ಸಾನಿಧ್ಯ ವಹಿಸಿ ಅವರು ಮಾತನಾಡಿದರು.

ಶ್ರೀಪಾದು ಅವರು ಜೀವನ ಆದರ್ಶಗಳನ್ನು ಅಳವಡಿಸಿಕೊಂಡ ಮೂರ್ತಿ. ಅವರ ಅನುಭವಗಳು ಮುಂದಿನ ಪೀಳಿಗೆಗೆ ಮಾರ್ಗದರ್ಶನವಾಗಬೇಕು.ಇವರಿಗೆ ಮಂಡ್ಯದ ಇತಿಹಾಸದ ಬಗ್ಗೆ 100 ವರ್ಷಗಳ ಮಾಹಿತಿ, ಚಿತ್ರಗಳು ಲಭ್ಯವಿದೆ. ಈ ವಿಷಯಗಳನ್ನು ಒಳಗೊಂಡಂತೆ ಅವರ ಅಪಾರ ಅನುಭವಗಳ ಜೀವನ ಚರಿತ್ರೆ ಸೇರಿಸಿ ಅಭಿನಂದನಾ ಗ್ರಂಥವೊಂದನ್ನು ಹೊರ ತರಬೇಕೆಂದು ಸಲಹೆ ನೀಡಿದರು. ಇಂತಹ ಕೃತಿಗಳನ್ನು ಪ್ರಕಟ ಮಾಡಿದರೆ ಮುಂದಿನ ಪೀಳಿಗೆಗೆ ಆದರ್ಶ ಭಾವನೆ ಉದಯಿಸಲು ಸ್ಪೂರ್ತಿ ಆಗುತ್ತದೆ ಎಂದರು. ಈ ಕಾರ್ಯಕ್ಕೆ ಶ್ರೀಮಠದಿಂದ ಸಹಕಾರ ಹಸ್ತ ನೀಡುವುದಾಗಿ ಭರವಸೆ ನೀಡಿದರು.

ಅಭಿನಂದನಾ ನುಡಿಗಳನ್ನಾಡಿದ ವಿಧಾನ ಪರಿಷತ್ ಮಾಜಿ ಸದಸ್ಯ ಕೆ.ಟಿ.ಶ್ರೀಕಂಠೇಗೌಡ ಮಂಡ್ಯ ನೆಲೆಯಲ್ಲಿ ನಿಂತು ತಮ್ಮ 40 ವರ್ಷದ ಪತ್ರಿಕೋದ್ಯಮದಲ್ಲಿ ಹಲವು ಯುವ ಪ್ರತಿಭೆಗಳನ್ನು ಹುಟ್ಟುಹಾಕಿದ ಕೀರ್ತಿ ಸಲ್ಲುತ್ತದೆ. ಪರಿಶುದ್ಧವಾಗಿ ನಿಸ್ಪೃಹತೆಯಿಂದ ಪತ್ರಿಕೋದ್ಯಮ ನಡೆಸಿ ಆ ವೃತ್ತಿಗೆ ಒಂದು ಗೌರವ ತಂದುಕೊಟ್ಟಿದ್ದಾರೆ ಎಂದು ಅಭಿನಂದಿಸಿದರು.



### ಸಾಹಿತ್ಯ ಮತ್ತು ಮಾಧ್ಯಮ ಒಂದೇ ನಾಣ್ಯದ 2 ಮುಖಗಳು

ಕಾರ್ಯಕ್ರಮ ಉದ್ಘಾಟಿಸಿದ ಜಿಲ್ಲಾಧಿಕಾರಿ ಡಾ.ಕುಮಾರ ಮಾತನಾಡಿ ಒಬ್ಬ ವ್ಯಕ್ತಿ ತನ್ನ ಜೀವಮಾನದ 45 ವರ್ಷಗಳ ಕಾಲ ಒಂದೇ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿ ಸಾಧನೆ ಮಾಡುವುದು ಸುಲಭದ ಮಾತಲ್ಲ.ಇವರು ಆದರ್ಶವಾಗಿ ದಾರಿದೀಪವಾಗಿದ್ದಾರೆ. ಇಂತಹವರನ್ನು ಗೌರವಿಸುವ ಸನ್ಮಾನಿಸುವ ಮೂಲಕ ಮುಂದಿನ ಪೀಳಿಗೆಗೆ ಒಂದು ಒಳ್ಳೆಯ ಸಂದೇಶ ಕೊಟ್ಟಂತಾಗುತ್ತದೆ. ಹಳೇ ಬೇರು ಹೊಸ ಚಿಗುರು ಕೂಡಿರಲು ಮರಸೊಬಗು ಎನ್ನುವಂತೆ ನಾವು ಎಷ್ಟೇ ಆಧುನಿಕವಾಗಿ, ಯಾಂತ್ರಿಕವಾಗಿ, ತಂತ್ರಜ್ಞಾನದಲ್ಲಿ, ಎಷ್ಟೇ ವೇಗವಾಗಿ ಬೆಳೆದಿದ್ದರೂ ಕೂಡ ನಮಗೆ ಹಳೆಯ ಬೇರು ಬೇಕು. ಯುವಜನತೆಗೆ ಅವರ ಒಂದು ವ್ಯಕ್ತಿತ್ವ,ಅನುಭವ ಸಮಾಜವನ್ನು ಸರಿದಾರಿಗೆ ಕೊಂಡೊಯ್ಯಲು ಸಾಧ್ಯವಾಗುತ್ತದೆ. ಸಾಹಿತ್ಯ ಮತ್ತು ಮಾಧ್ಯಮ ಕ್ಷೇತ್ರ ಒಂದೇ ನಾಣ್ಯದ ಎರಡು ಮುಖಗಳು. ಸಾಹಿತ್ಯ ಕೃಷಿ ಮಾಡುವ ಹವ್ಯಾಸ ಇರುವ ವ್ಯಕ್ತಿ ಮಾಧ್ಯಮ ಕ್ಷೇತ್ರದಲ್ಲಿ ಯಶಸ್ಸು ಗಳಿಸಲು ಸಾಧ್ಯ ಎಂಬುದಕ್ಕೆ ಶ್ರೀಪಾದುರವರು ಉದಾಹರಣೆ ಮಾಧ್ಯಮ ಕ್ಷೇತ್ರಕ್ಕೆ ಅವರು ಕೊಟ್ಟಿರುವ ಕೊಡುಗೆಯನ್ನು ಸ್ಮರಿಸಿ ಅವರ ಅನುಭವವನ್ನು ತಿಳಿದುಕೊಂಡು ಮುಂದಿನ ಪೀಳಿಗೆಗೆ ಅದನ್ನು ರವಾನೆ ಮಾಡುವುದು ಅವಶ್ಯಕ ಎಂದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಖ್ಯಾತ ಚಿತ್ರನಟ, ರಂಗ ನಿರ್ದೇಶಕ ಮಂಡ್ಯ ರಮೇಶ್ ಮಾತನಾಡಿ ಶ್ರೀಪಾದು ಅವರ ಜೊತೆಯ ಗೆಳೆತನದ ಸಿಹಿ ನೆನಪುಗಳನ್ನು ಸಭೆಯ ಮುಂದಿಟ್ಟರು.

ಎಸ್.ಬಿ. ಎಜುಕೇಶನ್ ಟ್ರಸ್ಟ್ ನ ಕಾರ್ಯದರ್ಶಿ ಮೀರಾ ಶಿವಲಿಂಗಯ್ಯ,ಮೂಡಾ ಅಧ್ಯಕ್ಷ ಬಿ.ಪಿ.ಪ್ರಕಾಶ್, ಮಾಜಿ ನಿರ್ದೇಶಕ ಎಂ.ಕೃಷ್ಣ, ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ತ್ಯಾಗರಾಜು, ಪತ್ರಕರ್ತರ ಸಂಘದ ಉಪಾಧ್ಯಕ್ಷ ಕೆ.ಸಿ.ಮಂಜುನಾಥ್ ಮಾತನಾಡಿದರು.

ಅಭಿನಂದನೆ ಸ್ವೀಕರಿಸಿ ಮಾತನಾಡಿದ ಶ್ರೀಪಾದು ಮಂಡ್ಯದ ನೆಲದಂತ ಒಂದು ಪುಣ್ಯಭೂಮಿ ಪಾವನ ಭೂಮಿಯಲ್ಲಿ ನೆಲೆಸಿದ ನಾನು ಪುಣ್ಯಪುರುಷ. ತಾವು ನಡೆದು ಬಂದ ದಾರಿಯಲ್ಲಿ ಅಟಲ್ ಬಿಹಾರಿ ವಾಜಪೇಯಿ ಮತ್ತು ಡಿವಿಜಿತನ್ನ ಮೇಲೆ ಅಪಾರ ಪ್ರಭಾವ ಬೀರಿದರು.ಪತ್ರಿಕೋದ್ಯಮ ಸಮಾಜದ ಋಣ ತೀರಿಸಲು ಒಂದು ಒಳ್ಳೆಯ ಮಾಧ್ಯಮ ಎಂದು ಭಾವಿಸಿ ಈ ಕ್ಷೇತ್ರಕ್ಕೆ ಬಂದೆ ಎಂದರಲ್ಲದೇ ತಮ್ಮ ಜೀವನದ ಪ್ರಮುಖ ಘಟ್ಟಗಳನ್ನು ಸಭೆಯ ಮುಂದಿಟ್ಟರು.

ಸಮಾರಂಭದಲ್ಲಿ ಡಿ.ಎನ್. ಶ್ರೀಪಾದು ದಂಪತಿಗಳನ್ನು ಅಭಿನಂದಿಸಲಾಯಿತು.

ವೇದಿಕೆಯಲ್ಲಿ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಕೆ.ಎನ್.ರಾಘವೇಂದ್ರ, ನಾಗಮಂಗಲ ತಾಲೂಕು ಒಕ್ಕಲಿಗರ ಸಂಘದ ಅಧ್ಯಕ್ಷ ಸಿ.ಎನ್.ಮಂಜುನಾಥ್, ಪತ್ರಕರ್ತರ ಸಂಘದ ಉಪಾಧ್ಯಕ್ಷ ಕೆ.ಸಿ.ಮಂಜುನಾಥ್ ಮುಂತಾದವರು ಉಪಸ್ಥಿತರಿದ್ದರು.

## ಗ್ರಾಮ ವಿಕಾಸ ಮಹಿಳಾ ಪ್ರಮುಖರ ಅಭ್ಯಾಸ ವರ್ಗ ಯಶಸ್ವಿ

**ಕೆ ಆರ್ ಪೇಟೆ :** ತಾಲೂಕಿನ ಪುರ ಬಳಿಯ ಶ್ರೀ ಮಹದೇಶ್ವರ ದೇವಾಲಯದ ಸಭಾಂಗಣದಲ್ಲಿ ಗ್ರಾಮ ವಿಕಾಸ ಮಹಿಳಾ ಪ್ರಮುಖರ ಅಭ್ಯಾಸ ವರ್ಗ ಯಶಸ್ವಿಯಾಗಿ ನಡೆಸಲಾಯಿತು. ಕಾರ್ಯಕ್ರಮವನ್ನು ನಿವೃತ್ತ ಪ್ರಾಂಶುಪಾಲ ಹಿರಿಯ ಪತ್ರಕರ್ತ ಕೆ.ಕಾಳೇಗೌಡ ಉದ್ಘಾಟಿಸಿದರು.

ಅವರು ಮಾತನಾಡಿ ಸಮಾಜದಲ್ಲಿ ಮಹಿಳೆಯರು ಪಾತ್ರ ವಿಶಿಷ್ಟವಾಗಿದೆ. ಮನಸ್ಸು ಮಾಡಿದರೆ ಯಾವುದೇ ಸಾಧನೆಯನ್ನು ಮಾಡಬಹುದು. ಗ್ರಾಮ ಪರಿವರ್ತನೆ , ವಿಕಾಸದಲ್ಲಿ ಮಹಿಳೆಯರು ಪ್ರಮುಖ ಪಾತ್ರ ವಹಿಸಿದ್ದಾರೆ ಒಬ್ಬ ಮಹಿಳೆ ಸಮಾಜವನ್ನು ತಿದ್ದುವ ಬದಲಾಯಿಸುವ ಸಾಮರ್ಥ್ಯ ಹೊಂದಿದ್ದಾರೆ ಈ ದಿಕ್ಕಿನಲ್ಲಿ ಮಹಿಳೆಯರಿಗೆ ಹೆಚ್ಚಿನ ಸ್ಥಾನಮಾನ ಅವಶ್ಯಕವಾಗಿದೆ. ಅವರು ತಮ್ಮ ಮನೆಯ ಕುಟುಂಬದ ಸಮಾಜದ ಗ್ರಾಮದ ಬದಲಾವಣೆಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು. ಸಮಾಜದಲ್ಲಿ ಉತ್ತಮವಾದ ಗುಣ ಬೆಳೆಸಿಕೊಳ್ಳಬೇಕು. ಮಹಿಳೆಯರು ಫಲ ಬಿಡುವ ಮರಗಳಾಗಬೇಕು. ಸೂರ್ಯೋದಯವಾಗಲು ಸೂರ್ಯನು ಕೂಡ ಇಡೀ ರಾತ್ರಿ ಕಾಯಬೇಕು ಹಾಗೆಯೇ ನಮ್ಮ ಜೀವನದಲ್ಲಿ ಯಶಸ್ಸು ಎಂಬ ಬೆಳಕು ಮೂಡಲು ತಾಳ್ಮೆ ಮತ್ತು ಶ್ರಮ ಎಂಬ ಕತ್ತಲೆಯನ್ನು ದಾಟಲೇಬೇಕು. ಜೀವನದ ಪ್ರಯಾಣಗಳು ದಾರಿಗಳನ್ನು ಮಾತ್ರ ಅಲ್ಲ ಜೀವನ ವನ್ನು ಕೂಡ ತೋರಿಸುತ್ತಿರುತ್ತದೆ . ಕೋಳಿ ಕೂಗಿದರೆ ಮಾತ್ರ ಬೆಳಕಾಗುತ್ತಿದೆ ಎಂದು ತಿಳಿದುಕೊಳ್ಳವ ಮೊದಲು ಸಮಯ ಹಾಗಿದ್ದಕ್ಕೆ ಕೋಳಿ ಕೂಗುತ್ತಿದೆ ಎನ್ನುವ ವಾಸ್ತವ ಸತ್ಯವನ್ನು ತಿಳಿದುಕೊಳ್ಳಬೇಕು. ನಮ್ಮ ನಡೆ, ನುಡಿ ಸಾಮರ್ಥ್ಯದ ಬಗ್ಗೆ ನಮಗೆ ನಂಬಿಕೆ ಇಲ್ಲದಿದ್ದರೆ ದೇವರ ಬಳಿ ಎಷ್ಟೇ ಪ್ರಾರ್ಥನೆ ಮಾಡಿದರು ಪ್ರಯೋಜನವಾಗುವುದಿಲ್ಲ. ಹಣವಿಲ್ಲದ ಪುರುಷನನ್ನು ವೇಶ್ಯೆಯು ತೊರೆಯುತ್ತಾಳೆ ಸೋತ ರಾಜನನ್ನು ಪ್ರಜೆಗಳು ತೊರೆಯುತ್ತಾರೆ. ಹಣ್ಣು ಬಿಡದ ಮರವನ್ನು ಪಕ್ಷಿಗಳು ತೊರೆಯುತ್ತವೆ. ಪ್ರಪಂಚದಲ್ಲಿ ಎಲ್ಲರೂ ತನ್ನ ಲಾಭವನ್ನು ನೋಡಿಕೊಳ್ಳುತ್ತಾರೆ. ಎಲ್ಲಿಯವರೆಗೆ ನಮ್ಮಲ್ಲಿ ಜನರಿಗೆ ಬೇಕಾದುದ್ದು ಇದೆ ಅಲ್ಲಿವರೆಗೆ ಮಾತ್ರ ನಮಗೆ ಬೆಲೆ ಇರುತ್ತದೆ. ಎಲ್ಲಾ ಕಡೆಯೂ ಉತ್ತಮವಾದ ಚಲಿಸಿ ಆ ದಿಕ್ಕಿನಲ್ಲಿ ಉತ್ತಮ ವ್ಯಕ್ತಿತ್ವವನ್ನು ರೂಪಿಸಿಕೊಳ್ಳಬೇಕು ಎಂದು ಕೆ ಕಾಳೇಗೌಡ ಹೇಳಿದರು. ಮಾದೇಶ್ವರ ದೇವಾಲಯದ ಗುರುಗಳಾದ ಬಸಪ್ಪ ಸ್ವಾಮೀಜಿ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ಗ್ರಾಮ ವಿಕಾಸ ತಂಡದ ಮುಖ್ಯಸ್ಥರಾದ ಚಿನ್ನೆನಳ್ಳಿ ತಮ್ಮಣ್ಣಗೌಡ, ತಾಲೂಕು ಪಾಲಕರದ ರಂಗೇಗೌಡ ,ಕೆ ಆರ್ ಪೇಟೆಯ ಶೈಲೆಂದ್ರ ರಘುರಾಮ್ ಬಿದರಹಳ್ಳಿ



ಮಹಾದೇವ ವಡ್ಡರಹಳ್ಳಿ ಕಾರಗಿನಹಳ್ಳಿಯ ತಾಲೂಕು ಸಂಯೋಜಕ ಯತೀಶ್, ಗ್ರಾಮ ವಿಕಾಸ ಕೇಂದ್ರದ ಸಂಯೋಜಕ ಕರೋಟಿ ಪ್ರವೀಣ ,ದೊಡ್ಡ ಗುರುಮೂರ್ತಿ, ವಡ್ಡರಹಳ್ಳಿಯ ಮಂಜುನಾಥ್, ಗೂಡೆ ಹೊಸಹಳ್ಳಿಯ ಬಸವರಾಜ್, ಸಿಂಗನಹಳ್ಳಿಯ ಶಿವರಾಮ್ ಮುಂತಾದವರು ಭಾಗವಹಿಸಿದ್ದರು ಗ್ರಾಮ ವಿಕಾಸ ಅಭ್ಯಾಸ ವರ್ಗದಲ್ಲಿ ಭಾಗವಹಿಸಿದ್ದ ಮಹಿಳಾ ಪ್ರಮುಖರಾದ ಭಾರತಿ, ಧನಲಕ್ಷ್ಮಿ, ಭಾಗ್ಯಶ್ರೀ ,ಇಂದ್ರ, ಚಂದ್ರಮ್ಮ ,ಗೀತಾ, ನಾಗರತ್ನ, ಕಾವ್ಯಶ್ರೀ ,ಪ್ರೇಮ ,ಹೇಮಾ, ಕೋಮಲ ,ಉಷಾ, ದಿವ್ಯ ಧನಶ್ರೀ ,ಕೀರ್ತನ ,ರಂಜಿತ ಅರ್ಚನಾ ,ಭವ್ಯ ,ಸುಮಿತ್ರ, ರಾಧಾ ,ಶಶಿಕಲಾ, ಸವಿತಾ ಪಲ್ಲವಿ ,ಮಂಜುಳಾ ಮುಂತಾದವರು ತಮ್ಮ ಅಭಿಪ್ರಾಯಗಳನ್ನು ತಿಳಿಸಿದರು.

## ಮಂಡ್ಯದಲ್ಲಿ 2 ದಿನಗಳ ದೂರದರ್ಶಕ ನಿರ್ಮಾಣ ತರಬೇತಿ ಶಿಬಿರ

**ಮಂಡ್ಯ:** ಪುಟ್ಟಣ್ಣಯ್ಯ ಫೌಂಡೇಶನ್, ಅಧ್ಯಾಪನ ಪಬ್ಲಿಕ್ ಚಾರಿಟೇಬಲ್ ಟ್ರಸ್ ಹಾಗೂ ಆರ್ಯಭಟ ಪ್ಲಾನೆಟೋರಿಯಂ ಸಂಯುಕ್ತಾಶ್ರಯದಲ್ಲಿ 2ದಿನದ ಉಚಿತ ದೂರದರ್ಶಕ ನಿರ್ಮಾಣ ತರಬೇತಿ ಶಿಬಿರವನ್ನು ಜೂ.19ರಂದು ಪಾಂಡವಪುರ ಟಿಎಪಿಎಸಿಎಂಎಸ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಅಧ್ಯಾಪನ ಪಬ್ಲಿಕ್ ಚಾರಿಟೇಬಲ್ ಟ್ರಸ್ಟ್‌ನ ವ್ಯವಸ್ಥಾಪಕ ನಿರ್ದೇಶಕಿ ಎಂ.ಜಿ.ದಿವ್ಯಶ್ರೀ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇಸ್ರೋದ ಚಟುವಟಿಕೆ ಕಾರ್ಯಗಳಲ್ಲಿ ಒಂದಾದ ದೂರದರ್ಶಕ ನಿರ್ಮಾಣ ಕಾರ್ಯವನ್ನು ಮಕ್ಕಳಿಗೆ ಚಟುವಟಿಕೆ ರೂಪದಲ್ಲಿ ಅಧ್ಯಯನ ಮಾಡುವಂತೆ ರೂಪಿಸಲಾಗಿದೆ. ಇದಕ್ಕೆ ಪಾಂಡವಪುರ ತಾಲೂಕಿನ ಶಾಲೆಗಳಿಂದ ತಲಾ 10 ಮಂದಿಯಂತಿ 100 ವಿದ್ಯಾರ್ಥಿಗಳಿಗೆ ಉಚಿತ ತರಬೇತಿ ನೀಡಲಾಗುತ್ತಿದೆ ಎಂದರು.

ವಿದ್ಯಾರ್ಥಿಗಳು ತಾವೇ ದೂರದರ್ಶಕ ನಿರ್ಮಿಸುವ ವಿಧಾನವನ್ನು ಕಲಿಯುವುದು ಮತ್ತು ಅದರ ಬಳಕೆ ಅರ್ಥೈಸಿಕೊಳ್ಳುವುದು ಸಹಾಯಕವಾಗಲಿದೆ. ಇದರಿಂದ ವಿದ್ಯಾರ್ಥಿಗಳಲ್ಲಿ ಅಂತರಿಕ್ಷ ವಿಜ್ಞಾನ ಬಗ್ಗೆ ಆಸಕ್ತಿ ಹೆಚ್ಚಿಸುವುದು. ಮತ್ತವರ ವೈಜ್ಞಾನಿಕ ಚಿಂತನೆಗೆ ಉತ್ತೇಜನ ನೀಡುವುದು ಮುಖ್ಯ ಗುರಿಯಾಗಿದೆ ಎಂದು ಹೇಳಿದರು.

ಶಿಬಿರದಲ್ಲಿ ತಜ್ಞರು ಮಾರ್ಗದರ್ಶನ ನೀಡಿ, ದೂರದರ್ಶಕ ಭಾಗಗಳು, ಅದರ ಕಾರ್ಯವಿಧಾನ ಮತ್ತು ಆಕಾಶ ವೀಕ್ಷಣೆಯ ಪ್ರಾಯೋಗಿಕ ಅನುಭವ ವಿದ್ಯಾರ್ಥಿಗಳಿಗೆ ನೀಡಲಿದ್ದಾರೆ. ವಿದ್ಯಾರ್ಥಿಗಳಿಗೆ ಅಂತರಿಕ್ಷದ ಬಗ್ಗೆ ತಿಳುವಳಿಕೆ ಹಾಗೂ ಹೊಸ ಅನ್ವೇಷಣೆಯ ಚೈತನ್ಯ ಬೆಳೆಯಲಿದೆ ಎಂದು ಹೇಳಿದರು.

ಗೋಷ್ಠಿಯಲ್ಲಿ ಟ್ರಸ್ಟ್‌ನ ಕಾರ್ಯದರ್ಶಿ ಜಿ.ಟಿ.ಪ್ರವೀಣ್‌ಕುಮಾರ್, ಪುಟ್ಟಣ್ಣಯ್ಯ ಫೌಂಡೇಶನ್‌ನ ಪ್ರತಿನಿಧಿ ಪ್ರೀತಿ ಮಹದೇವ್ ಇದ್ದರು.



ಸಾರ್ವಜನಿಕರಿಗೆ ತೊಂದರೆಯಾಗದಂತೆ ಆಸ್ಪತ್ರೆಗಳಲ್ಲಿ ವೈದ್ಯರು ಸೇವೆ ಮಾಡಿ : ಕುಮಾರ

# ಲ್ಯಾಬ್ ಎಲ್ಲಾ ವೈದ್ಯಕೀಯ ವರದಿಗಳನ್ನು ವಿಳಂಬವಿಲ್ಲದೆ ನೀಡಬೇಕು: ಜಿಲ್ಲಾಧಿಕಾರಿ



**ಮಂಡ್ಯ :** ರೋಗಿಗಳ ಆರೋಗ್ಯದ ತುರ್ತು ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಎಲ್ಲಾ ವೈದ್ಯಕೀಯ ವರದಿಗಳನ್ನು ವಿಳಂಬವಿಲ್ಲದೆ ನೀಡಬೇಕು ಎಂದು ಜಿಲ್ಲಾಧಿಕಾರಿ ಡಾ. ಕುಮಾರ ಅವರು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಗುರುವಾರ ಪ್ರಗತಿ ಪರಿಶೀಲನಾ ಸಭೆ ನಡೆಸಿ ಮಾತನಾಡಿದರು.

ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಆಸ್ಪತ್ರೆಯ ವೈದ್ಯರು ಸರಿಯಾದ ಸಮಯಕ್ಕೆ ಕರ್ತವ್ಯಕ್ಕೆ ಹಾಜರಾಗಬೇಕು. ಎಲ್ಲಾ ವೈದ್ಯರು ಮತ್ತು ಸಿಬ್ಬಂದಿ ನಿಗದಿಪಡಿಸಿದ ಸಮಯಕ್ಕೆ ಆಸ್ಪತ್ರೆಗೆ ಬರಬೇಕು. ಒಪಿಡಿ (OPD) ಸೇವೆ ಬೆಳಗ್ಗಿನ ಅವಧಿಯಲ್ಲಿ ರೋಗಿಗಳಿಗೆ ಯಾವುದೇ ವಿಳಂಬವಿಲ್ಲದೆ ತಪಾಸಣೆ ಆರಂಭಿಸಬೇಕು ಎಂದು ಅವರು ತಿಳಿಸಿದರು.

ವೈದ್ಯರು ಹಾಗೂ ಸಿಬ್ಬಂದಿ ಕಡ್ಡಾಯವಾಗಿ ಕರ್ತವ್ಯದ ಸಮಯದಲ್ಲಿ ಇರುವುದನ್ನು ಖಚಿತಪಡಿಸಿಕೊಳ್ಳಲು ಮಿಮ್ಸ್ ಆಡಳಿತಾಧಿಕಾರಿಗಳು ಹಾಗೂ ನಿರ್ದೇಶಕರು ನಿಯಮಿತವಾಗಿ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ಈ ಸಂಬಂಧ ಆಸ್ಪತ್ರೆಗೆ ಬರುವ ರೋಗಿಗಳಿಗೆ ಚಿಕಿತ್ಸೆ ನೀಡುವಲ್ಲಿ ಯಾವುದೇ ರೀತಿಯ ತೊಂದರೆ ಆಗದಂತೆ ಅಗತ್ಯ ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

ರೋಗಿಗಳ ಸಂಬಂಧಿಕರಿಗೆ ಕೈಗೆಟುಕುವ ದರದಲ್ಲಿ ವಸತಿ ಒದಗಿಸುವ ಆರೋಗ್ಯ ಧಾಮ ಸೌಲಭ್ಯಗಳ ಪರಿಣಾಮಕಾರಿ ನಿರ್ವಹಣೆ ಮತ್ತು ಪಾರದರ್ಶಕತೆ ಕಾಪಾಡಿಕೊಳ್ಳಬೇಕು ಎಂದು ಅವರು ತಿಳಿಸಿದರು.

ಬಡ ಮತ್ತು ಮಧ್ಯಮ ವರ್ಗದ ರೋಗಿಗಳಿಗೆ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮೂಲಕ ಉಚಿತ ಹಾಗೂ ಗುಣಮಟ್ಟದ ಚಿಕಿತ್ಸೆ ಲಭ್ಯವಿರುತ್ತದೆ. ಈ ಯೋಜನೆಯಡಿ ಸೌಲಭ್ಯಗಳನ್ನು ನೀಡುವಂತೆ ಅಗತ್ಯ ಕ್ರಮವಹಿಸಬೇಕು. ಮಿಮ್ಸ್ ನಲ್ಲಿ ಆಡಳಿತಾತ್ಮಕ ಸುಧಾರಣೆ, ಮೂಲಸೌಕರ್ಯ ಅಭಿವೃದ್ಧಿ, ಮತ್ತು ರೋಗಿಗಳಿಗೆ ದೊರೆಯುವ ಚಿಕಿತ್ಸೆಯ ಗುಣಮಟ್ಟ ಚೆನ್ನಾಗಿರಬೇಕು ಎಂದು ಅವರು ತಿಳಿಸಿದರು.

ಮಿಮ್ಸ್ ಆವರಣದಲ್ಲಿ ನಡೆಯುತ್ತಿರುವ ಬಾಕಿ ಉಳಿದಿರುವ ಸಿವಿಲ್ ಕಾಮಗಾರಿಗಳನ್ನು ನಿಗದಿತ ಸಮಯದೊಳಗೆ ಪೂರ್ಣಗೊಳಿಸಲು ಮತ್ತು ರೋಗಿಗಳಿಗೆ ಹಾಗೂ ವಿದ್ಯಾರ್ಥಿಗಳಿಗೆ ಮೂಲಸೌಕರ್ಯಗಳನ್ನು ಬಲಪಡಿಸಲು ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ಸೂಚನೆ ನೀಡಿದರು. ಮಿಮ್ಸ್‌ನಲ್ಲಿ ಪ್ರಸ್ತಾವಿತ ಕ್ಯಾನ್ಸರ್ ಕೇರ್ ಸೆಂಟರ್ ಅನ್ನು ಶೀಘ್ರವಾಗಿ ಆರಂಭಿಸಲು ಅಗತ್ಯ ಕ್ರಮವಹಿಸುವಂತೆ ತಿಳಿಸಿದರು.

ಆಸ್ಪತ್ರೆಯ ತಾಂತ್ರಿಕ ಉನ್ನತೀಕರಣದ ಭಾಗವಾಗಿ ವಿದ್ಯುತ್ ಲೋಡ್ ಸಾಮರ್ಥ್ಯವನ್ನು ಹೆಚ್ಚಿಸಲಾಗಿದೆ ಎಂದು ಸಭೆಯಲ್ಲಿ ತಿಳಿದ ಜಿಲ್ಲಾಧಿಕಾರಿಗಳುಆಸ್ಪತ್ರೆಯಲ್ಲಿ ಔಷಧಗಳು, ತುರ್ತು ಚಿಕಿತ್ಸಾ ಉಪಕರಣಗಳು ಹಾಗೂ ರೋಗ ಪತ್ತೆ ಪರೀಕ್ಷೆಗಳು (ಲ್ಯಾಬ್ ಟೆಸ್ಟ್) ರೋಗಿಗಳಿಗೆ ಸಿಗುವಂತೆ ಅಗತ್ಯ ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಸಭೆಯಲ್ಲಿ ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ನಿರ್ದೇಶಕರಾದ ಡಾ. ಪಿ. ನರಸಿಂಹಸ್ವಾಮಿ, ಮಿಮ್ಸ್ ಆಸ್ಪತ್ರೆಯ ಮುಖ್ಯ ಆಡಳಿತಾಧಿಕಾರಿ ಕೃಷ್ಣ ಕುಮಾರ್, ನಿರ್ಮಿತಿ ಕೇಂದ್ರದ ಯೋಜನಾಧಿಕಾರಿಗಳಾದ ಜಯಪ್ರಕಾಶ್ ಹಾಗೂ ಮಿಮ್ಸ್ ಅಧಿಕಾರಿಗಳು ಉಪಸ್ಥಿತರಿದ್ದರು.

## ಅಂತರರಾಷ್ಟ್ರೀಯ ವೈದ್ಯಕೀಯ ಸಮ್ಮೇಳನ ಜೂ.22ರಿಂದ

ಮಂಡ್ಯ: ಆದಿಚುಂಚನಗಿರಿ ವಿಶ್ವವಿದ್ಯಾಲಯದ ಆದಿಚುಂಚನಗಿರಿ ಇನ್ಸಿಟ್ಯೂಟ್ ಆಫ್ ಮಾಲಿಕ್ಯೂಲರ್ ಮೆಡಿಸಿನ್ ಕಾಲೇಜಿನ ಬಿಜಿಎಸ್ ಆಡಿಟೋರಿಯಂನಲ್ಲಿ ಜೂ.22ರಂದು 11 ಗಂಟೆಗೆ ಭಾಷಾಂತರ ಸಂಶೋಧನೆಗಾಗಿ ಆರೋಗ್ಯ ವಿಜ್ಞಾನದಲ್ಲಿ ಅಂತರಶಿಸ್ತೀಯ ಅಪ್ರೋಚರ್ ಕುರಿತು 2 ದಿನಗದ ಅಂತರರಾಷ್ಟ್ರೀಯ ಸಮ್ಮೇಳನವನ್ನು ಆಯೋಜಿಸಲಾಗಿದೆ ಎಂದು ಕಾಲೇಜಿನ ಸಂಶೋಧನಾ ವಿಭಾಗದ ಮುಖ್ಯಸ್ಥ ಪ್ರಶಾಂತ್ ಕಾಳಪ್ಪ ತಿಳಿಸಿದರು.



ಸುದ್ದಿಗೋಷ್ಠಿಯಲ್ಲಿ ಮಾತನಾಡಿ ಅವರು, ಸಮ್ಮೇಳನದಲ್ಲಿ ವಿಶ್ವಾದ್ಯಂತ 500 ಮಂದಿ ಸಂಶೋಧಕರು ಹಾಗೂ 15 ಹಿರಿಯ ಸಂಶೋಧಕ ಪ್ರಧ್ಯಾಪಕರು ಭಾಗವಹಿಸಲಿದ್ದಾರೆ ಎಂದರು.

ಆದಿಚುಂಚನಗಿರಿ ಪೀಠಾಧಿಪತಿ ಶ್ರೀ. ಡಾ.ನಿರ್ಮಲಾನಂದನಾಥ ಸ್ವಾಮೀಜಿ ಸಮ್ಮೇಳನದ ಅಧ್ಯಕ್ಷತೆ ವಹಿಸಲಿದ್ದು, ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ಉದ್ಘಾಟಿಸುವರು. ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವ ಡಾ.ಶರಣ್ ಪ್ರಕಾಶ್ ರುದ್ರಪ್ಪ ಪಾಟೀಲ್, ಮಾಜಿ ಸಚಿವ ಎನ್.ಚಲುವರಾಯಸ್ವಾಮಿ, ಎಸ್‌ಇಆರ್‌ಬಿ ನ್ಯಾಷನಲ್ ಸೈನ್ಸ್‌ನ ಅಧ್ಯಕ್ಷ ಪ್ರೊ.ಕೆ.ಎನ್.ಗಣೇಶ್, ಕೆಎಸ್‌ಯುಓಯ ವಿಶ್ರಾಂತ ಕುಲಪತಿ ಹಾಗೂ ಎನ್‌ಎಎಸ್‌ಐ ಪೀಠದ ಗೌರವಾನ್ವಿತ ಪ್ರಾಧ್ಯಾಪಕ ಪ್ರೊ. ಕೆ.ಎನ್.ರಂಗಪ್ಪ ಹಾಗೂ ಜಪಾನಿನ ಹಾಕ್ಕೈಡೋ ವಿವಿಯ ಪ್ರೊ.ಶಿನ್ ಇಚಿರೊನಿಶಿಮುರ, ವಿಚಾರ ಸಂಕಿರಣದಲ್ಲಿ ಆದಿಚುಂಚನಗಿರಿ ವಿವಿಯ ಕುಲಪತಿ ಕರ್ನಲ್ ಡಾ.ಎಸ್.ಎನ್.ಶ್ರೀಧರ, ಕುಲಸಚಿವ ಡಾ.ಸಿ.ಕೆ.ಸುಬ್ಬರಾಯ ಭಾಗವಹಿಸಲಿದ್ದಾರೆ ಎಂದು ಹೇಳಿದರು.

ಗೋಷ್ಠಿಯಲ್ಲಿ ಸಂಶೋಧನಾ ವಿಭಾಗದ ಪ್ರಾಧ್ಯಾಪಕ ಅನಿಲ್‌ಕುಮಾರ್ ಇದ್ದರು.

## ರಿಂಗ್‌ನ ರಣಧೀರ ವಿ. ದೇವರಾಜನ್



| ಡಾ.ಸುಧಾಕರ.ಜಿ.ಲಕ್ಕವಳ್ಳಿ

ಸ್ಫೂರ್ತಿ ಸುಧೆ - 47

ಕೆಲವರು ಇತಿಹಾಸದ ಪುಟಗಳನ್ನು ಅವಲೋಕಿಸುತ್ತಾರೆ, ಮತ್ತೆ ಕೆಲವರು ಹೊಸ ಇತಿಹಾಸವನ್ನೇ ಸೃಷ್ಟಿಸುತ್ತಾರೆ! ಆ ಎರಡನೇ ಸಾಲಿನ ಧೀಮಂತ ಸಾಹಸಿ ವಿ. ದೇವರಾಜನ್.1992ರ ಬಾರ್ಸಿಲೋನಾ ಒಲಿಂಪಿಕ್ಸ್‌ನ ಜ್ವಲಂತ ಕಣದಲ್ಲಿ ಅವರು ಊರಿದ ಪ್ರತಿ ಹೆಜ್ಜೆಯೂ ಭಾರತೀಯ ಬಾಕ್ಸಿಂಗ್‌ನ ಪಾಲಿಗೆ ನವೋದಯದ ಮುನ್ನುಡಿಯಾಯಿತು. ತಮಿಳುನಾಡಿನಿಂದ ಒಲಿಂಪಿಕ್ಸ್ ರಂಗಕ್ಕೆ ಪಾದಾರ್ಪಣೆ ಮಾಡಿದ ಪ್ರಥಮ ಮುಷ್ಟಿಯೋಧ ಎಂಬ ಗರಿ ಇವರ ಮುಡಿಗೇರಿತು.ದೇವರಾಜನ್ ಅವರ ಸಾಧನೆಯ ಹಿಂದೆ ಇದ್ದುದು ಕೇವಲ ಕೈಚಳಕವಲ್ಲ;ಅದು ವಜ್ರದಂತಹ ಶಿಸ್ತು, ಅವಿರತ ಬೆವರಿನ ಸಮರ್ಪಣೆ.

ಎದುರಾಳಿಯ ಪ್ರಹಾರಕ್ಕಿಂತಲೂ ನಿಷ್ಠುರವಾಗಿದ್ದ ಬದುಕಿನ ಸವಾಲುಗಳನ್ನು ಅದಮ್ಯ ಆತ್ಮಸ್ಥೈರ್ಯದಿಂದ ಮೆಟ್ಟಿನಿಂತರು.



ಸವಲತ್ತುಗಳ ಕ್ಷಾಮದ ನಡುವೆಯೂ ಶೂನ್ಯದಿಂದ ಶಿಖರವನ್ನೇರಿ, ಪರದೇಶದಲ್ಲಿ ತ್ರಿವರ್ಣ ಧ್ವಜವನ್ನು ಹೆಮ್ಮೆಯಿಂದ ಹಾರಿಸಿದ ಇವರ ಜೀವನಗಾಥೆ ಇಂದಿನ ಯುವಮನಸ್ಸುಗಳಿಗೆ ಸ್ಫೂರ್ತಿಯ ಸೆಲೆ.ಸಾಧ್ಯವಿಲ್ಲ ಎಂದು ಶರಣಾಗುವವರಿಗೆ ಇವರ ಪಯಣವೇ ಬೆಳಕಿನ ಕಿರಣ. ಕೇವಲ ಕ್ರೀಡಾಪಟುವಲ್ಲ,ಛಲ ಮತ್ತು ಧೈರ್ಯದ ಜೀವಂತ ಪ್ರತಿಮೆಯಾಗಿ ಅವರು ಇಂದಿಗೂ ಕಂಗೊಳಿಸುತ್ತಿದ್ದಾರೆ.

ಇತಿಹಾಸವು ಸಾಮಾನ್ಯರಿಗಾಗಿ ಬರೆಯಲ್ಪಡುವುದಿಲ್ಲ;ಅದು ಅಸಾಮಾನ್ಯ ಕನಸು ಕಟ್ಟಿ,ಅದರ ಸಾಕಾರಕ್ಕೆ ರಕ್ತ-ಬೆವರನ್ನು ಧಾರೆಯೆರೆಯುವ ರಣಧೀರರಿಗಾಗಿ ಮೀಸಲು. ಗುರಿಯೆಡೆಗೆ ಅಚಲ ನಿಷ್ಠೆಯಿದ್ದರೆ, ದಿಗಂತವೂ ಹತ್ತಿರವಾಗುತ್ತದೆ, ಜಗವೇ ತಲೆದೂಗುತ್ತದೆ ಎಂಬ ಪರಮಸತ್ಯಕ್ಕೆ ವಿ. ದೇವರಾಜನ್ ಅವರ ಬದುಕೇ ನಿರ್ವಿವಾದ ನಿದರ್ಶನ.



ಸಿನಿಮಾ ವರದಿ: ಬಿ.ಜಿ.ರವಿಕುಮಾರ್



# ಗ್ರಾಮಾಯಣದ ಹಾಡಿಗೆ ಮೆಚ್ಚುಗೆ...



ಲಹರಿ ಫಿಲಂಸ್ ನಿರ್ಮಾಣದ, ದೇವನೂರು ಚಂದ್ರು ರಚನೆ – ನಿರ್ದೇಶನದ ಹಾಗೂ ವಿನಯ್ ರಾಜಕುಮಾರ್ – ಮೇಘ ಶೆಟ್ಟಿ ನಾಯಕ – ನಾಯಕಿಯಾಗಿ ಅಭಿನಯಿಸಿರುವ "ಗ್ರಾಮಾಯಣ" ಚಿತ್ರದ "ಏನೇ ಹೇಳು ಕುಸುಮ" ಹಾಡು ಇತ್ತೀಚೆಗೆ ಬಿಡುಗಡೆಯಾಯಿತು.

ಲಹರಿ ವೇಲು ಈ ಹಾಡನ್ನು ಅನಾವರಣ ಮಾಡಿದರು. ಪ್ರಮೋದ್ ಮರವಂತೆ ಬರೆದು, ಪೂರ್ಣಚಂದ್ರ ತೇಜಸ್ವಿ ಸಂಗೀತ ನೀಡಿರುವ ಈ ಹಾಡನ್ನು ನಿಹಾಲ್ ತವ್ರೊ ಹಾಗೂ ಸಾಕ್ಷಿ ಕಲ್ಲೂರ್ ಹಾಡಿದ್ದಾರೆ. ಹಾಡು ಬಿಡುಗಡೆಯಾದ ಕ್ಷಣದಿಂದಲೇ ಮೆಚ್ಚುಗೆಯ ಮಾಹಾಪೂರವೇ ಹರಿದು ಬರುತ್ತಿದ್ದು, ಅಧಿಕ ಸಂಖ್ಯೆಯಲ್ಲಿ ವೀಕ್ಷಣೆಯಾಗುತ್ತಿದೆ. ಚಿತ್ರ ಜುಲೈ 3 ರಂದು ತೆರೆಗೆ ಬರುತ್ತಿದೆ.

ಲಹರಿ ವೇಲು,ಮಾತನಾಡಿ "ಗ್ರಾಮಾಯಣ" ನಮ್ಮ ಲಹರಿ ಸಂಸ್ಥೆ ನಿರ್ಮಾಣದ ಒಂಭತ್ತನೇ ಚಿತ್ರ. ಒಂಭತ್ತು ನಮ್ಮ ಸಂಸ್ಥೆಗೆ ಅದೃಷ್ಟದ ಸಂಖ್ಯೆ. ಸುವರ್ಣ ವರ್ಷದ ಸಂಭ್ರಮದಲ್ಲಿರುವ ನಮ್ಮ ಸಂಸ್ಥೆಯಿಂದ ಗ್ರಾಮೀಣ ಸೊಗಡಿನ ಒಂದೊಳ್ಳೆ ಸದಭಿರುಚಿಯ ಚಿತ್ರ ನಿರ್ಮಾಣವಾಗಿರುವುದು ಖುಷಿಯಾಗಿದೆ. ನಿರ್ದೇಶಕ ದೇವನೂರು ಚಂದ್ರು ಒಂದೊಳ್ಳೆ ಚಿತ್ರ ನಿರ್ದೇಶನ ಮಾಡಿದ್ದಾರೆ. ಚಿತ್ರದಲ್ಲಿ ಒಂಭತ್ತು ಹಾಡುಗಳಿದೆ. ಇಂದು ಐದನೇ ಹಾಡು ಬಿಡುಗಡೆಯಾಗಿದೆ. ಈ ಹಾಡು ಬಹಳ ಚೆನ್ನಾಗಿದೆ. ಈ ಹಿಂದೆ ಶಿವರಾಜಕುಮಾರ್ ಅವರು ಬಿಡುಗಡೆ ಮಾಡಿದ್ದ "ಬೆಂಕಿ" ಹಾಡು ಸೂಪರ್ ಹಿಟ್ ಆಗಿದೆ. ಚಿತ್ರ ಜುಲೈ 3 ರಂದು ತೆರೆಗೆ ಬರುತ್ತಿದೆ. ನಿಮ್ಮೆಲ್ಲರ ಪ್ರೋತ್ಸಾಹವಿರಲಿ ಎಂದರು. "ಏನೇ ಹೇಳು ಕುಸುಮ" ಒಂದು ಮೆಲೋಡಿ ಹಾಡು. ಕೇಳುತ್ತಾ, ಕೇಳುತ್ತಾ ಮನಸ್ಸಿಗೆ ಮುಟ್ಟುವ ಗುಣ ಮೆಲೋಡಿ ಹಾಡುಗಳದ್ದು. ಇಂತಹ ಉತ್ತಮ ಹಾಡು ಕೊಟ್ಟ ಸಂಗೀತ ನಿರ್ದೇಶಕ ಪೂರ್ಣಚಂದ್ರ ತೇಜಸ್ವಿ ಅವರಿಗೆ, ಹಾಡು ಬರೆದುಕೊಟ್ಟ ಪ್ರಮೋದ್ ಮರವಂತೆ ಅವರಿಗೆ ಹಾಗೂ ಗಾಯಕ – ಗಾಯಕಿಗೆ ಧನ್ಯವಾದ. "ಗ್ರಾಮಾಯಣ", ಗ್ರಾಮೀಣ ಸೊಗಡಿನ ಸಿನಿಮಾ. ನೋಡುಗರಿಗೆ ಬೇಕಾದ ಎಲ್ಲಾ ಅಂಶಗಳಿರುವ ಸಿನಿಮಾ ಕೂಡ. ಈವರೆಗೂ ಮಾಡಿರದ ಪಾತ್ರದಲ್ಲಿ ವಿನಯ್ ರಾಜಕುಮಾರ್ ಅಭಿನಯಿಸಿದ್ದಾರೆ. ಮೇಘ ಶೆಟ್ಟಿ ಅವರದು ಕೂಡ ವಿಭಿನ್ನ ಪಾತ್ರ.

ಅಚ್ಯುತಕುಮಾರ್, ಗೋಪಾಲಕೃಷ್ಣ ದೇಶಪಾಂಡೆ, ಅರುಣ್ ಸಾಗರ್, ಬಲ ರಾಜವಾಡಿ, ಅಪರ್ಣ ವಸ್ತಾರೆ, ಸೀತಾ ಕೋಟೆ, ಪ್ರಶಾಂತ್ ಹೊನ್ನಾಳಿ, ಅವಿನಾಶ್ ರೈ ಹೀಗೆ ಅನುಭವಿ ಕಲಾವಿದರ ದೊಡ್ಡ ತಾರಾಬಳಗವೇ ಇರುವ ಈ ಚಿತ್ರದ ವಿಶೇಷ ಪಾತ್ರದಲ್ಲಿ ಲೂಸ್ ಮಾದ ಯೋಗಿ ಅಭಿನಯಿಸಿದ್ದಾರೆ. ಸಂತೋಷ್ ರೈ ಪಾತಾಜೆ ಅವರ ಛಾಯಾಗ್ರಹಣ ಕೂಡ ಚಿತ್ರಕ್ಕೆ ಪೂರಕವಾಗಿದೆ. ಒಟ್ಟಾರೆ ಇಡೀ ತಂಡದ ಶ್ರಮದಿಂದ "ಗ್ರಾಮಾಯಣ" ಒಂದೊಳ್ಳೆ ಚಿತ್ರವಾಗಿ ಇದೇ ಜುಲೈ 3 ರಂದು ನಿಮ್ಮ ಮುಂದೆ ಬರಲಿದೆ ಎಂದರು ನಿರ್ದೇಶಕ ದೇವನೂರು ಚಂದ್ರು.

ಕಲಾವಿದರ ಸಂಘದ ಆವರಣದಲ್ಲೇ ಅಪ್ಪ, ದೊಡ್ಡಪ್ಪ ಹಾಗೂ ಚಿಕ್ಕಪ್ಪ ಅವರಿಂದ ಈ ಚಿತ್ರಕ್ಕೆ ಚಾಲನೆ ದೊರಕಿತ್ತು. ಈಗ ಇದೇ ಜಾಗದಲ್ಲೇ ಚಿತ್ರದ ಬಿಡುಗಡೆ ದಿನಾಂಕ ಕೂಡ ಘೋಷಣೆಯಾಗಿದೆ ಎಂದರು ವಿನಯ್ ರಾಜಕುಮಾರ್.. ಕುಸುಮ ನನ್ನ ಪಾತ್ರದ ಹೆಸರು. ಇಂದು ಅದೇ ಹೆಸರಿನಿಂದ ಹಾಡೊಂದು ಬಿಡುಗಡೆಯಾಗಿದೆ. ಹಾಡು ಚೆನ್ನಾಗಿದೆ ಎಂದು ನಾಯಕಿ ಮೇಘ ಶೆಟ್ಟಿ ತಿಳಿಸಿದರು.

ನಾನು "ಲೂಸಿಯಾ" ಚಿತ್ರದಿಂದ ಪೂರ್ಣಚಂದ್ರ ತೇಜಸ್ವಿಯವರನ್ನು ಬಲ್ಲೆ. ಉತ್ತಮ ಸಂಗೀತ ನಿರ್ದೇಶಕರು ಅವರು. ನಮ್ಮ "ಗ್ರಾಮಾಯಣ" ಚಿತ್ರದಲ್ಲೂ ಒಂಭತ್ತು ಸುಮಧುರ ಹಾಡುಗಳಿದೆ. ಎಲ್ಲಾ ಹಾಡುಗಳು ಒಂದಕ್ಕಿಂತ ಒಂದು ಚೆನ್ನಾಗಿದೆ . ದೇವನೂರು ಚಂದ್ರು ಅವರ ನಿರ್ದೇಶನ, ತಂತ್ರಜ್ಞರ ಕಾರ್ಯ ವೈಖರಿ ಹಾಗೂ ಎಲ್ಲಾ ಕಲಾವಿದರ ಅಭಿನಯ ಚೆನ್ನಾಗಿದೆ ಎಂದು ನಿರ್ಮಾಪಕ ನವೀನ್ ಮನೋಹರ್ ಹೇಳಿದರು.

ಹಾಡುಗಳ ಕುರಿತು ಸಂಗೀತ ಸಂಯೋಜಕ ಪೂರ್ಣಚಂದ್ರ ತೇಜಸ್ವಿ ಮಾಹಿತಿ ನೀಡಿದರು.



# "ಮಹಾನ್" ಚಿತ್ರದಲ್ಲಿ "ಮಹಾನ್" ನಟರ ಅಭಿನಯ

ಆಕಾಶ್ ಪಿಕ್ಚರ್ಸ್ ಲಾಂಛನದಲ್ಲಿ ಪ್ರಕಾಶ್ ಬುದ್ದೂರು ನಿರ್ಮಿಸುತ್ತಿರುವ, ಪಿ.ಸಿ.ಶೇಖರ್ ನಿರ್ದೇಶಿಸುತ್ತಿರುವ "ಮಹಾನ್" ಚಿತ್ರ ಆರಂಭದಿಂದಲೂ ಸಾಕಷ್ಟು ಸದ್ದು ಮಾಡುತ್ತಿದೆ. ವಿಜಯ ರಾಘವೇಂದ್ರ ಈ ಚಿತ್ರದ ನಾಯಕನಾಗಿ ನಟಿಸಿದ್ದಾರೆ.

"ಮಹಾನ್" ರೈತರ ಕಥೆಯಾಗಿದ್ದು, ಈ ಚಿತ್ರದ ಪ್ರತಿಯೊಂದು ಪಾತ್ರವು ಬಹಳ ಮುಖ್ಯ ಎನಿಸುತ್ತದೆ. ಇಂತಹ ಅಪರೂಪದ ಕಥಾಹಂದರ ಹೊಂದಿರುವ ನಮ್ಮ "ಮಹಾನ್" ಚಿತ್ರದಲ್ಲಿ ಕನ್ನಡ ಚಿತ್ರರಂಗದ "ಮಹಾನ್" ಕಲಾವಿದರಾದ ಡೈನಾಮಿಕ್ ಸ್ಟಾರ್ ದೇವರಾಜ್, ಶರತ್ ಲೋಹಿತಾಶ್ವ, ರಮೇಶ್ ಭಟ್, ಅವಿನಾಶ್, ರಂಗಾಯಣ ರಘು ಹಾಗೂ ರಮೇಶ್ ಇಂದಿರಾ ಅಭಿನಯಿಸಿದ್ದಾರೆ. ಇವರೆಲ್ಲರ ಪಾತ್ರವೂ ನೋಡುಗನ ಮನದಲ್ಲಿ ಉಳಿಯುವಂತ ಪಾತ್ರಗಳಾಗಿದೆ. ಇಂತಹ ಅನುಭವಿ ಕಲಾವಿದರು ನಮ್ಮ ಚಿತ್ರದಲ್ಲಿ ನಟಿಸಿರುವುದು ಬಹಳ ಹೆಮ್ಮೆ. ಇದೊಂದು ಬಹು ತಾರಾಬಳಗದ ಚಿತ್ರವಾಗಿದ್ದು, ರಾಧಿಕಾ ನಾರಾಯಣ್, ಮಿತ್ರ, ನಮ್ರತಾ ಗೌಡ, ವರ್ಷ ಬೊಳ್ಳಮ್ಮ, ಕಿರಣ್ ಶ್ರೀನಿವಾಸ್ ಸಹ ಅಭಿನಯಿಸಿದ್ದಾರೆ. ವಿಜಯ ರಾಘವೇಂದ್ರ ಅವರು ರೈತನ ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದಾರೆ.

# `ನಾಗುಗೆ ವಧು ಬೇಕಾಗಿದೆ'
## ಹಾಡುಗಳು ಹಾಗೂ ಟ್ರೇಲರ್ ಚೆನ್ನಾಗಿದೆ

ಪ್ರಸ್ತುತ ಹಳ್ಳಿಯಲ್ಲಾಗಲಿ ಅಥವಾ ನಗರಪ್ರದೇಶಗಳಲ್ಲಾಗಲಿ ಬಹುತೇಕ ಗಂಡು ಮಕ್ಕಳಿಗೆ ಮದುವೆಗೆ ಹೆಣ್ಣು ಸಿಗುತ್ತಿಲ್ಲ. ಇದಕ್ಕೆ ಕಾರಣಗಳು ಹಲವಾರು. ಇಂತಹ ಪ್ರಸ್ತುತ ಪರಿಸ್ಥಿತಿಯನ್ನಿಟ್ಟುಕೊಂಡು ನಿರ್ದೇಶಕ ಆರ್ ಕೆ "ನಾಗೂಗೆ ವಧು ಬೇಕಾಗಿದೆ" ಎನ್ನುವ ಸಿನಿಮಾ ಮಾಡಿದ್ದಾರೆ. ಆರ್ ಕೆ ಅವರೆ ಕಥೆ, ಚಿತ್ರಕಥೆ ಹಾಗೂ ಸಂಭಾಷಣೆ ಬರೆದು ನಿರ್ದೇಶಿಸಿರುವ ಈ ಚಿತ್ರ ಶ್ರೀಗುರು ರಾಘವೇಂದ್ರ ಕನ್ನಡ ಸಿನಿಮಾಸ್ ಲಾಂಛನದಲ್ಲಿ ನಿರ್ಮಾಣವಾಗಿದೆ. ಇತ್ತೀಚೆಗೆ ಈ ಚಿತ್ರದ ಶೀರ್ಷಿಕೆ ಅನಾವರಣ, ಟ್ರೇಲರ್ ಹಾಗೂ ಹಾಡುಗಳ ಬಿಡುಗಡೆ ಸಮಾರಂಭ ಅದ್ದೂರಿಯಾಗಿ ನೆರವೇರಿತು. ಕರ್ನಾಟಕ ಮಹಿಳಾ ಆಯೋಗದ ಅಧ್ಯಕ್ಷರಾದ ನಾಗಲಕ್ಷ್ಮೀ ಚೌಧರಿ ಟ್ರೇಲರ್ ಹಾಗೂ ಹಾಡುಗಳನ್ನು ಅನಾವರಣ ಮಾಡಿದರು. ನಿರ್ದೇಶಕ "ಬಹದ್ದೂರ್" ಚೇತನ್ ಕುಮಾರ್ ಶೀರ್ಷಿಕೆ ಅನಾವರಣ ಮಾಡಿದರು. ನಂತರ ಗಣ್ಯರು ಹಾಗೂ ಚಿತ್ರತಂಡದ ಸದಸ್ಯರು ಮಾತನಾಡಿದರು. ಟ್ರೇಲರ್ ಹಾಗೂ ಹಾಡುಗಳನ್ನು ನೋಡುತ್ತಿದ್ದಾಗ ಈ ಚಿತ್ರದಲ್ಲಿರುವ ತಾಯಿ – ಮಗನ ಬಾಂಧವ್ಯದ ಸನ್ನಿವೇಶಗಳು ಮನಸ್ಸಿಗೆ ಹತ್ತಿರವಾಯಿತು. ಪ್ರಸಕ್ತ ಬಹುತೇಕ ಗಂಡುಮಕ್ಕಳು ಎದುರುಸುತ್ತಿರುವ ಸಮಸ್ಯೆಗಳನ್ನು ನಿರ್ದೇಶಕರು ತೆರೆಯ ಮೇಲೆ ತರುವ ಪ್ರಯತ್ನ ಮಾಡಿದ್ದಾರೆ. ಚಿತ್ರ ಯಶಸ್ವಿಯಾಗಲೆಂದು ಕರ್ನಾಟಕ ಮಹಿಳಾ ಆಯೋಗದ ಅಧ್ಯಕ್ಷರಾದ ನಾಗಲಕ್ಷ್ಮೀ ಚೌಧರಿ ಹಾರೈಸಿದರು.



ನಗರ ಪ್ರದೇಶಗಳಲ್ಲಾಗಲಿ ಹಾಗೂ ಹಳ್ಳಿಗಳಲ್ಲಾಗಲಿ ಹುಡುಗರಿಗೆ ಮದುವೆ ಆಗುತ್ತಿಲ್ಲ. ಹುಡುಗನಿಗೆ ಗೌರಮೆಂಟ್ ಕೆಲ್ಸಾನೆ ಬೇಕು. ಹೆಣ್ಣು ಕೊಡ್ಬೇಕು ಅಂದ್ರೆ ಅತ್ತೆ ಮಾವ ಇರಬಾರದು. ಬೆಂಗಳೂರು ಅಲ್ಲಿ ಸೈಟ್ ಮನೆ ಇರಬೇಕು. ಈಗಿನ ಕಾಲದ ಹೆಚ್ಚಿನ ಹುಡುಗಿಯರು ಈ ರೀತಿಯ ಬೇಡಿಕೆಗಳನ್ನಿಡುತ್ತಾರೆ. ಈ ಅಂಶಗಳ ನ್ನಿಟ್ಟುಕೊಂಡು ಹಾಗೂ ಹತ್ತಿರದಿಂದ ಕಂಡ ಕೆಲವು ಸನ್ನಿವೇಶಗಳಿಂದ ಪ್ರೇರಿತನಾಗಿ ಈ ಚಿತ್ರದ ಕಥೆ ಬರೆದಿದ್ದೇನೆ. ಇದೊಂದು ನೈಜಘಟನೆ ಆಧಾರಿತ ಚಿತ್ರ. ಈಗಾಗಲೇ ಚಿತ್ರೀಕರಣ ಮುಕ್ತಾಯವಾಗಿದ್ದು, ಮುಂದಿನ ತಿಂಗಳು ಚಿತ್ರವನ್ನು ತೆರೆಗೆ ತರುವ ಪ್ರಯತ್ನ ನಡೆಯುತ್ತಿದೆ. ದತ್ತು ಪೂಜಾರಿ ನಾಯಕನಾಗಿ ಅಭಿನಯಿಸಿದ್ದಾರೆ. ಸೋನಿಕಾ ಸೋಮಣ್ಣ, ಚಿತ್ರಾಲ್ ರಂಗಸ್ವಾಮಿ, ಅಪೂರ್ವಶ್ರೀ, ರೇಖಾದಾಸ್, ಬೌ ಬೌ ಬಿರಿಯಾನಿ ಜಯರಾಮ್ ಮುಂತಾದವರು ತಾರಾಬಳಗದಲ್ಲಿದ್ದಾರೆ. ಹಾಡು ಹಾಗೂ ಟ್ರೇಲರ್ ಬಿಡುಗಡೆ ಮಾಡಿಕೊಟ್ಟ ನಾಗಲಕ್ಷ್ಮೀ ಚೌಧರಿ ಅವರಿಗೆ ಹಾಗೂ ಶೀರ್ಷಿಕೆ ಅನಾವರಣ ಮಾಡಿದ "ಬಹದ್ದೂರ್" ಚೇತನ್ ಕುಮಾರ್ ಅವರಿಗೆ ಹಾಗೂ ಮಂಜುಳ ರಘು ಅವರಿಗೆ ಧನ್ಯವಾದ ಎಂದರು ನಿರ್ದೇಶಕ ಆರ್.ಕೆ. ನಿರ್ದೇಶಕರು ಹೇಳಿದ ಕಥೆ ಬಹಳ ಇಷ್ಟವಾಯಿತು. ನಾನು ಈ ಚಿತ್ರದ ನಾಯಕನಾಗಿ ನಟಿಸಿದ್ದೇನೆ. ನಾಗು ನನ್ನ ಪಾತ್ರದ ಹೆಸರು ಎಂದು ನಾಯಕ ದತ್ತು ಪೂಜಾರಿ ಹೇಳಿದರು .

ಚಿತ್ರದಲ್ಲಿ ನಟಿಸಿರುವ ರೇಖಾದಾಸ್, ಅಪೂರ್ವಶ್ರೀ, ಸೋನಿಕಾ ಸೋಮಣ್ಣ ಮುಂತಾದವರು ತಮ್ಮ ಪಾತ್ರದ ಕುರಿತು ಮಾತನಾಡಿದರು. ಸಂಗೀತ ನಿರ್ದೇಶಕ ಶ್ರೀಸುರೇಶ್ ಹಾಗೂ ಛಾಯಾಗ್ರಾಹಕ ನಾಗರಾಜ್ ಮುಂತಾದವರು ಪತ್ರಿಕಾಗೋಷ್ಠಿಯಲ್ಲಿದ್ದರು.




# ತೆರೆಗೆ ಸಿದ್ಧ ಎಜುಕೇಟಡ್ ಬುಲ್ಸ್

ಹಿರಿಯ ತಂತ್ರಜ್ಞ ಜಿ.ಕೆ. ಮುದ್ದುರಾಜ್ ಗ್ಯಾಪ್ ನಂತರ ಎಜುಕೇಟಡ್ ಬುಲ್ಸ್ ಸಿನಿಮಾಕ್ಕೆ ಚಿತ್ರಕತೆ ಬರೆದು ಆಕ್ಷನ್ ಕಟ್ ಹೇಳುವ ಜತೆಗೆ ಎಂ.ಎಸ್. ಎಂಟರ್‌ಪ್ರೈಸಸ್ ಲಾಂಛನದಲ್ಲಿ ನಿರ್ಮಾಣ ಮಾಡಿದ್ದಾರೆ. ಅಂದ ಹಾಗೆ ಇವರು ನಿರ್ದೇಶನದ 41ನೇ ಸಿನಿಮಾ ಎಂಬುದು ವಿಶೇಷ.

ಸಿನಿಮಾಯುವ ಜನಾಂಗಕ್ಕೆ ಜಾಗೃತಿ ಮೂಡಿಸುವ ಅಂಶಗಳನ್ನು ಒಳಗೊಂಡಿದೆ. ಜಾಣರಾಗಿರಿ, ಜಾಗೃತರಾಗಿರಿ ಎಂಬ ವಿಷಯಗಳ ಮೇಲೆ ಸನ್ನಿವೇಶಗಳು ಸಾಗುತ್ತದೆ. ನಾವು ಎಷ್ಟೇ ಬುದ್ದಿವಂತ ರಾಗಿದ್ದರೂ, ಸ್ವಲ್ಪ ಯಾಮಾರಿದರೆ, ನಮ್ಮ ಬದುಕು ಹಾಳಾಗುತ್ತದೆ. ಇದಕ್ಕೆ ಕಣ್ಣ ಮುಂದೆ ಸಾಕಷ್ಟು ಮಂದಿ ಸಾಕ್ಷಿಯಾಗಿದ್ದಾರೆ. ವಿದ್ಯೆ ಮುಖ್ಯವಲ್ಲ. ಅದರ ಜತೆಗೆ ಬುದ್ದಿಯೂ ಇರಬೇಕು. ಆಗ ಮಾತ್ರ ಜೀವನ ನೆಮ್ಮದಿಯಾಗಿರುತ್ತದೆ. ನೋಡುಗರಿಗೆ ಇದು ಹಾಸ್ಯವೆನಿಸಿದರೂ ದೃಶ್ಯಗಳು ಗಂಭೀರವಾಗಿರುತ್ತದೆ. ಇದನ್ನೆ ಚಿತ್ರದಲ್ಲಿ ಹೇಳಲಾಗಿದೆ.

ತಾರಾಗಣದಲ್ಲಿ ನೀರಜ್, ಅಜಯ್‌ಕುಮಾರ್, ತೇಜಸ್‌ಕುಮಾರ್, ರಾಕೇಶ್, ಪೂರ್ವಿಕಾ, ಹಿರಿಯ ನಟಿ ಭವ್ಯ, ಪಾಪಾ ಪಾಂಡು ಚಿದಾನಂದ, ದೊಂಬರ ಕೃಷ್ಣ ಸುರೇಶ್ ಮುಂತಾದವರು ಅಭಿನಯಿಸಿದ್ದಾರೆ. ಸಂಗೀತ ಸೂರಜ್ ಜೋಯಿಸ್, ಛಾಯಾಗ್ರಹಣ ರತಿನ್‌ಗೌಡ, ಸಾಹಸ ಥ್ರಿಲ್ಲರ್ ಮಂಜು ಅವರದಾಗಿದೆ. ಬೆಂಗಳೂರು ಸುತ್ತಮುತ್ತ ಚಿತ್ರೀಕರಣ ನಡೆಸಲಾಗಿದೆ. ಇದೇ ಶುಕ್ರವಾರದಂದು ಎಜುಕೇಟಡ್ ಬುಲ್ಸ್ ಚಿತ್ರಮಂದಿರಕ್ಕೆ ಲಗ್ಗೆ ಇಡಲಿದೆ.

# "ರೋಲೆಕ್ಸ್" ಜೊತೆ ಯಾದ ವಿನೋದ್ ಪ್ರಭಾಕರ್

"ರೋಲೆಕ್ಸ್" ಚಿತ್ರದಲ್ಲಿ ಡಿಫರೆಂಟ್ ಲುಕ್ ನಲ್ಲಿ ಕೋಮಲ್ ಕಾಣಿಸಿಕೊಂಡಿದ್ದಾರೆ. ಸೋನಾಲ್ ಮೊಂತೆರೊ ನಾಯಕಿಯಾಗಿ ಅಭಿನಯಿಸುತ್ತಿದ್ದಾರೆ. ನಟ ವಿನೋದ್ ಪ್ರಭಾಕರ್ ವಿಶೇಷಪಾತ್ರದಲ್ಲಿ ಅಭಿನಯಿಸಿದ್ದಾರೆ.

ಕಾಮಿಡಿಯೊಂದಿಗೆ ಕೌಟುಂಬಿಕ ಕಥಾಹಂದರವನ್ನೂ ಹೊಂದಿರುವ ಈ ಚಿತ್ರದ ಚಿತ್ರೀಕರಣ ಬಹುತೇಕ ಪೂರ್ಣವಾಗಿದೆ.

ಕೋಮಲ್ ಅವರು ಈ ಹಿಂದಿನ ಚಿತ್ರಗಳಿಗಿಂತ ವಿಭಿನ್ನ ಗೆಟಪ್ ನಲ್ಲಿ "ರೋಲೆಕ್ಸ್" ಚಿತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ವಿನೋದ್ ಪ್ರಭಾಕರ್, ಸೋನಾಲ್ ಮೊಂತೆರೊ, ಅಚ್ಯುತಕುಮಾರ್, ನವೀನ್ ಪಡೀಲ್, ಅರುಣ ಬಾಲರಾಜ್ ಪ್ರಮುಖಪಾತ್ರದಲ್ಲಿ ನಟಿಸಿದ್ದಾರೆ.

ಚಿತ್ರದಲ್ಲಿ ನಾಲ್ಕು ಹಾಡುಗಳಿದ್ದು, ಜೆಸ್ಸಿ ಗಿಫ್ಟ್ ಸಂಗೀತ ಸಂಯೋಜಿಸಿದ್ದಾರೆ. ಡಾ॥ವಿ.ನಾಗೇಂದ್ರಪ್ರಸಾದ್, ಕವಿರಾಜ್, ರಾಜೇಶ್ ವರ್ಮ ಹಾಗೂ ಕಿನ್ನಾಳ್ ರಾಜ್ ಗೀತರಚನೆ ಮಾಡಿದ್ದಾರೆ. ರಾಕೇಶ್ ಸಿ ತಿಲಕ್ ಛಾಯಾಗ್ರಹಣ, ಅರವಿಂದ್ ರಾಜ್ ಸಂಕಲನ, ಯೋಗಾನಂದ್ ಸಾಹಸ ನಿರ್ದೇಶನ ಹಾಗೂ ಕಲೈ – ಮುರಳಿ ಅವರ ನೃತ್ಯ ನಿರ್ದೇಶನವಿರುವ "ರೋಲೇಕ್ಸ್" ಚಿತ್ರಕ್ಕೆ ಮುರಳಿಕೃಷ್ಣ ಅವರು ಕಾರ್ಯಕಾರಿ ನಿರ್ಮಾಪಕರಾಗಿ ಕಾರ್ಯ



# "ಪತ್ತೇದಾರಿ" ಪೋಸ್ಟರ್ ಅನಾವರಣ



ಎ.ಕೆ ಪ್ರೊಡಕ್ಷನ್ಸ್ ಲಾಂಛನದಲ್ಲಿ ನಿರ್ಮಾಣ ಮಾಡುತ್ತಿರುವ, ಶ್ರೀನಿವಾಸ್ ಜಯರಾಮ್ ರಚನೆ & ನಿರ್ದೇಶನದ "ಪತ್ತೇದಾರಿ" ಚಿತ್ರದ ಪೋಸ್ಟರ್ ಅನಾವರಣಗೊಂಡಿತು.

ಶೀರ್ಷಿಕೆಯೇ ತಿಳಿಸುವಂತೆ ಇದೊಂದು ಕ್ರೈಮ್ ಥ್ರಿಲ್ಲರ್ ಕಥಾಹಂದರ ಹೊಂದಿರುವ ಚಿತ್ರ. ಕ್ರೈಮ್ ಥ್ರಿಲ್ಲರ್ ಚಿತ್ರಗಳು ಸಾಕಷ್ಟು ಬಂದಿದೆಯಾದರೂ, ಚಿತ್ರಕಥೆ ಬೇರೆ ರೀತಿಯಲ್ಲಿರುತ್ತದೆ. ಮುಂದಿನ ತಿಂಗಳು ಚಿತ್ರೀಕರಣ ಆರಂಭವಾಗಲಿದೆ. ಬೆಂಗಳೂರಿನಲ್ಲೇ ಹೆಚ್ಚಿನ ಭಾಗದ ಚಿತ್ರೀಕರಣ ನಡೆಯಲಿದೆ ಎಂದು ನಿರ್ದೇಶಕ ಶ್ರೀನಿವಾಸ್ ಜಯರಾಮ್ ತಿಳಿಸಿದರು. ನಿರ್ದೇಶಕರು ಹೇಳಿದ ಕಥೆ ಇಷ್ಟವಾಯಿತು. ನನ್ನ ಪಾತ್ರ ಕೂಡ ಚೆನ್ನಾಗಿದೆ. ಕನ್ನಡ ಚಿತ್ರಗಳನ್ನು ನೋಡಿ ನಟನೆ ಕಲಿತಿದ್ದೇನೆ. ಎಂದರು ನಾಯಕ!! ಕಥೆ ಹಾಗೂ ನನ್ನ ಪಾತ್ರ ಎರಡು ಚೆನ್ನಾಗಿದೆ

# 'ಹೊಸ ಜೀವನ' ಸಿನಿಮಾದ ಟೈಟಲ್ ಲಾಂಚ್

‘ತಲೆ ಬಾಚ್ಕೊಳಿ...ಪೌಡ್ರು ಹಾಕೊಳಿ...ದುನಿಯಾ ತುಂಬಾ ಕಾಸ್ಲಿ...” ಅಂತ ಡೈಲಾಗ್ ಹೊಡೆದು ಕನ್ನಡ ಚಿತ್ರರಂಗ ದಲ್ಲಿ ಏಕ್ದಂ ಸ್ಟಾರ್ ಪಟ್ಟಕ್ಕೆ ಏರಿದ ಪೋಷಕ ನಟ ರಂಗಾಯಣ ರಘು. ರಂಗಾಯಣದ ಮೂಲಕ ರಂಗಭೂಮಿ ಪ್ರವೇಶ ಮಾಡಿ ಇಂದು ಬಹುಬೇಡಿಕೆ ಪೋಷಕ ನಟನಾಗಿ ಬೆಳೆದ ಅವರೀಗ 400ನೇ ಸಿನಿಮಾದಲ್ಲಿ ಅಭಿನಯಿಸುತ್ತಿದ್ದಾರೆ.

ತಮ್ಮ ಅಮೋಘ ನಟನೆ ಮೂಲಕ ಸಿನಿಮಾಪ್ರೇಮಿಗಳನ್ನು ರಂಜಿಸಿರುವ ರಂಗಾಯಣ ರಘು ಅವರ 400ನೇ 'ಹೊಸ ಜೀವನ'. ಈ ಆಕರ್ಷಕ ಶೀರ್ಷಿಕೆ ಚಿತ್ರಕ್ಕೆ ಡಾಲಿ ಧನಂಜಯ್ ಸಾಥ್ ಕೊಟ್ಟಿದ್ದಾರೆ. ಡಾಲಿ ಧನಂಜಯ್ ಹೊಸ ಜೀವನ ಚಿತ್ರದ ಟೈಟಲ್ ಲಾಂಚ್ ಮಾಡಿ ಇಡೀ ತಂಡಕ್ಕೆ ಶುಭಾಶಯ ತಿಳಿಸಿದ್ದಾರೆ.

ಒಂದಷ್ಟು ಕಿರುಚಿತ್ರಗಳ ನಿರ್ದೇಶನ ಮಾಡಿರುವ ಮೋಹನ್ ಕುಮಾರ್ ಹನುಮಯ್ಯ ಪೂರ್ಣ ಪ್ರಮಾಣದ ನಿರ್ದೇಶಕರಾಗಿ ಬಡ್ತಿ ಹೊಂದಿದ್ದಾರೆ. ಇವರ ಸಾರಥ್ಯದಲ್ಲಿ ಮೂಡಿ ಬರುತ್ತಿರುವ ಹೊಸ ಜೀವನ ಸಿನಿಮಾದಲ್ಲಿ ರಂಗಾಯಣ ರಘು, ಪ್ರಭು ಮುಂಡ್ಕೂರ್, ಸ್ವಾತಿ ಮುಪ್ಪಾಲ, ಅಚ್ಯುತ್ ಕುಮಾರ್, ಶಿವರಾಜ್ ಕೆ ಆರ್ ಪೇಟೆ, ಸುಹಾಸ್ ಅತ್ರೆಯಸ್, ಅಭಿ ಸಾಮ್ರಾಟ್, ಉದಯ್ ಆಚಾರ್ ಪ್ರಮುಖ ಪಾತ್ರದಲ್ಲಿ ಅಭಿನಯಿಸುತ್ತಿದ್ದಾರೆ.

ಜಿ.ಎಸ್ ಸಂಜೀವ್ ಪ್ರಸಾದ್ ಚಿತ್ರಕ್ಕೆ ಬಂಡವಾಳ ಹೂಡಿದ್ದಾರೆ. ನಿರ್ದೇಶನದ ಜವಾಬ್ದಾರಿ ಹೊತ್ತುಕೊಂಡಿರುವುದರ ಹೊರತಾಗಿ ಮೋಹನ್ ಕುಮಾರ್ ಹನುಮಯ್ಯ ನಿರ್ಮಾಣದಲ್ಲಿ ಸಾಥ್ ಕೊಟ್ಟಿದ್ದಾರೆ. ಅರ್ಜುನ್ ಪ್ರೊಡಕ್ಷನ್ ಹಾಗೂ ಚಿರು ಪ್ರೊಡಕ್ಷನ್ ಒಟ್ಟಿಗೆ ಸೇರಿ ಚಿತ್ರ ನಿರ್ಮಾಣ ಮಾಡ್ತಿವೆ. ಹೊಸ ಜೀವನ ಸಿನಿಮಾಗೆ ಸುಮುಖ ರಾವ್ ಸಂಗೀತ ನಿರ್ದೇಶನ ಮಾಡಿದ್ದು, ಸುನಾದ್ ಗೌತಮ್ ಹಿನ್ನೆಲೆ ಸಂಗೀತ ಒದಗಿಸಿದ್ದು, ಸಂಕಲನದ ಜವಾಬ್ದಾರಿಯನ್ನು ಶಶಿಧರ್ ಗೌಡ ನಿಭಾಯಿಸಿದ್ದಾರೆ. ರಾಜ್ ಕಾಂತ್ ಎಸ್ ಕ್ಯಾಮೆರಾ ಹಿಡಿದಿದ್ದಾರೆ. ಪ್ರತಾಪ್ ಎಂ ಆರ್ ಸಂಭಾಷಣೆ ಬರೆದಿದ್ದಾರೆ. ಹೊಸ ಜೀವನ ಸಿನಿಮಾದಲ್ಲಿ ಸ್ನೇಹ, ಪ್ರೀತಿ, ಜೀವನದ ಹೋರಾಟ ಹಾಗೂ ಮೌಲ್ಯಗಳ ಸುತ್ತ ಕಥೆಯನ್ನು ಮೋಹನ್ ಕುಮಾರ್ ಅವರು ಎಣೆದಿದ್ದಾರೆ.



Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,